# ಇವನಮ್ಮವ.. ಇವನಮ್ಮವ ತತ್ವ ಪಾಲಿಸಿದರೆ ಭಾರತ ವಿಶ್ವಗುರು: ಗಂಗಾಂಬಿಕಾ ಅಕ್ಕ



ಬೀದರ. ಸೆ. 03: 'ಇವನಾರವ.. ಇವನಾರವ ಎನ್ನದೇ, ಇವನಮ್ಮವ.. ಇವನಮ್ಮವ' ಎಂಬ ಬಸವಣ್ಣನವರ ತತ್ವ–ಸಂದೇಶಗಳನ್ನು ಜಗತ್ತಿಗೆ ಅರ್ಥೈಸಿ, ಅನುಷ್ಠಾನಕ್ಕೆ ತಂದರೆ ಭಾರತ ವಿಶ್ವಗುರು ಆಗುತ್ತದೆ'

ಲಿಂಗಾಯತ ಮಠಾಧಿಪತಿಗಳ ಒಕ್ಕೂಟ,ಬಸವ ಸಂಸ್ಕೃತಿ ಅಭಿಯಾನ ಸಮಿತಿಯ ಸಹಯೋಗದಲ್ಲಿ ಬಸವ ಸಂಸ್ಕೃತಿ ಅಭಿಯಾನದ ಅಂಗವಾಗಿ ನಗರದ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಬುಧವಾರ ಏರ್ಪಡಿಸಿದ್ದ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರೊಂದಿಗಿನ ವಚನ ಸಂವಾದ ಕಾರ್ಯಕ್ರಮದಲ್ಲಿ ಬಸವಶ್ರೀ ಎಂಬ ವಿದ್ಯಾರ್ಥಿನಿಯ ಪ್ರಶ್ನೆಗೆ ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷೆಗಂಗಾಂಬಿಕಾ ಅಕ್ಕಮೇಲಿನಂತೆ ಉತ್ತರಿಸಿದರು.

ಸಂವಾದದಲ್ಲಿ ಪ್ರಶ್ನೆಗಳಿಗೆ ನಾಡಿನ ವಿವಿಧ ಮಠಗಳ ಸ್ವಾಮೀಜಿಗಳು ಉತ್ತರಿಸಿದ್ದಾರೆ. ಕೆಲ ಆಯ್ದ ಪ್ರಶ್ನೋತ್ತರಗಳ ವಿವರ ಇಲ್ಲಿದೆ:

ಪ್ರಶ್ನೆ: ಸಾತ್ವಿಕ ಸಮಾಜ ಕಟ್ಟಲು ಶರಣರಸಂದೇಶವೇನು?–ಸೌಂದರ್ಯ ರಗಟೆ, ವಿದ್ಯಾರ್ಥಿನಿ.

ಡಂಬಳ–ಗದಗ ಯಡೆ–ಯೂರು ತೋಂಟದಾರ್ಯ ಮಠದ ತೋಂಟದ ಸಿದ್ದರಾಮ ಸ್ವಾಮೀಜಿ ಉತ್ತರ–ಸಮಾಜದಲ್ಲಿ ಸಮಾನತೆ ಮೂಡಿ, ಎಲ್ಲರೂ ಶಾಂತಿ ಸೌಹಾರ್ದದಿಂದ ಬದುಕು ಸಾಗಿಸಬೇಕು. ದುರಾಚಾರಿಗಳು, ವ್ಯಸನಿಗಳು ಇರಬಾರದು. ಆಗ ಸಾತ್ವಿಕ ಸಮಾಜ ರೂಪುಗೊಳ್ಳುತ್ತದೆ. ಶರಣರ ಆಶಯವೂ ಇದೆ.

ಪ್ರಶ್ನೆ:ಚಂಚಲತೆ ಹೋಗಿ ಏಕಾಗ್ರತೆಗೆ ಏನು ಮಾಡಬೇಕು?–ಭಾಗ್ಯವಂತಿ, ವಿದ್ಯಾರ್ಥಿನಿ.

ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಉತ್ತರ–ನಿತ್ಯ ಧ್ಯಾನ, ಯೋಗ, ಲಿಂಗಪೂಜೆ, ವಚನ ಪಠಣ ಮಾಡಿದರೆ ಚಂಚಲತೆ ಹೋಗುತ್ತದೆ. ಏಕಾಗ್ರತೆ ಮೂಡುತ್ತದೆ.

ಪ್ರಶ್ನೆ: ಕರ್ನಾಟಕದ ಎಲ್ಲ ಮಠಗಳಲ್ಲಿ ಒಂದೇ ರೀತಿಯ ಪೂಜೆ, ಪ್ರಾರ್ಥನೆ ಏಕಿಲ್ಲ?–ಗಣಪತಿ ಬಿರಾದಾರ, ಸ್ಥಳೀಯ ನಿವಾಸಿ.

ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಉತ್ತರ–ರಾಜ್ಯದಲ್ಲಿರುವ ಬಸವ ಪರಂಪರೆಯ ಎಲ್ಲ ಮಠಗಳಲ್ಲಿ ಒಂದೇ ರೀತಿಯ ಪೂಜೆ, ಪ್ರಾರ್ಥನೆ ನಡೆಯುತ್ತದೆ.

ಪ್ರಶ್ನೆ: ಕರ್ನಾಟಕದ ಪಠ್ಯಕ್ರಮದಲ್ಲಿ ಬಸವಾದಿ ಶರಣರ ಕುರಿತ ಪಠ್ಯಗಳಿವೆ. ಸಿಬಿಎಸ್‌ಇ ಪಠ್ಯದಲ್ಲಿ ಏಕೆ ಸೇರಿಸಿಲ್ಲ?–ಸಂತೋಷ್, ವಿದ್ಯಾರ್ಥಿನಿ

ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಉತ್ತರ– ನೀವು ಹೇಳಿದಂತೆ ಕರ್ನಾಟಕದ ಪಠ್ಯಕ್ರಮದಲ್ಲಿ ಬಸವಾದಿ ಶರಣರ ಬಗ್ಗೆ ಪಾಠಗಳಿವೆ. ಸಿಬಿಎಸ್‌ಇ ಪಠ್ಯಕ್ರಮದಲ್ಲಿ ಇಲ್ಲ. ಅದರಲ್ಲೂ ಸೇರಿಸಬೇಕೆಂದು ಎಲ್ಲ ಮಠಾಧಿಪತಿಗಳು ಒತ್ತಡ ಹಾಕುತ್ತೇವೆ. ಈ ನಿಟ್ಟಿನಲ್ಲಿ ಪ್ರಯತ್ನಿಸುತ್ತೇವೆ.

ಪ್ರಶ್ನೆ: 12ನೇ ಶತಮಾನದಲ್ಲಿ ಲಕ್ಷ ಶರಣರಿಗೆ ಪ್ರಸಾದ ವ್ಯವಸ್ಥೆ ಮಾಡುತ್ತಿದ್ದರಂತೆ. ಅದು ಹೇಗೆ ಸಾಧ್ಯವಾಗಿತ್ತು?–ರೂಪಾಲಿ ವಿದ್ಯಾರ್ಥಿನಿ

ಸಾಣೇಹಳ್ಳಿಯ ತರಳಬಾಳು ಸಂಸ್ಥಾನ ಮಠದ ಪಂಡಿತಾರಾಧ್ಯ ಶಿವಾಚಾರ್ಯರು ಉತ್ತರ–12ನೇ ಶತಮಾನದ ಕಲ್ಯಾಣದಲ್ಲಿ ಪ್ರತಿಯೊಂದು ಮನೆ ಕೂಡ ದಾಸೋಹದ ಮನೆ ಆಗಿತ್ತು. ಕಾಯಕ ಮಾಡಿದ ನಂತರ ಎಲ್ಲರ ಮನೆಯೊಳಗೆ ದಾಸೋಹ ನಡೆಯುತ್ತಿತ್ತು. ಹೀಗಾಗಿಯೇ ಅಪಾರ ಸಂಖ್ಯೆಯ ಶರಣರೆಲ್ಲರಿಗೂ ಪ್ರಸಾದ ವ್ಯವಸ್ಥೆ ಮಾಡಲು ಸಾಧ್ಯವಾಗಿತ್ತು.

ಪ್ರಶ್ನೆ: ಸಮಾಜದಲ್ಲಿ ನೈತಿಕ ಮೌಲ್ಯ ಹೆಚ್ಚಿಸಲು ಏನು ಮಾಡಬೇಕು?–ಮೇಧಾ ವಿದ್ಯಾರ್ಥಿನಿ.

ಸಾಣೇಹಳ್ಳಿಯ ತರಳಬಾಳು ಸಂಸ್ಥಾನ ಮಠದ ಪಂಡಿತಾರಾಧ್ಯ ಶಿವಾಚಾರ್ಯರು–ಪ್ರತಿಯೊಬ್ಬರೂ ನೈತಿಕ ಮಾರ್ಗದಲ್ಲಿ ನಡೆದರೆ ಸಮಾಜದ ನೈತಿಕ ಮೌಲ್ಯ ಹೆಚ್ಚಾಗುತ್ತದೆ.

ಪ್ರಶ್ನೆ: ಬಸವಣ್ಣನವರನ್ನೇಕೆ ಕರ್ನಾಟಕದ ಸಾಂಸ್ಕೃತಿಕ ನಾಯಕನಾಗಿ ಘೋಷಿಸಿದರು?–ಕಾವ್ಯ ವಿದ್ಯಾರ್ಥಿನಿ

ಸಾಣೇಹಳ್ಳಿಯ ತರಳಬಾಳು ಸಂಸ್ಥಾನ ಮಠದ ಪಂಡಿತಾರಾಧ್ಯ ಶಿವಾಚಾರ್ಯರು ಉತ್ತರ–ಬಸವಣ್ಣನವರು ಸಮಗ್ರ ಕ್ರಾಂತಿಯ ಹರಿಕಾರರು. ಸಾಮಾಜಿಕ, ಆಧ್ಯಾತ್ಮಿಕ, ನೈತಿಕ, ಆರ್ಥಿಕ ಕ್ರಾಂತಿ ಮಾಡಿದ್ದಾರೆ. ಸಮ ಸಮಾಜ ಕಟ್ಟಲು ದೊಡ್ಡ ಕ್ರಾಂತಿ ನಡೆಸಿ ಬದಲಾವಣೆ ತಂದಿದ್ದಾರೆ. ಅವರಂತಹ ವ್ಯಕ್ತಿತ್ವ ಬೇರೊಂದಿಲ್ಲ. ಹೀಗಾಗಿಯೇ ರಾಜ್ಯ ಸರ್ಕಾರ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕನಾಗಿ ಘೋಷಿಸಿದೆ.

ಪ್ರಶ್ನೆ: ಜಗತ್ತಿನಲ್ಲಿ ಯುದ್ಧ ತಡೆಯಲು ಏನು ಮಾಡಬೇಕು?–ವಿಜಯಕುಮಾರ್, ವಿದ್ಯಾರ್ಥಿ.

ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು–ಬಸವಾದಿ ಶರಣ–ರು ರಚಿಸಿದ ವಚನಗಳನ್ನು ಇಡೀ ಜಗತ್ತಿಗೆ ಅರ್ಥೈಸಿದರೆ ಎಲ್ಲೂ ಕೂಡ ಯುದ್ಧಗಳು ನಡೆಯುವುದಿಲ್ಲ. ಬಸವಣ್ಣನವರು ಪ್ರಧಾನಿ ಇದ್ದಾಗ ಒಂದು ಕೂಡ ಯುದ್ಧ ಆಗಿರಲಿಲ್ಲ ಎಂಬುದನ್ನು ನೆನಪಿನಲ್ಲಿಡಬೇಕು.

ಪ್ರಶ್ನೆ: 12ನೇ ಶತಮಾನದಲ್ಲಿ ಬಸವಣ್ಣನವರಿಗೆ ಆಕರ್ಷಿತರಾಗಿ ವಿವಿಧ ರಾಷ್ಟ್ರಗಳಿಂದ ಬಂದಿದ್ದ ರಾಜ–ಮಹಾರಾಜರು ಕನ್ನಡದಲ್ಲೇಕೆ ವಚನ ರಚಿಸಿದರು. ಅವರ ಭಾಷೆಯಲ್ಲೇಕೆ ರಚಿಸಲಿಲ್ಲ–ನೇಹಾ ವಿದ್ಯಾರ್ಥಿನಿ.

ಸಾಣೇಹಳ್ಳಿಯ ತರಳಬಾಳು ಸಂಸ್ಥಾನ ಮಠದ ಪಂಡಿತಾರಾಧ್ಯ ಶಿವಾಚಾರ್ಯರು ಉತ್ತರ–ವಿವಿಧ ರಾಜ್ಯ–ದೇಶಗಳಿಂದ ರಾಜರುಗಳು ಕಲ್ಯಾಣಕ್ಕೆ ಬಂದದ್ದು ಅವರ ಬದುಕು ಬದಲಿಸಿಕೊಳ್ಳಲು, ಎತ್ತರಕ್ಕೆ ಕೊಂಡೊಯ್ಯಲು ಹೊರತು ಅವರ ಪ್ರಜೆಗಳಿಗೆ ಅರ್ಥೈಸಲು ಅಲ್ಲ. ಹೀಗಾಗಿಯೇ ಅವರು ಕನ್ನಡದಲ್ಲಿ ವಚನಗಳನ್ನು ರಚಿಸಿದರು.

ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು, ಬೈಲೂರು–ಮುಂಡರಗಿ ನಿಷ್ಕಲ ಮಂಟಪದ ನಿಜಗುಣಪ್ರಭು ಸ್ವಾಮೀಜಿ, ಡಂಬಳ–ಗದಗ ಯಡೆ–ಯೂರು ತೋಂಟದಾರ್ಯ ಮಠದ ತೋಂಟದ ಸಿದ್ದರಾಮ ಸ್ವಾಮೀಜಿ, ಸಾಣೇಹಳ್ಳಿಯ ತರಳಬಾಳು ಸಂಸ್ಥಾನ ಮಠದ ಪಂಡಿತಾರಾಧ್ಯ ಶಿವಾಚಾರ್ಯರು, ಹುಲಸೂರಿನ ಗುರುಬಸವೇಶ್ವರ ಸಂಸ್ಥಾನ ಮಠದ ಶಿವಾನಂದ ಸ್ವಾಮೀಜಿ, ಬೆಳಗಾವಿ ನಾಗನೂರು ರುದ್ರಾಕ್ಷಿ ಮಠದ ಅಲ್ಲಮಪ್ರಭು ಸ್ವಾಮೀಜಿ, ಅಥಣಿ ಮೋಟಗಿ ಮಠದ ಪ್ರಭುಚನ್ನಬಸವ ಸ್ವಾಮೀಜಿ, ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು, ಬಸವ ಸಂಸ್ಕೃತಿ ಅಭಿಯಾನದ ಅಧ್ಯಕ್ಷ ಬಸವರಾಜ ಧನ್ನೂರ, ಕರಾಶಿ ಸಂಸ್ಥೆ ಟ್ರಸ್ಟ್ ಅಧ್ಯಕ್ಷ ಬಸವರಾಜ ಪಾಟೀಲ ಅಷ್ಟೂರ ಅವರು ವಚನ ರ್ಯಕ್ರಮ ಉದ್ಘಾಟಿಸಿದರು. ಹೈಕಶಿ ಸಂಸ್ಥೆ ಆಡಳಿತ ಮಂಡಳಿ ಸದಸ್ಯ ಡಾ. ರಜನೀಶ ವಾಲಿ, ಮುಖಂಡ ಬಸವರಾಜ ಬುಳ್ಳಾ ಮತ್ತಿತರರು ಇದ್ದರು. ನೃತ್ಯಾಂಗನ ತಂಡದ ಕಲಾವಿದರು ವಚನ ನೃತ್ಯ ಪ್ರಸ್ತುತಪಡಿಸಿದರು.

'ಬಸವ ಸಂಸ್ಕೃತಿ ಬಿತ್ತಲು ಸಂವಾದ'

'ಬಸವ ಸಂಸ್ಕೃತಿಯ ನಿಜವಾದ ವಾರಸುದಾರರು ಭಾವಿ ಪ್ರಜೆಗಳಾದ ಈ ದೇಶದ ಮಕ್ಕಳು.

ಅವರಲ್ಲಿ ಬಸವ ಸಂಸ್ಕೃತಿ ಬಿತ್ತುವ ಉದ್ದೇಶದಿಂದ ಈ ಅಭಿಯಾನ, ಸಂವಾದ ಹಮ್ಮಿಕೊಳ್ಳಲಾಗಿದೆ' ಎಂದು ಬೈಲೂರು–ಮುಂಡರಗಿ ನಿಷ್ಕಲ ಮಂಟಪದ ನಿಜಗುಣಪ್ರಭು ಸ್ವಾಮೀಜಿ ತಿಳಿಸಿದರು.

ಇಡೀ ಜಗತ್ತಿಗೆ ಸಮಾನತೆ ತತ್ವ ಕೊಟ್ಟ ನೆಲ ಬೀದರ್ ಜಿಲ್ಲೆ. 12ನೇ ಶತಮಾನದ ಬಸವಾದಿ ಶರಣರ ಶ್ರೇಷ್ಠ ವಿಚಾರಗಳು, ಬಸವ ಸಂಸ್ಕೃತಿ ಹಾಗೂ ಈ ದೇಶದ ಬಹುಸಂಸ್ಕೃತಿಯನ್ನು ಪರಿಚಯಿಸುವುದು ನಮ್ಮೆಲ್ಲರ ಉದ್ದೇಶವಾಗಿದೆ ಎಂದರು.

'ಸಮಾನತೆಯ ಸಮಾಜ ಅಗತ್ಯ'

'12ನೇ ಶತಮಾನದ ಬಸವಾದಿ ಶರಣರು ಸಮಾನತೆಯಿಂದ ಕೂಡಿರುವ ಸಮ ಸಮಾಜಕ್ಕಾಗಿ ಅವಿರತ ಶ್ರಮಿಸಿದ್ದರು.

# ಪಿಡಿಓ ಕೌನ್ಸೆಲಿಂಗ್ ವರ್ಗಾವಣೆಗೆ ಚಾಲನೆ ಪಂಚಾಯತ್ ರಾಜ್ ಇಲಾಖೆಯಲ್ಲಿ ಚರಿತ್ರಾರ್ಹ ದಿನ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಸೆ.3:ಗ್ರಾಮಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಪ್ರಮುಖ ಬೇಡಿಕೆಯಾಗಿದ್ದ ಕೌನ್ಸೆಲಿಂಗ್ ವರ್ಗಾವಣೆಗಳನ್ನು ಜಾರಿಗೆ ತರಲಾಗಿದ್ದು, ಪಿಡಿಒಗಳು ಗ್ರಾಮಗಳ ಅಭಿವೃದ್ಧಿಯತ್ತ ಆದ್ಯತೆ ನೀಡಿ ಕಾರ್ಯನಿರ್ವಹಿಸುವಲ್ಲಿ ಕಂಕಣಬದ್ಧರಾಗಬೇಕಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವರ್ಗಾವಣೆಯನ್ನು ಪಾರದರ್ಶಕವಾಗಿ ಕೌನ್ಸೆಲಿಂಗ್ ಮೂಲಕ ನಡೆಸುವ ಪ್ರಕ್ರಿಯೆಗೆ ಚಾಲನೆ ನೀಡಿದ ಸಚಿವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪುಟಗಳಲ್ಲಿ ಚರಿತ್ರಾರ್ಹ ದಿನ ಇಂದಾಗಿದೆ, ತಮ್ಮ ಇಚ್ಛೆಗೆ ಅನುಸಾರವಾಗಿ ವರ್ಗಾವಣೆಗಳನ್ನು ಸ್ವಯಂ ನಿರ್ಧರಿಸುವ ಅವಕಾಶವನ್ನು ಕಲ್ಪಿಸಿಕೊಡುವ ಮೂಲಕ ಇಲಾಖೆಯಲ್ಲಿ ಮಹತ್ತರ ಬದಲಾವಣೆ ತರಲಾಗಿದೆ, ಸ್ಥಳೀಯ ಸರ್ಕಾರಗಳಾಗಿ ಕೆಲಸ ಮಾಡುತ್ತಿರುವ ಪಂಚಾಯತ್ ವ್ಯವಸ್ಥೆಯನ್ನು ಸದೃಢಗೊಳಿಸಲು ಪಿಡಿಒಗಳು ಪಣತೊಡಬೇಕು ಎಂದು ಹೇಳಿದರು. ನೌಕರರು ಹೊಂದಾಣಿಕೆ ಮಾಡಿಕೊಂಡಲ್ಲಿ ಪಿಡಿಒಗಳ ಜೇಷ್ಠಾತ ಪಟ್ಟಿಯನ್ನು ಅಂತಿಮಗೊಳಿಸಿ ಬೇಡಿಕೆಯನ್ನು ಈಡೇರಿಸಲಾಗುವುದೆಂದು ಸಚಿವರು ಈ ಸಂದರ್ಭದಲ್ಲಿ ಹೇಳಿದರು.

ಇಂದಿನಿಂದ ಈ ತಿಂಗಳ 08ರವರೆಗೆ ವಿಶೇಷ ಪ್ರಕರಣಗಳ (ವಿಶೇಷಚೇತನರು, ಗಂಭೀರ ಅನಾರೋಗ್ಯ ಹಾಗೂ ಪತಿ–ಪತ್ನಿ ಪ್ರಕರಣಗಳು) ಮೊದಲ ಸುತ್ತಿನ ಕೌನ್ಸಿಲಿಂಗ್ ಆರಂಭಗೊಂಡಿದ್ದು ನೌಕರರು ಆಯ್ಕೆ ಮಾಡಿಕೊಂಡ ಸ್ಥಳಕ್ಕೆ ವರ್ಗಾವಣೆಯ ಆದೇಶವನ್ನು ಎರಡು ನಿಮಿಷಗಳ ಅವಧಿಯಲ್ಲಿ ಸಚಿವರು ಹಾಗೂ ಅಧಿಕಾರಿಗಳು ಕೆಲವು ನೌಕರರಿಗೆ ವಿತರಿಸಿದರು.

ಸೆಪ್ಟೆಂಬರ್ 10ರಿಂದ

ಸೆಪ್ಟೆಂಬರ್ 20 ರವರೆಗೆ ಕಡ್ಡಾಯ ವರ್ಗಾವಣೆ ಕೌನ್ಸಿಲಿಂಗ್ ಹಾಗೂ ಸೆಪ್ಟೆಂಬರ್ 23 ಹಾಗೂ 24ರಂದು ಸಾಮಾನ್ಯ ಕೋರಿಕೆ ವರ್ಗಾವಣೆಗಳ ಕೌನ್ಸಿಲಿಂಗ್ ಪ್ರಕ್ರಿಯೆಗಳು ಜರುಗಲಿವೆ. ಪ್ರಸಕ್ತ ಸಾಲಿನಲ್ಲಿ

ಒಂದು ಬಾರಿಗೆ ಅನ್ವಯಿಸುವಂತೆ ಒಂದೇ ಸ್ಥಳದಲ್ಲಿ 5 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

ಕಾರ್ಯಕ್ರಮದಲ್ಲಿ ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರಣದೀಪ್, ಪಂಚಾಯತ್ ರಾಜ್ ಆಯುಕ್ತಾಲಯದ

ಆಯುಕ್ತೆ ಡಾ. ಅರುಂಧತಿ ಚಂದ್ರಶೇಖರ್ ಹಾಗೂ ಅಧಿಕಾರಿಗಳು ಪಾಲ್ಗೊಂಡಿದ್ದರು. ಪಿಡಿಒಗಳು ಅತ್ಯುತ್ಸಾಹದಿಂದ ಭಾಗವಹಿಸಿದ್ದರು.

# ಯುವಕರು ದುಶ್ಚಟಗಳಿಗೆ ಬಲಿಯಾಗದಂತೆ ಕರೆ: ನ್ಯಾಯಾಧೀಶ ಚಂದ್ರಶೇಖರ ಸಿ.



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಸೆ.3: ಇಂದಿನ ದಿನ ಮಾನದಲ್ಲಿ ಯುವಕರು ದುಶ್ಚಟಗಳಿಗೆ ಬಲಿಯಾಗದೇ ಕಿನ್ನಾಳ ಗ್ರಾಮದ ಯುವಕರಂತೆ ಮಾದರಿಯಾಗಬೇಕೆಂದು ಜಿಲ್ಲಾ ಪ್ರಧಾನ ಹಾಗು ಸತ್ರ ನ್ಯಾಯಾಧೀಶರಾಧ ಚಂದ್ರಶೇಖರ ಸಿ ಕರೆ ನೀಡಿದರು. ಕಿನ್ನಾಳ ಗ್ರಾಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗು ಕಿನ್ನಾಳ ಗ್ರಾಮ ಪಂಚಾಯತಿ ಮತ್ತು ಅಲ್ಟ್ರಾಟ್ರೆಕ್ ಸಿಮೆಂಟ್ ಕಂಪನಿ, ಕಲ್ಯಾಣಿ ಸ್ಟೀಲ್ ಕಂಪನಿ ವತಿಯಿಂದ ಆಯೋಜಿಸಿದ್ದ ಕಿನ್ನಾಳ ಗ್ರಾಮದ ಅಂಗನವಾಡಿಗಳಿಗೆ ಪೀಠೋಪಕರಣಗಳ ವಿತರಣೆ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದರು.ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಉತ್ತಮ ಶಿಕ್ಷಣ ಒದಗಿಸುವಲ್ಲಿ ಪಾಲಕರ ಜವಾಬ್ದಾರಿಯಾಗಿದ್ದು ಅವರ ನಡೆ ನುಡಿ ಮತ್ತು ಕಾರ್ಯಚಟುವಟಿಕೆಗಳ ಬಗ್ಗೆ ಗಮನಹರಿಸಬೇಕೆಂದರು. ಕಿನ್ನಾಳ ಗ್ರಾಮದ ಯುವಕರ ಒಂದು ನಿರ್ಧಾರದಿಂದ ಗ್ರಾಮದ ಚಿತ್ರಣ ಬದಲಿಸಬಹುದೆಂಬ ಒಂದು ಉತ್ತಮ ನಿರ್ದಶನವಾಗಿದೆ ಎಂದರು. ಅನೇಕ ಇಲಾಖೆಗಳ ಸಹಯೋಗದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತಹ ಅದಾಲತ್ ಜರುಗಿಸಿ ಗ್ರಾಮವು ಅಭಿವೃದ್ಧಿಯತ್ತ ಮುನ್ನುಗ್ಗುತ್ತಿದ್ದು ಕೆಲವೇ ದಿನಗಳಲ್ಲಿ ಕೊಪ್ಪಳ ಜಿಲ್ಲೆಗೆ ಮಾದರಿ ಗ್ರಾಮವಾಗುವದರಲ್ಲಿ ಸಂದೇಹವಿಲ್ಲ ಎಂದರು. ಗ್ರಾಮದ ಅನೇಕ ಅಂಗನವಾಡಿಗಳಿಗೆ ಭೇಟಿ ನೀಡಿದಾಗ ಮಕ್ಕಳಿಗೆ ಪೀಠೋಪಕರಣಗಳು ಅವಶ್ಯವಿರುವ ಕುರಿತು ಅಲ್ಲಿನ ಮೇಲ್ವಿಚಾರಕರು ಗಮನಕ್ಕೆ ತಂದರು. ಕಾರ್ಪೋರೆಟ್ ಸಮುದಾಯ ನಿಧಿಯಿಂದ ಮಕ್ಕಳಿಗೆ ಪೀಠೋಪಕರಣಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದಾಗ ಕಂಪನಿಯಿಂದ ಉತ್ತಮ ಸ್ಪಂದನೆ ದೊರೆತ ಫಲವಾಗಿ ಗ್ರಾಮದ ಎಲ್ಲಾ ಅಂಗನವಾಡಿ ಮಕ್ಕಳಿಗೆ ಅನುಕೂಲವಾಯಿತು ಎಂದು ಖುಷಿ ವ್ಯಕ್ತಪಡಿಸಿದರು. ಜಿಲ್ಲಾಧಿಕಾರಿ ಡಾ. ಸುರೇಶ ಬಿ ಇಟ್ನಾಳ್ ಮಾತನಾಡಿ ಗ್ರಾಮದ ಅಭಿವೃದ್ಧಿ ಯಾಗಬೇಕಾದರೆ ಕೇವಲ ಅಧಿಕಾರಿಗಳಿಂದ ಸಾಧ್ಯವಿಲ್ಲ ಗ್ರಾಮಸ್ಥರು,ಯುವಕರು ಮತ್ತು ಆಡಳಿತ ಮಂಡಳಿಯ ಸಹಯೋಗದಿಂದ ಗ್ರಾಮದ ಚಿತ್ರಣವನ್ನು ಬದಲಿಸಬಹುದು. ಅಂಗನವಾಡಿ ಮಕ್ಕಳಿಗೆ ಪಿಠೋಪಕರಣಗಳನ್ನು ವಿತರಿಸಿರುವದು ಮಕ್ಕಳಿಗೆ ಅನುಕೂಲವಾಗಲಿದೆ ಎಂದರು. ಜಿಲ್ಲಾ ನ್ಯಾಯಾಧೀಶರು ಕಿನ್ನಾಳ ಗ್ರಾಮದ ದತ್ತು ತೆಗೆದುಕೊಂಡಿರುವಂತೆ ಮುಂದಿನ ದಿನದಲ್ಲಿ ಬೇರೊಂದು ಗ್ರಾಮವನ್ನು ದತ್ತು ಪಡೆದು ಅಭಿವೃದ್ಧಿಪಡಿಸುವಂತೆ ಕರೆ ನೀಡಿದರು. ಜಿಲ್ಲಾಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಮಾತನಾಡಿ ಗ್ರಾಮಕ್ಕೆ ಅವಶ್ಯವಿರುವ ಕೆಲಸಗಳನ್ನು ಇಲಾಖೆಯಿಂದ ಒದಗಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವದು ಎಂದರು. ಮಹಾತ್ಮಾ ನರೇಗಾ ಯೋಜನೆಯಡಿ ಗ್ರಾಮಕ್ಕೆ ಚರಂಡಿ, ಸಿಸಿ ರಸ್ತೆ, ಶಾಲಾಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಿಸಲು ರೂ.1.55 ಕೋಟಿ ಕ್ರಿಯಾ ಯೋಜನೆ ಅನುಮೋದಿಸಿದ್ದು ಎಲ್ಲಾ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು.ಇದೇ ಸಂದರ್ಭದಲ್ಲಿ 12 ಅಂಗನವಾಡಿ ಕೇಂದ್ರ ಹಾಗು ಕುವೆಂಪು ಶಾಲೆಯ ಎಲ್ ಕೆ ಜಿ ಹಾಗು ಯುಕೆಜಿ ಮಕ್ಕಳಿಗೆ ಕಾರ್ಪೋರೆಟ್ ಸಮುದಾಯ ನಿಧಿಯಿಂದ ಪಿಠೋಪಕರಣಳಾದ ಚೇರ್, ಟೆಬಲ್, ಶುದ್ಧ ಕುಡಿಯುವ ನೀರಿನ ಘಟಕ ಕಲ್ಯಾಣಿ ಸ್ಟೀಲ್ಸ್, ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯವರನ್ನು ಸನ್ಮಾನಿಸಲಾಯಿತು. ಪಂಚಾಯತ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ತೆಳಗಡೆಮಠ ಕಾರ್ಯಕ್ರಮ ನಿರ್ವಹಿಸಿದರು. ಕಾರ್ಯಕ್ರಮದ ವಂದನಾರ್ಪಣೆಯನ್ನು ಹಿರಿಯ ಶ್ರೇಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್ ದರಗದ ನಿರ್ವಹಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಶ್ರೇಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್ ದರಗದ, ಗ್ರಾಮ ಪಂಚಾಯತ ಅಧ್ಯ–ಕ್ಷೆ ಶ್ವೇತಾ ರಾಘವೇಂದ್ರ ಡಂಬಳ, ಉಪಾಧ್ಯಕ್ಷ ದುರಗಪ್ಪ ಡಂಬರ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿ ಹರಿಶಂಕರ್, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ ಕೊಟಗಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ತೆಳಗಡೆಮಠ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ ತಾಜುದ್ದಿನ್, ಗ್ರಾಮ ಪಂಚಾಯತ ಆಡಳಿತ ಮಂಡಳಿಯ ಎಲ್ಲಾ ಸದಸ್ಯರು ಶಾಲಾ ಮತ್ತು ಅಂಗನವಾಡಿ ಮಕ್ಕಳು, ಅಂಗನವಾಡಿ ಕಾರ್ಯಕರ್ತೆಯರು ಶಾಲಾ ಮುಖ್ಯೋಪಾಧ್ಯಾಯರು, ಗ್ರಾಮಸ್ಥರು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಕಾಕನೂರ ಎಸ್‌ಬಿಐ ಶಾಖೆಯಲ್ಲಿ ಕಳ್ಳತನ ಅಂದಾಜು 13 ಲಕ್ಷ ರೂ.ದೋಚಿದ ಕಳ್ಳರು!



ಮಲ್ಲಮ್ಮನುಡಿವಾರ್ತೆಬಾಗಲಕೋಟೆ,ಸೆ.3– ಜಿಲ್ಲೆಯ ಬಾದಾಮಿ ತಾಲೂಕಿನ ಕಾಕನೂರ ಗ್ರಾಮದ ಭಾರತೀಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯಲ್ಲಿ ಮಂಗಳವಾರ ರಾತ್ರಿ ಕಳ್ಳತನ ನಡೆದಿದ್ದು, 13 ಲಕ್ಷ ರೂ. ಕಳ್ಳತನವಾಗಿರುವ ಅಂದಾಜಿದೆ. ಪ್ರಾಥಮಿಕ ತನಿಖೆಯ ಪ್ರಕಾರ ಇದೊಂದು ವೃತ್ತಿಪರ ಕಳ್ಳರ ತಂಡದ ಕೆಲಸ ಎಂದು ತಿಳಿದುಬಂದಿದೆ. ಕಳ್ಳರು ಹಿಂಭಾಗದಿಂದ ಬ್ಯಾಂಕ್ಗೆ ನುಗ್ಗಿದ್ದು, ಸಿಸಿಟಿವಿ ಕ್ಯಾಮರಾಗಳಿಗೆ ಬಣ್ಣ ಬಳಿದಿದ್ದಾರೆ. ನಂತರ ಗ್ಯಾಸ್ ಕಟ್ಟರ್ ಬಳಸಿ ಲಾಕರ್ಗಳನ್ನು ಒಡೆಯಲು ಯತ್ನಿಸಿದ್ದಾರೆ. ಮೂರು ಲಾಕರ್ಗಳಲ್ಲಿ ಒಂದು ಲಾಕರ್ ತೆರೆಯುವಲ್ಲಿ ಕಳ್ಳರಿಗೆ ಸಾಧ್ಯವಾಗಿದ್ದು, ಉಳಿದ ಎರಡು ಲಾಕರ್ಗಳು ಹಾಗೆಯೇ ಇವೆ. ಮಾಹಿತಿ ತಿಳಿದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಹೆಚ್ಚುವರಿ ಅಧೀಕ್ಷಕರು, ಡಿವೈಎಸ್ ಪಿ, ಸಿಪಿಐ ಮತ್ತು ಪಿಎಸ್ಐ ಸೇರಿದಂತೆ ಹಿರಿಯ ಅಧಿಕಾರಿಗಳು ಕಾಕನೂರಿಗೆ ಭೇಟಿ ನೀಡಿದ್ದು, ಸ್ಥಳಕ್ಕೆ ಶ್ವಾನದಳ ಮತ್ತು ಬೆರಳಚ್ಚು ತಜ್ಞರು ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲು ಮತ್ತು ಈ ರೀತಿಯ ಕೃತ್ಯಗಳಲ್ಲಿ ಭಾಗಿಯಾದ ಶಂಕಿತರನ್ನು ಪತ್ತೆಹಚ್ಚಲು ಹಲವು ಪೊಲೀಸ್ ತಂಡಗಳನ್ನು ರಚಿಸಲಾಗಿದೆ. ಬ್ಯಾಂಕಿನ ಅಲಾರಾಂ ವ್ಯವಸ್ಥೆ ಮತ್ತು ಸಂಬಂಧಿತ ಕಾರ್ಯವಿಧಾನಗಳ ಕುರಿತು ಪರಿಶೀಲಿಸಲು ಪೊಲೀಸರು ಬ್ಯಾಂಕ್ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುತ್ತಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಸಧ್ಯಕ್ಕೆ ಎಫ್ಐಆರ್ ದಾಖಲಿಸಲಾಗಿದ್ದು, ಎಲ್ಲಾ ತಾಂತ್ರಿಕ ಹಾಗೂ ವೈಜ್ಞಾನಿಕ ಪುರಾವೆಗಳನ್ನು ಸಂಗ್ರಹಿಸಲಾಗುತ್ತಿದೆ. ಪ್ರಕರಣವನ್ನು ಶೀಘ್ರದಲ್ಲೇ ಭೇದಿಸುವುದಾಗಿ ಪೊಲೀಸರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ಸಾಹಿತಿ ಎಸ್.ಎಂ.ಹಿರೇಮಠ ರಿಗೆ 'ಶ್ರೀಚೆನ್ನರೇಣುಕ ಬಸವ' ಪ್ರಶಸ್ತಿ





ಬೀದರ. ಸೆ. 03: ಬಸವಕಲ್ಯಾಣ ಸಾಹಿತಿ ಹಾಗೂ ನಿವೃತ್ತ ಪ್ರಾಧ್ಯಾಪಕ ಕಲಬುರಗಿಯ ಎಸ್.ಎಂ.ಹಿರೇಮಠ ಅವರು ಹಾರಕೂಡ ಹಿರೇಮಠ ಸಂಸ್ಥಾನದ ಪ್ರಸಕ್ತ ಸಾಲಿನ 'ಶ್ರೀಚೆನ್ನರೇಣುಕ ಬಸವ' ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿಯು 1 ಲಕ್ಷ ನಗದು, ಎರಡು ತೊಲೆ ಚಿನ್ನದ ಪದಕ ಮತ್ತು ಫಲಕ ಒಳಗೊಂಡಿದೆ.

'ಎಸ್.ಎಂ.ಹಿರೇಮಠ ಅವರು 300ಕ್ಕೂ ಅಧಿಕ ಗ್ರಂಥ ರಚಿಸಿದ್ದಾರೆ. ಇವರು ಸಾಹಿತ್ಯ, ಶಿಕ್ಷಣ ಮತ್ತು ಸಂಶೋಧನಾ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಪರಿಗಣಿಸಿ ಪ್ರಶಸ್ತಿ ನೀಡಲಾಗುತ್ತಿದೆ' ಎಂದು ಹಿರೇಮಠದ ಪೀಠಾಧಿಪತಿ ಚನ್ನವೀರ ಶಿವಾಚಾರ್ಯರು ಬುಧವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ಅಕ್ಟೋಬರ್ 1ರಂದು ಮಠದಲ್ಲಿ ಆಯೋಜಿಸುವ ಅನುಭಾವ ಪ್ರಚಾರ ಉಪನ್ಯಾಸ ಮಾಲೆ ಕಾರ್ಯಕ್ರಮದಲ್ಲಿ ಗಣ್ಯರ ಉಪಸ್ಥಿತಿಯಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ.

# ರಾಜ್ಯಮಟ್ಟದ ಬಸವ ಸಂಸ್ಕೃತಿ ಅಭಿಯಾನಕ್ಕೆ ಈಶ್ವರ್ ಖಂಡ್ರೆ ಚಾಲನೆ




ಮಲ್ಲಮ್ಮನುಡಿ ವಾರ್ತೆ ಬೀದರ್: ಜಿಲ್ಲೆಯಲ್ಲಿ ನಡೆಯುತ್ತಿರುವ ರಾಜ್ಯಮಟ್ಟದ ಬಸವ ಸಂಸ್ಕೃತಿ ಅಭಿಯಾನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರು ಚಾಲನೆ ನೀಡಿದರು.ಬೀದರ್ ನಗರದ ಬಸವೇಶ್ವರ ವೃತದಲ್ಲಿ ಬಲೂನ್ ಹಾರಿಸುವ ಮೂಲಕ ಬಸವ ಸಂಸ್ಕೃತಿ ಅಭಿಯಾನಕ್ಕೆ ಚಾಲನೆ ನೀಡಿದರು. ಇದೇ ವೇಳೆ ವಿಶೇಷವಾಗಿ ನಿರ್ಮಿಸಲಾಗಿದ್ದ ಬಸವಣ್ಣನ ಮೂರ್ತಿಯ ರಥ, ಇಷ್ಟಲಿಂಗ ರಥ, ರುದ್ರಾಕ್ಷಿ ರಥ, ವಿಭೂತಿ ರಥಗಳಿಗೆ ಚಾಲನೆ ನೀಡುವ ಮೂಲಕ ಸಾಂಸ್ಕೃತಿಕ ನಡಿಗೆಗೆ ಚಾಲನೆ ನೀಡಿದರು.ಬಸವ ಪರಂಪರೆಯ ಸಮವಸ್ತ್ರಗಳಲ್ಲಿ ನಗರದ ಬಸವೇಶ್ವರ ವೃತ್ತದಿಂದ ಗುಂಪಾವರೆಗೆ ಬೃಹತ್ ಬಸವ ಸಾಂಸ್ಕೃತಿಕ ನಡಿಗೆ ನಡೆಯಿತು. ಈ ವೇಳೆ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಕೂಡಾ ಭಾಗಿಯಾಗಿದ್ದರು.

ಮಾಜಿ ಸಚಿವ ರಾಜಶೇಖರ ಪಾಟೀಲ್, ಸಿರಿಗೇರಿ ಶ್ರೀಗಳು, ನಿಜಗುಣಾನಂದ ಸ್ವಾಮೀಜಿ, ಬಸವಲಿಂಗ ಪಟ್ಟದೇವರು ಸೇರಿದಂತೆ ಪ್ರಮುಖ ಸ್ವಾಮೀಜಿಗಳು,

ಸಾವಿರಾರು ಬಸವ ಅನುಯಾಯಿಗಳು ಬಸವ ಸಂಸ್ಕೃತಿ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

# ಅತೀವೃಷ್ಠಿ ಹಾನಿ ಪ್ರದೇಶಗಳಿಗೆ ಕೃಷಿಕ ಸಮಾಜದ ಅಧ್ಯಕ್ಷ ಸಿದ್ರಾಮಯ್ಯಾ ಸ್ವಾಮಿ ಭೇಟಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ ಬೀದರ, ಸೆ.03 : ಜಿಲ್ಲೆಯಲ್ಲಿ ಸುಮಾರು 79 ಸಾವಿರದ 300 ಹೇಕ್ಟರ್ ರೈತರ ಜಮೀನು ಸಂಪೂರ್ಣವಾಗಿ ಬೆಳೆ ನಾಶವಾಗಿರುವ ಬಗ್ಗೆ ಬೆಳೆ ಸಮೀಕ್ಷೆ ಮಾಡಲಾಗಿದ್ದು, ಇನ್ನೂ ಜಂಟಿ ಸಮೀಕ್ಷೆ ಮಾಡುತ್ತಿದ್ದಾರೆಂದು ಬೀದರ ಜಿಲ್ಲಾ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ಜಿಲ್ಲಾ ಅಧ್ಯಕ್ಷರಾದ ಸಿದ್ರಾಮಯ್ಯಾ ಸ್ವಾಮಿ ತಿಳಿಸಿದರು. ಅವರು ಬುಧವಾರ ಕಮಲನಗರ ತಾಲ್ಲೂಕಿನ ಖೇಡ, ಸಂಗಮ, ಬಳತ ಭಾಲ್ಕಿ ತಾಲ್ಲೂಕಿನ ಅಂಬೇಸಾಂಗವಿ, ಹುಪ್ಪಳ ಗ್ರಾಮಗಳ ಹೊಲಗಳಿಗೆ ಭೇಟಿ ನೀಡಿ ಮಾತನಾಡಿದರು. ಎನ್.ಡಿ.ಆರ್. ಎಫ್ ಅಡಿಯಲ್ಲಿ ದೆಹಲಿಯಿಂದ ಸಮೀಕ್ಷೆ ಮಾಡಲು ಬಂದಂತಹ ತಂಡವು ಸಮೀಕ್ಷೆ ಮಾಡಿದ ವರದಿಯು ಸರ್ಕಾರಕ್ಕೆ ಸಲ್ಲಿಸಿದ ನಂತರ ಪ್ರತಿ ಹೇಕ್ಟರಿಗೆ ರೂ. 8500 ರೂ. ಬೆಳೆ ಪರಿಹಾರ ನೀಡಲಾಗುವುದೆಂದು ಹೇಳಿದರು.ಬೀದರ ಜಿಲ್ಲೆ ಸಂಪೂರ್ಣ ಅತೀ ವೃಷ್ಠಯಿಂದ ಹಾಗೂ ಬೇರೆ ರಾಜ್ಯವಾದ ಮಹಾರಾಷ್ಟ್ರದ ಧನೆಗಾಂವ್ ಬ್ರಿಜ್ ಕಂ ಬ್ಯಾರೇಜದಿಂದ ಹಾಗೂ ತೆಲಗಾಣದ ಕೊತ್ತೂರ ಬ್ರಿಜ್ ಕಂ ಬ್ಯಾರೇಜದಿಂದ ಮತ್ತು ಬೀದರ ಕಾರಂಜಾ ಜಲಾಶಯದಿಂದ ನೀರು ಬಿಟ್ಟಿರುವುದ್ದರಿಂದ ಬೆಳೆ ಸಂಪೂರ್ಣವಾಗಿ ಹಾಳಾಗಿರುತ್ತದೆ. ರೈತರಿಗೆ ತಾವು ಎದೆಗುಂದದೆ ಎಲ್ಲಾ ರೈತ ಬಾಂಧವರು ಧೈರ್ಯದಿಂದ ಇದ್ದು, ತಮ್ಮ ಬೆಳೆ ಹಾನಿಯಾಗಿರುವುದರ ಕುರಿತು ಬೆಳೆ ವಿಮೇಯ ಸಹಾಯವಾಣೀಗೆ ಕರೆ ಮಾಡಿ ಅಥವಾ ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ದೂರು ಸಲ್ಲಿಸಲು ತಿಳಿಸಿದರು. ಹಾಗೂ ಅತೀವೃಷ್ಠಿ ಮಳೆಯಿಂದ ನಂದಿ ಬಿಜಲಗಾಂವ್ ಗ್ರಾಮದ ಸುಮಾರು 40 ಜಾನವಾರುಗಳು ನೀರುಪಾಲಾಗಿದು, ಅವರಿಗೆ ಪರಿಹಾರ ನೀಡಬೇಕೆಂದು ಸರ್ಕಾರಲ್ಲಿ ಮನವಿ ಮಾಡಿದರು. ಈ ಸಂಧರ್ಭದಲ್ಲಿ ಬೀದರ ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ. ಆರ್, ಉಪ ಕೃಷಿ ನಿರ್ದೇಶಕ–1 ಅನ್ಸಾರಿ ಎಂ.ಕೆ, ಬೀದರ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ವಿಶ್ವನಾಥ ಪಾಟೀಲ್ ಮಾಡಗೋಳ, ಭಾಲ್ಕಿ ತಾಲ್ಲೂಕ ಕೃಷಿಕ ಸಮಾಜದ ಅಧ್ಯಕ್ಷ ರಮೇಶ ಪಾಟೀಲ್, ಸಿರ್ಸಿ ಜಿಲ್ಲಾ ಪ್ರತಿನಿಧಿ ದಯಾನಂದ ಸ್ವಾಮಿ, ಕಮಲನಗರ ತಾಲ್ಲೂಕ ಕೃಷಿಕ ಸಮಾಜದ ಜಿಲ್ಲಾ ಪ್ರತಿನಿಧಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮನ್ನಾಏಖೇಳಿ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಣ್ಣು ಹಂಪಲು ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತಾಲೂಕಿನಮನ್ನಾಏಖೇಳಿ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಿವೈಎಸ್ಪಿ ಎಲ್. ವೈ ರಾಜೇಶ್ ಅವರ ಹುಟ್ಟು ಹಬ್ಬದ ನಿಮಿತ್ಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡಲಾಯಿತ್ತು. ಈ ಸಂದರ್ಭದಲ್ಲಿ ಪಿಎಸ್ಐ ಮಹಿಂದ್ರಕುಮಾರ್, ಕನ್ನಡ ಸೇನೆಯ ರಾಜ್ಯ ಉಪಾಧ್ಯಕ್ಷ ಡಾ. ರವಿಸ್ವಾಮಿ ನಿರ್ಣಾ, ಜಿಲ್ಲಾ ಕಾರ್ಯದರ್ಶಿ ರಮೇಶ್ ಧೂಳ್, ದಕ್ಷಿಣ ಕ್ಷೇತ್ರದ ತಾಲೂಕ ಅಧ್ಯಕ್ಷ ಕಲ್ಲಪ್ಪ ಸಾಗರ್, ನಗರ ಅಧ್ಯಕ್ಷ ಮಂಜುನಾಥ್, ನಗರ ಉಪಾಧ್ಯಕ್ಷ ವಿಜಯಕುಮಾರ್ ಸಾಗರ್, ತುಕಾರಾಂ, ಚಾಂದ್ ಪಾಷಾ. ಖಾದೀರ್ ನಾಗನಕೇರ, ಗುಂಡಪ್ಪ ಪೂಜಾರಿ, ಶಿವಾನಂದ್ ರಾಥೆ. ಯಲ್ಲಾಲಿಂಗ ಚೊಂಚಿ ಸೇರಿದಂತೆ ಕನ್ನಡ ಸೇನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.



ಕಲಬುರಗಿ,ಸೆ.3–ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದಾಗಿ ಅತಿವೃಷ್ಟಿಯ ಹಾನಿ ಸಂಭವಿಸಿದ್ದು, ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸೂಕ್ತ ಪರಿಹಾರ ನೀಡುವಂತೆ ವೀರ ಕನ್ನಡಿಗರ ಸೇನೆ ಪ್ರತಿಭಟನೆಯ ಮೂಲಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದೆ. (ಮಲ್ಲಮ್ಮ ನುಡಿ ಚಿತ್ರ)

# ಸಾಹಿತಿ ಎಸ್. ಎಂ. ಹಿರೇಮಠ ಅವರಿಗೆ ಶ್ರೀ ಚೆನ್ನ ರೇಣುಕ ಬಸವ ಪ್ರಶಸ್ತಿ


(ವರದಿ.ಡಿ.ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಸೆ 3 ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದಲ್ಲಿ

ಲಿಂಗೈಕ್ಯ ಶ್ರೀ ಗುರುಲಿಂಗ ಶಿವಾಚಾರ್ಯರ 56ನೇ ಪುಣ್ಯ ಸ್ಮರಣೋತ್ಸವ ಹಾಗೂ ಶ್ರೀ ಚನ್ನ ರೇಣುಕ ಬಸವ ಪ್ರಶಸ್ತಿ ಪ್ರಧಾನ ಸಮಾರಂಭ ಮತ್ತು 39ನೇ ಅನುಭಾವ ಪ್ರಚಾರ ಉಪನ್ಯಾಸಮಾಲೆಯ ಕಾರ್ಯಕ್ರಮದ ಪ್ರಯುಕ್ತ ಬುಧವಾರ ಹಾರಕೂಡ ಶ್ರೀಮಠದ

ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ,



ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಹಾರಕೂಡ ಶ್ರೀಮಠದಿಂದ ಕೊಡಮಾಡುವ ರಾಷ್ಟ್ರಮಟ್ಟದ ಚೆನ್ನ ರೇಣುಕ ಬಸವ ಪ್ರಶಸ್ತಿಯನ್ನು ಈ ವರ್ಷ ಖ್ಯಾತ ಸಾಹಿತಿಗಳಾದ "ಎಸ್ ಎಂ ಹಿರೇಮಠ" ಅವರಿಗೆ 1 ಲಕ್ಷ ನಗದು, ಎರಡು ತೊಲೆ ಚಿನ್ನದ ಪದಕದೊಂದಿಗೆ ಪ್ರಶಸ್ತಿಯನ್ನು ಅಕ್ಟೋಬರ್ 1. ರಂದು ಜರುಗಲಿರುವ ಶ್ರೀ ಗುರುಲಿಂಗ ಶಿವಾಚಾರ್ಯರ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ

ಸುರೇಶ ಸ್ವಾಮಿ. ನಾಗೇಶ ಮಹಾಜನ. ಬೀಮಾಶಂಕರ ಮಾಶಳಕರ್. ನಾಗಣ್ಣಾ ಪಿರಜೆ. ಅಪ್ಪಣ್ಣ ಜನವಾಡ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಮಲ್ಲಿನಾಥ ಹಿರೇಮಠ ಸ್ವಾಗತಿಸಿದರು.



ಬಸವಕಲ್ಯಾಣ :– ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಭಕ್ತರಿಗೆ ಲಿಂಗೈಕ್ಯ ಶ್ರೀ ಗುರುಲಿಂಗ ಶಿವಾಚಾರ್ಯರ 56 ನೇ ಪುಣ್ಯ ಸ್ಮರಣೋತವ ಹಾಗೂ ಶ್ರೀ ಚನ್ನ ರೇಣುಕ ಬಸವ ಪ್ರಶಸ್ತಿ ಪ್ರಧಾನ ಸಮಾರಂಭ ಮತ್ತು 39 ನೇ ಅನುಭಾವ ಪ್ರಚಾರ ಉಪನ್ಯಾಸ ಮಾಲೆಯ ಕಾರ್ಯಕ್ರಮದ ಪ್ರಯುಕ್ತ ಬುಧವಾರ ಆಮಂತ್ರಣ ಪತ್ರಿಕೆ ನೀಡಿ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಸುರೇಶ ಸ್ವಾಮಿ, ನಾಗೇಶ ಮಹಾಜನ, ಭೀಮಾಶಂಕರ ಮಾಶಾಳಕರ. ನಾಗಣ್ಣ ಪಿರಜೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಕೋಟಿ ಕೃತಜ್ಞತೆ ಗುರುವರ

ರೆಕ್ಕೆ ಬಿಚ್ಚಿ ಗಗನಚುಂಬಿ ಹಾರುತಿರುವೆನೆತ್ತರ
ಗೂಡ ಹಂದರ ತೊರೆದ ಮೇಲೆ ಜಗತು ಇನ್ನು ಸುಂದರ
ಮರಿಯ ಕಲ್ಪನೆ ಕಣ್ಣಲಿ ಕನಸು ಕೆತ್ತಿದ ಮಾಂತ್ರಿಕ
ಕೈ ಮುಗಿವೆ ನಿಮಗೆ ನನ್ನ ಕೋಟಿ ಕೃತಜ್ಞತೆ ಗುರುವರ
ಏನು ಅರಿಯದ ಅಜ್ಞಾನಿಗೆ ತೀಡಿ ಕಲಿಸಿದೆ ಅಕ್ಷರ
ಹಂಡೆತನದ ಹದ್ದು ಮೀರಿದಾಗ ಥಳಿಸಿ ನೀಡಿದೆ ಆಕಾರ
ಅಂಧಕಾರದ ಅಲೆಯಲಿ ಸಿಲುಕಿಹಲು ನೀ ಬಂದು
ಬೆಳಕು ಚೆಲ್ಲಿ ಪಾರು ಮಾಡಿದೆನ್ನ ಭವದ ಸಾಗರ
ಸರಿ ತಪ್ಪುಗಳ ಮಧ್ಯೆ ಉಂಟು ಆಕಾಶ–ಭುವಿ ಅಂತರ
ಪರಿಸ್ಥಿತಿ ಎಂಬ ಪ್ರಶ್ನೆಗೆ ನೀನಾಗಿ ಬಂದೆ ಉತ್ತರ
ಸೋಲು ಸೂರೆಗೊಂಡು ಸುಣ್ಣದಂತೆ ನಾ ಜಾರುತಿರಲು
ಭರವಸೆಯ ಬಣ್ಣಗಳೆರಚಿ,
ಬಿಡಿಸಿದೆನ್ನಲಿ ಚಿತ್ತಾರ
ಪುಷ್ಪಫಲದಿ ತುಂಬಿಕೊಂಡು
ನೆರಳು ನೀಡುತ ಮಾಮರ
ಬಲವನರಿಯದೆ ಬಾಗಿ ಬಿದ್ದ
ಸಸಿಯು ನಾನೀಗ ಹೆಮ್ಮರ
ನೀಡಿ ಪ್ರೇರಣೆ ಪಥವ ತೋರಿದ
ನಿಮ್ಮ ಪರಿಶ್ರಮಕೆ ಚಿರಋಣಿ
ಸೀಳಿ ಸಾಗುವೆ ಹಿಂದೆ ನೋಡದೆ
ಪ್ರಬಲವಾಗಿ ಶರಪಂಜರ
ಶಿಸ್ತು,ಸಹನೆ,ವಿನಯ,ಶಾಂತಿಯ
ಜಲವನುಣಿಸಿ ತಣಿಸಿದೆ
ನೀತಿ–ನಿಯಮ,ಸರಳತೆಯ
ಸಂಸ್ಕಾರ ಬೆರೆಸಿ ಹರಿಸಿದೆ
ಸಾತ್ವಿಕತೆಯ ಸಾಧಕ ನೈತಿಕತೆಯ
ನಾವಿಕನಿಗೆ ಜಯಕಾರ
ಕೈ ಮುಗಿವೆ ನಿಮಗೆ ನನ್ನ ಕೋಟಿ ಕೃತಜ್ಞತೆ ಗುರುವರ



ಕವಯತ್ರಿ : ದೇವಿ ಶೀಲವಂತ
ಜೀವಶಾಸ್ತ್ರ ಉಪನ್ಯಾಸಕಿ
ಬಸವಕಲ್ಯಾಣ

## ರಾಯಚೂರು ತಾಲೂಕಿನ ಪ್ರೌಢಶಾಲೆಗಳಲ್ಲಿ ಬಾಪೂಜಿ

# ಪ್ರಬಂಧ ಸ್ಪರ್ಧೆ ನಡೆಸಲು ಬಿಇಓ ಡಾ.ಈರಣ್ಣ ಕೋಸಗಿ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 03– ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಗಳ ಸಹಯೋಗದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 156ನೇ ಜಯಂತಿಯ ಅಂಗವಾಗಿ ಸೆಪ್ಟೆಂಬರ್ 10ರೊಳಗೆ ರಾಯಚೂರು ತಾಲೂಕಿನ ಪ್ರೌಢಶಾಲೆಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜಿಸಬೇಕು ಎಂದು ರಾಯಚೂರು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಡಾ.ಈರಣ್ಣ ಕೋಸಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಬಗ್ಗೆ ರಾಯಚೂರು ತಾಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳ ಕಚೇರಿಯಿಂದ ಎಲ್ಲ ಪ್ರೌಢಶಾಲೆಗಳ ಮುಖ್ಯ ಗುರುಗಳಿಗೆ ಸುತ್ತೋಲೆ ಕಳುಹಿಸಿದ್ದು, ಅದರಂತೆ ಎಲ್ಲ ಶಾಲೆಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜಿಸಿ ಆ ಎಲ್ಲ ಪ್ರಬಂಧಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಚೇರಿ ಹಿಂದುಗಡೆ, ರಾಯಚೂರು ಇಲ್ಲಿಗೆ ಸಲ್ಲಿಸಬೇಕು.

ಆಸ್ತಕ ಪ್ರೌಢಶಾಲಾ ವಿದ್ಯಾರ್ಥಿಗಳು ತಮ್ಮ ತಮ್ಮ ಶಾಲೆಗಳಲ್ಲಿ ನಡೆಸುವ ಪ್ರಬಂಧ ಸ್ಪರ್ಧೆಯಲ್ಲಿ ಭಾಗಿಯಾಗಿ 1. ಸ್ವಚ್ಚತೆಯ ಪಾಠ –ಗಾಂಧೀಜಿಯವರ ಸಂದೇಶ., 2. ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ ಮತ್ತು 3. ಗಾಂಧೀಜಿಯವರ ಸ್ವಾತಂತ್ರ್ಯದ ಕನಸು – ನನ್ನ ಕಲ್ಪನೆ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 700 ರಿಂದ 800 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು. ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು., ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 3,000 ರೂ., ದ್ವಿತೀಯ ಸ್ಥಾನಕ್ಕೆ 2,000 ರೂ., ತೃತೀಯ ಸ್ಥಾನಕ್ಕೆ 1,000 ರೂ. ಬಹುಮಾನ ನೀಡಲಾಗುತ್ತದೆ. ಜಿಲ್ಲಾಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರು ಮೌಲ್ಯಮಾಪನ ನಡೆಸಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 31,000 ರೂ., ದ್ವಿತೀಯ ಸ್ಥಾನಕ್ಕೆ 21,000 ರೂ., ಹಾಗೂ ತೃತೀಯ ಸ್ಥಾನಕ್ಕೆ 11,000 ರೂ.ಗಳು ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಣೇಶ ಉತ್ಸವ ಹಾಗೂ ಈದ್ ಮಿಲದ್ ಉನ್ ನಬೀ ಹಬ್ಬದ ಹಿನ್ನೆಲೆಯಲ್ಲಿ ರೂಟ್ ಮಾರ್ಚ್



ಕಲಬುರಗಿ : ಗಣೇಶ ಉತ್ಸವ ಹಾಗೂ ಈದ್ ಮಿಲದ್ ಉನ್ ನಬೀ ಹಬ್ಬದ ಹಿನ್ನೆಲೆಯಲ್ಲಿ ನಗರದ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನೆಯಾದ ಸ್ಥಳದಿಂದ ಕಲಬುರಗಿ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್ ಡಿ ಅವರು ಎಲ್ಲಾ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಯವರೊಂದಿಗೆ ನಗರದ ಪ್ರಮುಖ ರಸ್ತೆಗಳಾದ ಹುಮನಾಬಾದ ಬೆಸ್, ಮುಸ್ಲೀ ಚೌಕ್, ಹಪ್ತ ಗುಮಾಜ್, ಸಂತ್ರಸ್ ವಾಡಿ, ಸೇರಿದಂತೆ ಮುಖ್ಯ ರಸ್ತೆಗಳ ಮೂಲಕ ಜಗತ್ ವೃತ್ತದ ವರಗೆ ಪೊಲೀಸ್ ರೂಟ್ ಮಾರ್ಚ್ ನಡೆಸಿದರು.

ಈ ಸಂದರ್ಭದಲ್ಲಿ ಎಸ್.ಪಿ ಮತ್ತು ಪ್ರಿನ್ಸಿಪಾಲ್ ಪೊಲೀಸ್ ತರಬೇತಿ ಕಾಲೇಜು ಕಲಬುರಗಿಯ ಕಿಶೋರ ಬಾಬು, ಡಿಸಿಪಿ ಕನಿಕಾ ಸಿಕ್ರಿವಾಲ, ಸೇರಿದಂತೆ ಕಲಬುರಗಿ ನಗರ ವ್ಯಾಪಿಯ ಡಿವೈಎಸ್ಪಿ, ವಿವಿಧ ಠಾಣೆಯ ಸಿಪಿಐ ಸೇರಿದಂತೆ ಅಧಿಕಾರಿಗಳು ಇದ್ದರು.

# ಮೂಲಭೂತ ಸೌಕರ್ಯ ಒದಗಿಸಬೇಕೆಂದು ಅಖಿಲ ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಸಂಘದ ವತಿಯಿಂದ ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ : ನಗರದ ಬೀದಿ ಬದಿಯಲ್ಲಿ ಕುಳಿತುಕೊಂಡು ವ್ಯಾಪಾರ ಮಾಡುತ್ತಿರುವ ವ್ಯಾಪಾರಸ್ಥರಿಗೆ ಈಗಾಗಲೇ ಪಾಲಿಕೆಯಿಂದ ನೀಡಿರುವ ಸ್ಥಳದ ಮೇಲೆ ವ್ಯಾಪಾರ ಮಾಡಲು 2014 ಮತ್ತು 2019 ರ ಕಾಯ್ದೆಯನ್ವಯ ಮೂಲಭೂತ ಸೌಕರ್ಯ ಒದಗಿಸಬೇಕೆಂದು ಅಖಿಲ ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಸಂಘದ ವತಿಯಿಂದ ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ಈಗಾಗಲೇ ಹಳೆ ಜೇಲ್ ಚೌಪಾಟಿ ಸೂಪರ ಮಾರ್ಕೆಟ್ ಜಾಗದಲ್ಲಿ ಬೀದಿ ಬದಿಯಲ್ಲಿ ಕುಳಿತುಕೊಂಡು ಸರಾಫ್ ಬಜಾರ, ಕಿರಾಣಾ ಬಜಾರ, ಚಪ್ಪಲ ಬಜಾರ, ಕಪಡಾ ಬಜಾರ, ಜನತಾ ಬಜಾರ, ದತ್ತ ಮಂದಿರ, ಸಿಟಿ ಬಸ್ ನಿಲ್ದಾಣ ಸೇರಿದಂತೆ ಕಲಬುರಗಿ ನಗರದಾದ್ಯಂತ ರಸ್ತೆ ಬೀದಿ ಬದಿಯಲ್ಲಿ ಕುಳಿತುಕೊಂಡು ವ್ಯಾಪಾರ ಮಾಡುತ್ತಿರುವ ವ್ಯಾಪಾರಸ್ಥರಿಗೆ 2014 ಮತ್ತು 2019 ರ ಕಾಯ್ದೆಯನ್ವಯ ದಿನಾಂಕ: 02.08.2017 ರಂದು ಅಂದಿನ ನಗರಾಭಿವೃದ್ಧಿ ಸಚಿವರಾದ ಸನ್ಮಾನ್ಯ ಶ್ರೀ ರೋಷನ್ ಬೇಗ್ ಸೇರಿದಂತೆ ಜಿಲ್ಲಾ ಉಸ್ತುವಾರಿ ಸಚಿವರಾದ ಸನ್ಮಾನ್ಯ ಶರಣಪ್ರಕಾಶ ಪಾಟೀಲ ಹಾಗೂ ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತರಾದ ಶ್ರೀ ಪಿ.ಸುನೀಲ ಕುಮಾರ ರವರು ಮತ್ತು ಅಧಿಕಾರಿ ವರ್ಗದವರು




ಹಳೆ ಜೇಲ್ ಚೌಪಾಟಿ ಸ್ಥಳವನ್ನು ಪರಿಶೀಲಿಸಿ ಈ ಸ್ಥಳದಲ್ಲಿ ಬೀದಿ ಬದಿಯಲ್ಲಿ ಕುಳಿತುಕೊಂಡು ಸೂಪರ ಮಾರ್ಕೆಟ್ ವ್ಯಾಪ್ತಿಯಲ್ಲಿ ವ್ಯಾಪಾರ ಮಾಡುತ್ತಿರುವ ವ್ಯಾಪಾರಸ್ಥರನ್ನು ಈ ಸ್ಥಳದಲ್ಲಿ ವ್ಯಾಪಾರ ಮಾಡಲು ಮತ್ತು ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಸೌಕರ್ಯಗಳನ್ನು ಒದಗಿಸಬೇಕೆಂದು ನಗರಾಭಿವೃದ್ಧಿ ಸಚಿವರು ಪಾಲಿಕೆಯ ಆಯುಕ್ತರಾದ ಪಿ.ಸುನೀಲ ಕುಮಾರ ರವರಿಗೆ ನಿರ್ದೇಶನ ನೀಡಿದ್ದರು. ಆದರೆ 2017 ರಿಂದ ಇಲ್ಲಿಯವರೆಗೆ ಯಾವುದೇ ರೀತಿಯ ಮೂಲಭೂತ ಸೌಕರ್ಯಗಳು ಕೂಡ ಒದಗಿಸಿಲ್ಲ.

ಅಲ್ಲದೆ ಪಾಲಿಕೆಯ ವಲಯ–1, 2 ಮತ್ತು 3 ರ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಐ.ಟಿ.ಐ. ಕಾಲೇಜು ಎದುರುಗಡೆ, ಎಂ.ಎಸ್.ಕೆ.ಮಿಲ್ ರಸ್ತೆ ಕಲಬುರಗಿ, ಡಂಕಾ ವೃತ್ತದಿಂದ ಪಾಕಿಜಾ ವೈನ್ ಶಾಪ್ ವರೆಗೆ, ಕೆ.ಎಂ.ಎಫ್. ಡೈರಿ ಎದುರುಗಡೆ, ಆಣಕಲ್ ಪೆಟ್ರೋಲ್ ಬಂಕ್ ಎದುರುಗಡೆ, ಅಂಡರಬ್ರಿಜ್ ಪಂಚಶೀಲ ನಗರ, ಆಳಂದ ಚೆಕ್ ಪೊಸ್ಟ, ಸೂಪರ ಮಾರ್ಕೆಟ್, ಕಲಬುರಗಿ ಈ ಏಳು ಪ್ರದೇಶಗಳಲ್ಲಿ ಬೀದಿ ಬದಿಯಲ್ಲಿ ಕುಳಿತುಕೊಂಡು ವ್ಯಾಪಾರ ಮಾಡುತ್ತಿರುವ ವ್ಯಾಪಾರಸ್ಥರನ್ನು ಈ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ ವ್ಯಾಪಾರ ಮಾಡಲು ವ್ಯವಸ್ಥೆಗಳನ್ನು ಮಾಡಿಕೊಡುತ್ತೇವೆ ಎಂದು ದಿನಾಂಕ: 25.04.2015 ರಂದು ಅಂದಿನ ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಎಸ್.ಬಿ.ಕಟ್ಟಿಮನಿಯವರು ಈಗಾಗಲೇ ನಿರ್ದೇಶನವನ್ನು ನೀಡಿದ್ದರು. ಆದರೆ, ಇಲ್ಲಿಯವರೆಗೆ ಬೀದಿ ಬದಿಯಲ್ಲಿ ಕುಳಿತುಕೊಂಡು ವ್ಯಾಪಾರ ಮಾಡುತ್ತಿರುವ ವ್ಯಾಪಾರಸ್ಥರನ್ನು ಏಳು ಪ್ರದೇಶಗಳಲ್ಲಿ ಸ್ಥಳ ನಿಗದಿ ಮಾಡಿರುವುದಿಲ್ಲ, ಕುಡಿಯುವ ನೀರು, ವಿದ್ಯುತ್, ಶೌಚಾಲಯ ಯಾವುದೇ–ಸೌಲಭ್ಯಗಳು ನೀಡದೇ ಕಲಬುರಗಿ ನಗರದಲ್ಲಿ ಜನರು ಓಡಾಡಲು, ನಡೆದಾಡಲು, ಈ ಬೀದಿ ಬದಿಯಲ್ಲಿ ಕುಳಿತುಕೊಂಡು ವ್ಯಾಪಾರ

ಮಾಡುತ್ತಿರುವ ವ್ಯಾಪಾರಸ್ಥರಿಂದ ವಾಹನ ಸವಾರರಿಗೆ ಮತ್ತು ಜನಸಾಮಾನ್ಯರಿಗೆ ತುಂಬಾ ತೊಂದರೆಗಳನ್ನು ಅನುಭವಿಸುತ್ತಿದ್ದಾರೆ. ಅಲ್ಲದೆ ದಸರಾ, ದೀಪಾವಳಿ, ಗಣೇಶ ಚತುರ್ಥಿ, ರಮ್‌ಜಾನ್ ಈ ಧಾರ್ಮಿಕ ಹಬ್ಬಗಳಲ್ಲಿ ಸಾರ್ವಜನಿಕರು ಪೂಜಾ ಸಾಮಗ್ರಿಗಳನ್ನು ಖರೀದಿಸಲು ಅಥವಾ ಇನ್ನಿತರ ವಸ್ತುಗಳ ಖರೀದಿಗೆ ಆಗಮಿಸಿದ ಸಂದರ್ಭಗಳಲ್ಲಿ ಮೊಬೈಲ್ ಕಳ್ಳತನ, ಕಳ್ಳತನ, ಧ–ರೋಡೆ ಪ್ರಕರಣಗಳು ಹೆಚ್ಚಾಗುತ್ತಿವೆ. ಆದ್ದರಿಂದ ತಾವುಗಳು ಹಾಗೂ ಪೊಲೀಸ ಆಯುಕ್ತರು, ಸಂಚಾರಿ ಪೊಲೀಸರು ಈಗಾಗಲೇ ತಮ್ಮ ಇಲಾಖೆಯಿಂದ ಗುರುತಿಸಿರುವ ಏಳೂ ಸ್ಥಳಗಳಲ್ಲಿ ವ್ಯಾಪಾರ ಮಾಡಲು ಅನುಕೂಲಗಳನ್ನು, ವ್ಯವಸ್ಥೆಗಳನ್ನು ಮಾಡಿಕೊಡಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಸಂಘದ ರಾಜ್ಯಾದ್ಯಕ್ಷ ಜಗನ್ನಾಥ ಸೂರ್ಯವಂಶಿ, ನ್ಯಾಯವಾದಿ ಗುರುರಾಜ ತಿಳಗುಳ, ವೀರಣ್ಣ ಪಟ್ಟೇದಾರ, ಚಂದ್ರಶೇಖರ ಪಾಟೀಲ, ಚಂದ್ರಹಾಸ ಜಿತ್ರೆ, ಅಶೋಕ ರೆಡ್ಡಿ, ಹನುಮಂತ ಹೈದ್ರಾ, ಬಾಬು ಪರೀಟ, ವೆಂಕಟೇಶ ಕಾಂಬಳೆ, ವಿಕ್ರಂ ಪವಾರ, ಕನ್ನಡ ಪರ ಹೋರಾಟಗಾರರಾದ ಸಚಿನ ಪರತಾಬಾದ, ದತ್ತು ಭಾಸಗಿ, ವೆಂಕಟೇಶ ಎಸ್.ಬಿ, ಉದಯ ಮುನಗಲ್ಲ, ಜಗತಸಿಂಗ, ಸವಿತಾ ಜಿಂಗಾಡೆ, ಶ್ರೀದೇವಿ ಕೋರೆ, ಸಂತೋಷಮ್ಮ, ಮಾಣಿಕ ಪವಾರ, ನವೀನ ತೇಲ್ಕರ, ನರಸಿಂಗ ಪೀಸೆ, ಸುಭಾಷ ಡರ್ಬಿ, ಮಲ್ಲಿಕಾರ್ಜುನ ಭಾಗೋಡಿ ಸೇರಿದಂತೆ ಇನ್ನಿತರರು ಇದ್ದರು.

# ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್(ಸ) ರವರ ಸೀರತ್ ಅಭಿಯನ ರಾಜ್ಯ ವ್ಯಾಪಿ ಆರಂಭ..!

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ನ್ಯಾಯದ ಹರಿಕಾರ ಪ್ರವಾದಿ ಪೈಗಂಬರ್ ಮೊಹಮ್ಮದ್ (ಸ) ರವರ ಸೀರತ್ ಅಭಿಯಾನ 2025, ಜಮಾತೆ ಇಸ್ಲಾಮಿ ಹಿಂದ್ ವತಿಯಿಂದ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಇಂದಿನಿಂದ ರಾಜ್ಯ ವ್ಯಾಪಿ ಏಕಕಾಲಕ್ಕೆ ಆರಂಭಗೊಂಡಿದೆ ಎಂದು ಕರ್ನಾಟಕ ಸಾಲಿಡಾರಿಟಿ ಯೂತ್ ಮೂಮೆಂಟ್ ಕಾರ್ಯದರ್ಶಿಯಾಗಿರುವ ಇಲಿಯಾಸ್ ನಾಲ್ ಬಂದ್ ರವರು ಹೇಳಿದರು,

ಅವರು ಬುಧವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಏರ್ಪಡಿಸಿದ ಸುದ್ದಿಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡುತ್ತಾ ಈ ಕುರಿತು ಹೇಳಿಕೆ ನೀಡಿದ ಅವರು

ಸೆ,03 ರಿಂದ 14 ರವರೆಗೆ ರಾಜ್ಯವ್ಯಾಪಿ ಅಭಿಯಾನ ಆರಂಭಗೊಂಡಿದೆ,

ಅಭಿಯಾನದ ವಿವರ

ದಿ : 03 ರ ಬುಧುವಾರದಂದು ಅಭಿಯಾನದ ಮೊದಲ ದಿನದ ಕಾರ್ಯಕ್ರಮವಾಗಿ ಕಾಗೋಷ್ಠಿ ಗೋಷ್ಠಿಗಳು ನಡೆಸುವುದು ಅದು ಆರಂಭ ಗೊಂಡಿದೆ, ಮುಸ್ಲಿಂ ಸಮುದಾಯದ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಸಲಹಾ ಸಮಿತಿಯ ರಚನೆ ಮಾಡಲಾಗುವುದು

ದಿ : 05–ರ ಶುಕ್ರವಾರದಂದು "ಪ್ರವಾದಿ ಮುಹಮ್ಮದರನ್ನು (ಸ) ಅರಿಯಿರಿ" ಮತ್ತು " ಭಾರತಿಯ ಸಮಾಜದಲ್ಲಿ ಪ್ರವಾದಿ ಮುಹಮ್ಮದರ (ಸ) ಆದರ್ಶದ ಔಚಿತ್ಯ" ಎರಡು ಪುಸ್ತಕಗಳ ಬಿಡುಗಡೆ ಕಾರ್ಯ ಕ್ರಮ ಸಾಂಕೇತಿಕವಾಗಿ ಹಮ್ಮಿಕೊಳ್ಳಲಾಗುವುದು,

ಸಾಹಿತಿಗಳು, ವೈದ್ಯರು, ಪ್ರೋಫೆಸರ್‌ಗಳು ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಗಣ್ಯರನ್ನು ಭೇಟಿಯಾಗಿ ಅಭಿಯಾನದ ಪರಿಚಯಿಸಿ ಪುಸ್ತಕ ನೀಡುವುದು.

ಯು ಜಿ ಮತ್ತು ಪಿ ಜಿ ಮತ್ತು ಶಿಕ್ಷಕರಿಗಾಗಿ (ಪುರುಷ ಮತ್ತು ಮಹಿಳೆಯರು) ದಿ : 20– ರ ಶನಿವಾರರಂದು ರೈಲ್ವೆ ಸ್ಟೇಷನ್ ರಸ್ತೆಯಲ್ಲಿರುವ ಮಸ್ಜಿದೆ ಆಲಾ ಸಭಾಂಗಣದಲ್ಲಿ ಮಧ್ಯಾಹ್ನ 03–00 ಗಂಟೆಗೆ ಪ್ರಬಂಧ ಸ್ಪರ್ದೇ ಏರ್ಪಡಿಸಲಾಗಿದೆ ಎಂದು ವಿವರಿಸಿದರು

ಸಮಾಜಸೇವೆ ಸೆ 03 ರಿಂದ 14 ರವರೆಗೆ ಸಾರ್ವಜಿಕ ಸ್ಥಳ, ವಾರ್ಡ್‌ಗಳು ಮತ್ತು ಶಾಲಾ ಕಾಲೇಜುಗಳಲ್ಲಿ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸುವುದು.

ದಿ: 06–ರ ಶನಿವಾರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳ ಆರೋಗ್ಯ ವಿಚಾರಣೆ ಮತ್ತು ರೋಗಿಗಳಿಗೆ ಹಣ್ಣು ಹಂಪಲ ವಿತರಣೆ ಮಾಡಲಾಗುವುದು

ದಿ : 10 ರ ಬುದುವಾರದಂದು ವೃದ್ಧಾಶ್ರಮಕ್ಕೆ ಭೇಟಿ ನೀಡುವುದು.

ಭಾಗ್ಯನಗರ, ಮುನಿರಾಬಾದ, ಗಿಣಿಗೇರಾ, ಕಿನ್ನಾಳ, ಗೊಂಡಬಾಳ,




ಕುದರಿಮೋತಿ–ಮಂಗಳೂರು, ಹಾಲಳ್ಳಿ, ಕೋಳೂರು, ಹನಕುಂಟಿ ಮತ್ತು ಲಾಚನಕೇರಾ ಗ್ರಾಮಗಳಲ್ಲಿ ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್(ಸ) ಸೀರತ್ ಅಭಿಯಾನ –2025 ರ ಪರಿಚಯಿಸುವುದು. ಅಭಿಯಾನದ ಪ್ರಯುಕ್ತ ಸನ್ಮಾರ್ಗ ವಾರಪತ್ರಿಕೆ ವಿಶೇಶಾಂಕ ಬಿಡುಗಡೆ ಮಾಡಲಾಗುವುದು,

ಅಭಿಯಾನದ ಪ್ರಯುಕ್ತ ಮಹಿಳೆಯರಿಗಾಗಿರುವ ಅನುಪಮಾ ಮಾಸ ಪತ್ರಿಕೆಯಿಂದ ವಿಶೇಶಾಂಕ ಬಿಡುಗಡೆ ಗೊಳಿಸಲಾಗುವುದು

ಸೆಪ್ಟೆಂಬರ್ 03 ರಿಂದ 14 ರವರೆಗೆ ರಾಜ್ಯವ್ಯಾಪಿ ಅಭಿಯಾನ ವನ್ನು ಈ ಎಲ್ಲಾ ಕಾರ್ಯಕ್ರಮಗಳನ್ನು ಆಯೋಜಿಸಿದ್ದು ಈ ಅಭಿಯಾನಕ್ಕೆ ಸಾರ್ವಜನಿಕರು ಪಾಲ್ಗೊಂಡು ಪ್ರೋತ್ಸಾಹ ನೀಡಿ ಅಭಿಯಾನವು ಯಶಸ್ವಿಯಾಗಲು ಸಹಕರಿಸಬೆಕೆಂದು ಕರ್ನಾಟಕ ಸಾಲಿದಾರಿಟಿ ಯೂತ್ ಮುಮೆಂಟ್ ಕಾರ್ಯದರ್ಶಿಯಾಗಿರುವ ಇಲಿಯಾಸ್ ನಾಲ್ಬಂದ್ ರವರು ಪತ್ರಿಕಾಗೋಷ್ಠಿಯಲ್ಲಿ ಸಂಪೂರ್ಣ ಮಾಹಿತಿ ನೀಡಿ ಪ್ರಕಟಣೆ ಮೂಲಕ ಎಲ್ಲಾ ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು ಭಾಗವಹಿಸಲು ಮನವಿ ಮಾಡಿಕೊಳ್ಳುತ್ತಾ ಸರ್ವರನ್ನು ಸ್ವಾಗತಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಜಮಾತೆ ಇಸ್ಲಾಮಿ ಹಿಂದ್ ಕೊಪ್ಪಳ ಘಟಕದ ಅಧ್ಯಕ್ಷರಾದ ಸೈಯದ್ ಹಿದಾಯತ್ ಅಲಿ, ರಾಬ್ತಾ ಎ ಮಿಲ್ಲತ್ ಸಂಸ್ಥೆಯ ಅಧ್ಯಕ್ಷ ,ಎಂ ಲಾಯಕ್ ಅಲಿ, ಹ್ಯೂಮನ್ ರಿಲೀಫ್ ಸೊಸೈಟಿ ಪ್ರಾದೇಶಿಕ ಅಧ್ಯಕ್ಷ ,ಅಜಗರ್ ಖಾನ್ ಮತ್ತು ಸಾಲಿಡಾರಿಟಿ ಯೂಥ್ ಮುಮೆಂಟ್ ಕೊಪ್ಪಳ ಘಟಕದ ಅಧ್ಯಕ್ಷರಾದ ಏಜಾಜ್ ಅಹಮದ್ ಶರೀಫ್ ಸೇರಿರಂತೆ ಅನೇಕರು ಉಪಸ್ಥಿತರಿದ್ದರು,

# ಧಾರಾಕಾರ ಮಳೆಯಿಂದ ಅಂತರ್ಜಲಮಟ್ಟ ಹೆಚ್ಚಳ



ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಸೆ.3: ಧಾರಾಕಾ ಮಳೆಯಿಂದಾಗಿ ಅಂತರ್ಜಲಮಟ್ಟ ಹೆಚ್ಚಾಗಿದ್ದು ತಾಲೂಕಿನ ಬಂಕಲಗಾ ಗ್ರಾಮದ ಜಗದೀಶ್ ಮಂಟಗಿ ತೋಟದಲ್ಲಿ ಜಲತಜ್ಞರಾದ ರೇವಯ್ಯ (ರವಿ ) ಈ.ಹಿರೇಮಠ ಕರಜಗಿ ಇವರು ಜಲಶೋಧ ಮಾಡಿಕೊಟ್ಟಿರುವ ಪಾಯಿಂಟ್ ಇದಾಗಿದ್ದು ಬೋರ್‌ವೆಲ್‌ನಲ್ಲಿ ನೀರು ಉಕ್ಕಿ ಹರಿಯುತ್ತಿದೆ.ಹಾಗೂ ಕರಜಗಿಯಲ್ಲಿ ಇತ್ತಿಚಗೆ ವೀರಶೈವ ಸ್ಮಶಾನ ಭೂಮಿಯಲ್ಲಿ ಕೊರೆದ ಕೊಳವೆ ಬಾವಿಗೆ ಮೂರು ಅಡಿ ನೀರು ಮೇಲೆ ಬಂದಿದೆ.

# ದೇಶಕಂಡ ಅಪ್ರತಿಮರು. ವೀರ ಮಹಿಳೆಯರ ಇತಿಹಾಸ ಅರಿಯುವುದು ಅತ್ಯವಶ್ಯಕ : ಡಾ. ಕಲ್ಯಾಣೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.3:ಇತಿಹಾಸಅರಿಯದವರು, ಇತಿಹಾಸ ಸೃಷ್ಠಿಮಾಡಲಾರರು. ಹೀಗಾಗಿ ವಿದ್ಯಾರ್ಥಿಗಳು ನಮ್ಮ ವೀರ ಮಹಿಳೆಯರ ಇತಿಹಾಸ ಅರಿಯುವುದು ಅತ್ಯವಶ್ಯಕವಾಗಿದೆ ಎಂದು ಬಿಕೆಐಟಿ ಪ್ರಾಂಶುಪಾಲ ಡಾ। ಉದಯಕುಮಾರ ಕಲ್ಯಾಣೆ ಹೇಳಿದರು.

ಪಟ್ಟಣದ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಭೀಮಣ್ಣ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯದಲ್ಲಿ, ವಿಟಿಯು ಮಾರ್ಗದರ್ಶನದಮೇರೆಗೆ,ಕಿತ್ತೂರರಾಣಿ ಚನ್ನಮ್ಮ, ರಾಣಿ ಅಹಲ್ಯಾಬಾಯಿ ಹೊಳಕರ,ರಾಣಿ ಅಬ್ಬಕ್ಕದೇವಿಯವರ ಹುಟ್ಟುಹಬ್ಬದ ನಿಮಿತ್ಯ ಬುಧವಾರ ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 17ನೇ ಶತಮಾನದ ರಾಣಿಯರಾದ ಕಿತ್ತೂರರಾಣಿ ಚನ್ನಮ್ಮ, ರಾಣಿ ಅಬ್ಬಕ್ಕದೇವಿ, ಅಹಲ್ಯಾಬಾಯಿ ಹೊಳಕರರವರು ದೇಶಕಂಡ ಅಪ್ರತಿಮ ಮಹಿಳೆಯರಾಗಿದ್ದರು.ಪುರುಷಪ್ರಧಾನ ವ್ಯವಸ್ಥೆಯ ನಾಡಿನಲ್ಲಿ,ಪುರುಷರಿಗೂ ಹಿಂದಿಕ್ಕಿ ದೇಶ ಕಟ್ಟಿದ ಮಹಾನ್ ಮಹಿಳೆಯರಿವರು.ಇವರತತ್ವಾದರ್ಶಗಳು



ಮೈಗೂಡಿಸಿಕೊಳ್ಳುವುದರೊಂದಗೆ ಇವರ ಇತಿಹಾಸ ತಿಳಿದು ಇವರಂತೆಯೇ ನಾವೂಕೂಡ ದೇಶಕಟ್ಟುವ ಕಾರ್ಯಮಾಡಬೇಕು ಎನ್ನುವುದು ನಮ್ಮೆಲ್ಲರ ಆಶೆಯವಾಗಿದೆ ಎಂದು ಹೇಳಿದರು.

ಅಹಲ್ಯಾಬಾಯಿ ಹೊಳ್ಕರ್ ಮತ್ತು ರಾಣೀ ಅಬ್ಬಕ್ಕದೇವಿಯ ಬಗ್ಗೆ ವಿಶೇಷ ಉಪನ್ಯಾಸ ಮಂಡಿಸಿ ಮಾತನಾಡಿದ ಉಪನ್ಯಾಸಕ ಅಶೋಕ ರಾಜೋಳೆ, ತುಳು ನಾಡಿನ ರಾಣಿಯಾಗಿದ್ದ ಅಬ್ಬಕ್ಕದೇವಿಯು 16ನೇ ಶತಮಾನದ ದ್ವಿತಿಯಾರ್ಧದಲ್ಲಿ ಪೋರ್ಚಗೀಸರೊಂದಿಗೆ ಹೋರಾಡಿ ದೇವಾಲಯಗಳ ನಗರಿ ಮೂಡಬಿದರೆಯನ್ನು ಆಳಿದ ಮಹಾನ್‌ರಾಣಿಯವಾಗಿದ್ದರು. ಬಂದರು ನಗರಿ ಉಳ್ಳಾಲ ಇವರ ರಾಜಧಾನಿಯಾಗಿತ್ತು. ದೇಶದಲ್ಲಿ ಪೋರ್ಚಗೀಸರಿಗೆ ಕಾಲಿಡದಂತೆ ಮಾಡಿದ ಮಹಾನ್ ರಾಣಿ ಇವರಾಗಿದ್ದರು. ಅಲ್ಲದೇ ರಾಣಿ ಅಹಲ್ಯಾಬಾಯಿ ಹೊಳ್ಕರ್ ರವರು ಮರಾಠಾ ಸಾಮ್ರಾಜ್ಯದ ಮಾಲ್ವ ಪ್ರಾಂತ್ಯದ ರಾಣಿ, ಇವರು ಈಗಿನ ಮಧ್ಯಪ್ರದೇಶದಲ್ಲಿರುವ ಮಹೇಶ್ವರವನ್ನು ತಮ್ಮ ರಾಜಧಾನಿಯನ್ನಾಗಿಸಿಕೊಂಡಿದ್ದರು. ಇವರ ಉತ್ತಮ ಆಡಳಿತದಿಂದ ಭಾರತೀಯರ ಮನದಾಳದಲ್ಲಿ ಸ್ಥಿರಸ್ಥಾಯಿಯಾಗಿ ಉಳಿದಿದ್ದಾರೆ. ಇವರ ಸಾಮಾಜಿಕ ಕಲ್ಯಾಣಗಳು, ಜನಾನುರಾಗಿ ಕಾರ್ಯ,ಧಾರ್ಮಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿಗಳಿಂದಾಗಿ ಭಾರತೀಯರ ಮನೆಮಾತಾಗಿದ್ದಾರೆ ಎಂದು ಹೇಳಿದರು. ವೀರರಾಣಿ ಕಿತ್ತೂರ ಚನ್ನಮ್ಮನ ಬಗ್ಗೆ ವಿಶೇಷ ಉಪನ್ಯಾಸ ಮಂಡಿಸಿದ ನಿವೃತ್ತ ಮುಖ್ಯಶಿಕ್ಷಕ ಜಯರಾಜ ದಾಬಶೆಟ್ಟಿ, 1778ರಲ್ಲಿ ಬೆಳಗಾವಿಯ ಪಂಚಮಸಾಲಿ ಲಿಂಗಾಯ ಮನೆತನದಲ್ಲಿ,ದೇಸಾಯಿ ಧೂಳಪ್ಪಗೌಡರು ಮತ್ತು ಪದ್ಮಾವತಿ ದಂಪತಿಗಳ ಉದರದಲ್ಲಿ ಜನಿಸಿದ ರಾಣಿ ಚನ್ನಮ್ಮ,ಚಿಕ್ಕವಳಿದ್ದಾಗಲೇ ಕತ್ತೆ ವರಸೆ,ಕುದರೆ ಓಟ ಮುಂತಾದವುಗಳ ಬಗ್ಗೆ ಎತ್ತಿದ ಕೈಯಾಗಿದ್ದರು. ತಮ್ಮ ವೀರ ಬಂಟರಾದ ಸಂಗೊಳ್ಳಿ ರಾಯಣ್ಣ ಸೇರಿದಂತೆ ಮುಂತಾದವರ ಜೊತೆಗೂಡಿ, ಹೋರಾಟ ಮಾಡಿ ಈಸ್ಟ್ ಇಂಡಿಯಾ ಕಂಪನಿ ವಿರುದ್ಧ ಶಸಸ್ತ್ರ ಹೋರಾಟ ಮಾಡಿ,ಪ್ರಥಮ ಗೆಲುವು ಸಾಧಿಸಿ, ಸ್ವಾತಂತ್ರ ಕಹಳೆ ಊದಿದ ಭಾರತೀಯ ಮೊದಲ ಮಹಿಳೆ ಇವರಾಗಿದ್ದರು. ಸರದಾರ ಗುರುಸಿದ್ದಪ್ಪನ ಮುಂದಾಳತ್ವದಲ್ಲಿ ಬ್ರಿಟಿಷ್ ಆಡಳಿತಗಾರ ಥ್ಯಾಕರೆಯನ್ನು ಕೊಂದು ವಿಜಯ ಸಾಧಿಸಿದ ದಿನವೇ ಅಕ್ಟೋಬರ್ 21 ರಂದು ಕಿತ್ತೂರ ಉತ್ಸವ ಎಂದು ಆಚರಿಸಲಾಗುತ್ತಿದೆ ಎಂದು ಹೇಳಿದರು. ಬಿಕೆಐಟಿ ಕಾಲೇಜಿನ ಎನ್.ಎಸ್.ಎಸ್ ಅಧಿಕಾರಿ ಡಾ. ಬಿ.ಸೂರ್ಯಕಾಂತ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಇ.ಸಿ.ವಿಭಾಗದ ಮುಖ್ಯಸ್ಥ ಪ್ರಶಾಂತ ಗಂಗೊಳಗಿ ಉಪಸ್ಥಿತರಿದ್ದರು.ವಿದ್ಯಾರ್ಥಿನಿ ಸುಮತಿ ಪ್ರಾರ್ಥನಾಗೀತೆ ನಡೆಸಿಕೊಟ್ಟರು, ದಿವ್ಯಾ ವಂದಿಸಿದರು.

# ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



ಬೀದರ. ಆ. 03 : ರಾಜ್ಯ ಸರ್ಕಾರದಜನಪರಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಮಲಾಪೂರ್ ಗ್ರಾಮದ ವಾರ್ಡ್ ನಂ – 01 ರಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಗೃಹ ಲಕ್ಷ್ಮಿ ಯೋಜನೆ: ಹಲವು ಮಹಿಳೆಯರಿಗೆ ಬ್ಯಾಂಕ್ ಖಾತೆ ಹಾಗೂ ಆಧಾರ್ ಜೋಡಣೆ (ಓಕಅಖ) ಸಮಸ್ಯೆಯಿಂದ ಹಣ ಜಮಾವಣೆಯಾಗಿರಲಿಲ್ಲ. ಅಂತಹ ಪ್ರಕರಣಗಳನ್ನು ಸಮಿತಿ ಗುರುತಿಸಿ, ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆ ಬಗೆಹರಿಸುತ್ತಿದೆ. ಮತ್ತು

ಶಕ್ತಿ ಯೋಜನೆ, ಅನ್ನಭಾಗ್ಯ, ಗೃಹ ಜ್ಯೋತಿ, ಯುವನಿಧಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ

ತಿಳಿಸಲಾಯಿತು...

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಮುಖಂಡರಾದ ಜುಬೇರ್ ಪಟೇಲ್, ನರಸಿಂಗ್ ಸಾಮ್ರಾಟ್, ಅಂಬೇಡ್ಕರ್, ಮೋಹಿನ್ ಪಠಾಣ್, ಫಿರೋಜ್ ಶೇರಿಕಾರ, ಲಕ್ಷ್ಮೀಕಾಂತ, ಸಲಾಂ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಡಾ.ಚನ್ನಬಸವ ಪಟ್ಟದ್ದೇದೇವರ ಗುರುಕುಲ ಶಾಲೆಗೆ ಖೋ ಖೋ ಮತ್ತು ಕಬ್ಬಡಿ ಆಟದಲ್ಲಿ ಪ್ರಥಮ ಸ್ಥಾನ



ಮಲ್ಲಮ್ಮನುಡಿವಾರ್ತೆಕಮಲನಗರ:ಸೆ.3:ತಾಲೂಕಿನ ಖೇಡ–ಸಂಗಮಗ್ರಾಮದಡಾ.ಚನ್ನಬಸವ ಪಟ್ಟದ್ದೇವರ ಗುರುಕುಲ ಹಿರಿಯ ಪ್ರಥಮಿಕ ಶಾಲೆ ಮಕ್ಕಳು ಕಮಲನಗರ ಹೊಬ್ಬಳಿ ಮಟ್ಟದ ಕ್ರೀಡಾಕೂಟದಲ್ಲಿ ಖೋ ಖೋ ಮತ್ತು ಕಬ್ಬಡಿ ಆಟದಲ್ಲಿ ಪ್ರಥಮ ಸ್ಥಾನ ಬಂದು ಶಾಲೆಗೆ ಕೀರ್ತಿ ತಂದಿದ್ದಾರೆ.ಶಾಲೆಯ ಮುಖ್ಯ ಶಿಕ್ಷಕಿ,ಅರ್ಚನಾ ವಿಶ್ವಕರ್ಮ ಮಾತನಾಡಿ,ಹಳ್ಳಿಗಾಡಿನ ಮಕ್ಕಳಲ್ಲಿ ಅಪ್ರತಿಮ ಕಲೆಗಳು ಅಡಗಿರುತ್ತವೆ. ಹಾಗೆಯೇ ಅವರು ದೈಹಿಕವಾಗಿ ಸದೃಢರಾಗಿದ್ದು ಅವರಲ್ಲಿನ ಕ್ರೀಡಾ ಅಭಿರುಚಿಯನ್ನು ಗುರುತಿಸಿ ಅವರನ್ನು ಪ್ರೋತ್ಸಾಹಿಸುವುದು ಶಿಕ್ಷಕರ ಆದ್ಯ ಕರ್ತವ್ಯ, ನಮ್ಮ ಶಾಲೆ ಮಕ್ಕಳ ಸಾಧನೆ ಹರ್ಷ ತಂದಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ

ದೈಹಿಕ ಶಿಕ್ಷಕರು ಅನಿಲರಾಜ್ ಬೆಳಕಟ್ಟೆ, ಬಸವರಾಜ್ ಚಿಂದೆ, ಸಂಗೀತಾ ಮೇತ್ರೆ,ಹಿರಿಯ ಶಿಕ್ಷಕ ಸಂಜಯಕುಮಾರ ಮೆಂಗ, ರೇಷ್ಮಾ ಮೇಡಂ ಸೇರಿದಂತೆ ಮತ್ತಿತರರು ಮಕ್ಕಳಿಗೆ ಪ್ರೋತ್ಸಾಹಿಸಿದರು.

# ಸೆ.07ರಂದು ಜಿಲ್ಲಾಡಳಿತದಿಂದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ

ರಾಯಚೂರು ಸೆ 03 : ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸೆಪ್ಟೆಂಬರ್ 07ರ ಬೆಳಿಗ್ಗೆ 11.30 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಆಯುಕ್ತರಾದ ಜಹೀರಾ ನಸೀಮ್, ಆರ್ಯ ಈಡಿಗ ಸಮಾಜದ ಜಿಲ್ಲಾಧ್ಯಕ್ಷರಾದ ಎಂ.ನರಸನಗೌಡ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

# ಕೌನ್ಸೆಲಿಂಗ್ ಮೂಲಕ ಪಿಡಿಒ ವರ್ಗಾವಣೆಗೆ ಸ್ವಾಗತ

ಬೀದರ. ಸೆ. 03 : ರಾಜ್ಯ ಸರ್ಕಾರ ಆನ್‌ಲೈನ್ ಕೌನ್ಸೆಲಿಂಗ್ ಮೂಲಕ ಪಿಡಿಒಗಳ ವರ್ಗಾವಣೆಗೆ ಕ್ರಮ ಕೈಗೊಂಡಿರುವುದನ್ನು ರಾಜ್ಯ ಪಂಚಾಯತ್‌ರಾಜ್ ಅಭಿವೃದ್ಧಿ ಅಧಿಕಾರಿಗಳ ಗ್ರೂಪ್ ಬಿ ಹುದ್ದೆ ಉನ್ನತೀಕರಣ ಸಂಘದ ಕಲಬುರಗಿ ವಿಭಾಗೀಯ ಕಾರ್ಯದರ್ಶಿ ಉಮೇಶ ಕೆ. ಜಾಬಾ ಸ್ವಾಗತಿಸಿದ್ದಾರೆ.



ಆನ್‌ಲೈನ್ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆ ನಡೆಸಬೇಕು ಎನ್ನುವುದು ಪಿಡಿಒಗಳ ಬಹು ದಿನಗಳ ಬೇಡಿಕೆಯಾಗಿ– ತ್ತು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ಈ ದಿಸೆಯಲ್ಲಿ ದಿಟ್ಟ ನಿರ್ಧಾರ ಕೈಗೊಂಡಿದ್ದಾರೆ ಎಂದು ಹೇಳಿದ್ದಾರೆ.

ಆನ್‌ಲೈನ್ ಕೌನ್ಸೆಲಿಂಗ್ ಸಂಪೂರ್ಣ ಪಾರದರ್ಶಕವಾಗಿ ನಡೆಯಲಿದೆ. ಸ್ಥಳದಲ್ಲೇ ವರ್ಗಾವಣೆ ಆದೇಶ ಕೂಡ ಕೊಡಲಾಗುತ್ತಿದೆ. ಹೀಗಾಗಿ ಪಿಡಿಒಗಳಿಗೆ ಸಂತಸ ಉಂಟು ಮಾಡಿದೆ ಎಂದು ತಿಳಿಸಿದ್ದಾರೆ.

# ಯುವ ಪೀಳಿಗೆಯು ತಂಬಾಕಿನ ದುಶ್ಚಟಕ್ಕೆ ಬೀಳುವುದು ತಪ್ಪಿಸಬೇಕು



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.3:ಯುವಪೀಳಿಗೆಯು ತಂಬಾಕಿನ ದುಶ್ಚಟಕ್ಕೆ ಬೀಳುವುದು ತಪ್ಪಿಸಬೇಕು,ತಂಬಾಕು ಸೇವನೆಯು ಮನುಷ್ಯನ ಮೇಲೆ ಉಂಟುಮಾಡುವ ದುಷ್ಪರಿಣಾಮಗಳನ್ನು ಇಂದಿನ ಯುವ ಪೀಳಿಗೆಯ ಮನಮುಟ್ಟುವಂತೆ ಜಾಗ್ರತಿ ಮೂಡಿಸಿ ತಿಳಿಸುವುದು ಇಂದಿನ ದಿನಗಳಲ್ಲಿ ಅಗತ್ಯವಾಗಿದೆ ಎಂದು ಜಿಲ್ಲಾ ಜಿಲ್ಲಾ ಜನ ಜಾಗ್ರತಿ ಸದಸ್ಯ ಮಲ್ಲಪ್ಪ ಗೌಡ ಹೇಳಿದರು.

ತಾಲೂಕಿನ ಠಾಣಕುಶನೂರು ಸರ್ಕಾರಿ ಪ್ರೌಢ ಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆವತಿಯಿಂದ ಏರ್ಪಡಿಸಿದ ವಿಶ್ವ ತಂಬಾಕು ವಿರೋಧಿ ದಿನಾಚರಣೆಯಲ್ಲಿ ಮಕ್ಕಳಿಗೆ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಅವರು,

ತಂಬಾಕು ಸೇವನೆಯಿಂದ ಯುವ ಪೀಳಿಗೆಯನ್ನು ರಕ್ಷಿಸುವುದು ಮಹತ್ವದ ಕಾರ್ಯವಾಗಿದೆ. ಅವರಲ್ಲಿ ಈ ಬಗ್ಗೆ ಅರಿವು ಮೂಡಿಸಿ, ತಂಬಾಕು ನಿಯಂತ್ರಣದ ವಿಚಾರದಲ್ಲಿ ಎಲ್ಲರು ಒಟ್ಟಾಗಿ ಪಣ ತೊಡಬೇಕಾಗಿದೆ. ತಂಬಾಕು ಸೇವನೆಯ ದುಶ್ಚಟಕ್ಕೆ ದಾಸರಾಗಿ ವಿಶ್ವದಲ್ಲಿ ಪ್ರತಿವರ್ಷ ಸುಮಾರು ಲಕ್ಷಕ್ಕೂ ಹೆಚ್ಚಿನ ಜನರು ಸಾಯುತ್ತಿದ್ದಾರೆ. ಯುವ ಪೀಳಿಗೆಯು ತಂಬಾಕಿನ ದುಶ್ಚಟಕ್ಕೆ ಬೀಳುವುದನ್ನು ತಡೆಯುವುದು ಒಂದು ಸವಾಲಾಗಿದ್ದರೆ, ಈಗಾಗಲೇ ಈ ದುಶ್ಚಟಕ್ಕೆ ಒಳಗಾದವರನ್ನು ಅದ– ರಿಂದ ಹೊರತರುವುದು ಇನ್ನೂ ದೊಡ್ಡ ಸವಾಲಾಗಿ ಪರಿಣಮಿಸಿದೆ.

ಮಕ್ಕಳು ಇಂತಹ ಕೆಟ್ಟ ಚಟಗಳ ಮುಕ್ತಿಗಾಗಿ ಕೈ ಜೋಡಿಸಬೇಕು ಎಂದರು.

ಮುಖ್ಯಗುರು ಸಂಜುಕುಮಾರ್ ಮಾತನಾಡಿ,

ಹತ್ತು ಹಲವು ಕಾರಣಗಳಿಂದ ಧೂಮಪಾನದ ಚಟ ಅಂಟಿಸಿಕೊಂಡು ಅನೇಕರು ಆರೋಗ್ಯ ಹಾಗೂ ಆರ್ಥಿಕ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ.

ಧೂಮಪಾನ ಹುಸಿ ಕಲ್ಪನೆಗಳು ಜನರಲ್ಲಿ ಮೂಡಿರುವುದು ದುರದೃಷ್ಟಕರ. ಬೀಡಿ, ಸಿಗರೇಟು, ಗುಟ್ಕಾ, ಜರ್ದಾ, ನಶ್ಯಾ, ಹುಕ್ಕಾ ಹೀಗೆ ಅನೇಕ ರೀತಿಯಲ್ಲಿ ತಂಬಾಕು ಉತ್ಪನ್ನಗಳನ್ನು ಸೇವಿಸಿ ಜೀವನ ಕಳೆದುಕೊಳ್ಳಬಾರದು.ಸ್ವಯಂಪ್ರೇರಿತವಾಗಿ ಧೂಮಪಾನ,ಮದ್ಯಪಾನ ವರ್ಜಿಸಲು ಬಯಸುವರಿಗೆ ಧರ್ಮಸ್ಥಳ ಸಂಸ್ಥೆ ಚಟದಿಂದ ಮುಕ್ತಿಗೊಳಿಸುವ ಸುವರ್ಣ ಅವಕಾಶ ಮಾಡಿಕೊಡುತ್ತಿದೆ ಎಲ್ಲರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಮುಖ್ಯಗುರು ಸಂಜು ಕುಮಾರ್ ಕದಂ, ಧನರಾಜ್, ರವಿ ವಲ್ಲಾಪುರೆ, ಸುನೀತಾ, ಅನಿತಾ, ಅಂಬಿಕಾ, ರೂಬಿನಾ, ಅಲೋಕ, ರಾಜಕುಮಾರ್ ಇದ್ದರು.ವಲಯ ಮೇಲ್ವಿಚಾರಕ ವಿಲಾಸ ಪೂಜಾರಿ ನಿರೂಪಣೆ ಮಾಡಿ ಸ್ವಾಗತಿಸಿದರು.

# ದೌರ್ಜನ್ಯವಾದರೆ ಅಕ್ಕ ಪಡೆ ಗಮನಕ್ಕೆ ತನ್ನಿ




ಬೀದರ.ಸೆ. 03 : ಹೆಣ್ಣುಮಕ್ಕಳು ತಮ್ಮ ಮೇಲೆ ಯಾವುದೇ ರೀತಿಯ ದೌರ್ಜನ್ಯ ನಡೆದರೆ ಕೂಡಲೇ ಅಕ್ಕ ಪಡೆಯ ಗಮನಕ್ಕೆ ತರಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಅವರ ಪತ್ನಿ ಶೈನಿ ಗುಂಟಿ ಹೇಳಿದರು.

ಋಷಿಕೇಶ ಶಿಕ್ಷಣ ಸಂಸ್ಥೆ ಸಂಚಾಲಿತ ನಗರದ ಅರುಣೋದಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಬುಧವಾರ ನಡೆದ ಕಾನೂನು ಅರಿವು– ನೆರವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅಕ್ಕ ಪಡೆ ಹೆಣ್ಣುಮಕ್ಕಳ ರಕ್ಷಣೆಗಾಗಿಯೇ ಇದೆ. ಹೀಗಾಗಿ ಏನೇ ಸಮಸ್ಯೆ ಇದ್ದರೂ ಪಡೆ ಮುಂದೆ ಹೇಳಿಕೊಳ್ಳಬೇಕು ಎಂದು ತಿಳಿಸಿದರು.ಮಕ್ಕಳು ಸುರಕ್ಷಿತ ಹಾಗೂ ಅಸುರಕ್ಷಿತ ಸ್ಪರ್ಶಗಳ ಬಗ್ಗೆ ಅರಿತುಕೊಳ್ಳಬೇಕು. ಸಂಕಷ್ಟದ ಸಂದರ್ಭದಲ್ಲಿ 112 ಅಥವಾ 1098ಗೆ ಕರೆ ಮಾಡಬೇಕು ಎಂದು ಸಲಹೆ ಮಾಡಿದರು.ಸಾರ್ವಜನಿಕರ ರಕ್ಷಣೆ ಪೊಲೀಸರ ಕರ್ತವ್ಯವಾಗಿದೆ. ಹೀಗಾಗಿ ಮಕ್ಕಳು ಪೊಲೀಸರ ಬಗ್ಗೆ ಭಯ ಇಟ್ಟುಕೊಳ್ಳಬಾರದು. ಅವರೊಂದಿಗೆ ಮಾಹಿತಿಯನ್ನು ಮುಕ್ತವಾಗಿ ಹಂಚಿಕೊಳ್ಳಬೇಕು ಎಂದು ಅಕ್ಕ ಪಡೆಯ ಎಎಸ್‌ಐ ಸಂಗೀತಾ– ಎಂ.ಬಿ. ಹೇಳಿದರು. ಬಾಲ್ಯವಿವಾಹ ಸಮಾಜಕ್ಕೆ ಮಾರಕವಾಗಿದೆ. ಶಿಕ್ಷಾರ್ಹ ಅಪರಾಧವೂ ಆಗಿದೆ.ಅದನ್ನು ತಡೆಗಟ್ಟಲು ಎಲ್ಲರೂ ಪೊಲೀಸ್ ಇಲಾಖೆ ಜತೆಗೆ ಕೈಜೋಡಿಸಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಶಾಲೆಯ ಆಡಳಿತಾಧಿಕಾರಿ ಸಂತೋಷಕುಮಾರ ಮಂಗಳೂರೆ ನುಡಿದರು. ಅಕ್ಕ ಪಡೆಯ ಅಂಬಿಕಾ ಸಂತೋಷ್, ನೀಲಮ್ಮ, ಅಂಬಿಕಾ, ಶ್ರೀದೇವಿ ಮತ್ತಿತರರು ಇದ್ದರು. ಪ್ರಶಾಂತ ಚಕ್ರವರ್ತಿ ಸ್ವಾಗತಿಸಿದರು. ನೀಲಮ್ಮ ಗಜಲೆ ನಿರೂಪಿಸಿದರು. ಗಣಪತಿ ವಂದಿಸಿದರು.

# ಟಿಎಚ್‌ಒ ವಿರುದ್ಧ ದೂರು: ಕ್ರಮಕ್ಕೆ ಸೂಚನೆ

ಬೀದರ. ಸೆ. 03 : ಔರಾದ್ ತಾಲ್ಲೂಕು ಆರೋಗ್ಯ ಅಧಿಕಾರಿ ವಿರುದ್ಧದ ದೂರಿನ ಕುರಿತು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸೂಚಿಸಿದ್ದಾರೆ. ಸಚಿವರ ಸೂಚನೆ ಮೇರೆಗೆ ಅವರ ಆಪ್ತ ಕಾರ್ಯದರ್ಶಿ ಕೆ.ಎ. ಹಿದಾಯತುಲ್ ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತರಿಗೆ ಪತ್ರ ಬರೆದಿದ್ದಾರೆ ಎಂದು ಔರಾದ್‌ನ ಸುಭಾಷ್ ಚಂದ್ರಬೋಸ್ ಯುವಕ ಸಂಘದ ಅಧ್ಯಕ್ಷ ರತ್ನದೀಪ್ ಕಸ್ತೂರೆ ಹಾಗೂ ಎಐಸಿಸಿ ಕಿಸಾನ್ ವಿಭಾಗದ ಜಂಟಿ ಸಂಯೋಜಕ ಜಾನಸನ್ ಘೋಡೆ ತಿಳಿಸಿದ್ದಾರೆ. ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಗಾಯತ್ರಿದೇವಿ ಅವರು 18 ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಇತರ ಹುದ್ದೆಗಳ ಪ್ರಭಾರ ಹೊಂದಿದ್ದಾರೆ. ಖಾಸಗಿ ಆಸ್ಪತ್ರೆ ಸಹ ಹೊಂದಿದ್ದಾರೆ. ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ ಅವರನ್ನು ಬೇರೆ ಜಿಲ್ಲೆಗೆ ವರ್ಗಾವಣೆ ಮಾಡಬೇಕು ಎಂದು ರತ್ನದೀಪ ಕಸ್ತೂರೆ ಹಾಗೂ ಜಾನಸನ್ ಘೋಡೆ ಅವರು ಬುಧವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡುರಾವ್ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

# ಈದ್ ಮಿಲಾದ್ : ಡಿಜೆ ಬಳಸಬಾರದು ಮೌಲಾನಾ ಮುಫ್ತಿ ಜಿಶಾನ ನಜ್ಮೀ

ಕಲಬುರಗಿ ,:ಜ.3: ಸೆ. 5ರಂದು ಆಚರಿಸುವ (ಈದ್ ಮಿಲಾದ್ ಉನ್ ನಬೀ) ಹಬ್ಬವನ್ನು ಅರ್ಥ ಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದೆ. ಹಬ್ಬದ ದಿನ ಯುವಕರು ಯಾವುದೇ ಕಾರಣ– ಕ್ಕೂ ಡಿಜೆ ಬಳಬಾರದು, ನಮ್ಮಿಂದ ಬೇರೆಯವರಿಗೆ ಯಾವುದೇ ರೀತಿಯ ತೊಂದರೆ ಆಗಬಾರದು ಎಂದು ಮರ್ಕಜ್ ಸುನ್ನಿ ದಾವತೇ ಎ ಇಸ್ಲಾಮಿ ಖತೀಬ್ ಇಮಾಮ್ , ಮೌಲಾನಾ ಮುಫ್ತಿ ಜಿಶಾನ ನಜ್ಮೀ ಅವರು ಹೇಳಿದರು.

ಸುನ್ನಿ ದಾವತೇ ಎ ಇಸ್ಲಾಮೀಯ ಗುಲ್ಬರ್ಗ ವತಿಯಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಮತ್ತು ಬಡಾವಣೆಗಳಲ್ಲಿ ಜಾಥಾ ಮೂಲಕ

ಹಬ್ಬದ ದಿನ ಯುವಕರು ಯಾವುದೇ ಕಾರಣಕ್ಕೂ ಡಿಜೆ ಬಳಬಾರದು, ಎಂದು ಅರಿವು ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಮೌಲಾನಾ ಮುಫ್ತಿ ಜಿಶಾನ ನಜ್ಮೀ ಅವರು ಮಾತನಾಡಿ. ಈದ್ ಮಿಲಾದ್ ಹಬ್ಬವನ್ನು ಯಾರಿಗೂ ತೆ– ೂಂದರೆ ಆಗದಂತೆ ಆಚರಿಸಲು ತೀರ್ಮಾನಿಸಲಾಗಿದೆ. ಶಾಂತಿ ನಮ್ಮ ಮೂಲ ಧರ್ಮವಾಗಿದೆ. ಈ ನಿಟ್ಟಿನಲ್ಲಿ ಈದ್ ಮಿಲಾದ್ ದಿನದಂದು ಯಾರೇ ಡಿಜೆಗೆ ಅವಕಾಶ ನೀಡಿ ಅಂತ ಮನವಿ ಮಾಡಿದರೇ ಆ ಮನವಿಗೆ ಅವಕಾಶ ನೀಡಬಾರದು ಎಂದು ಹೇಳಿದರು. ಈ ನಿಟ್ಟಿನಲ್ಲಿ ಈದ್ ಮಿಲಾದ್ ದಿನದಂದು ಡಿಜೆ ಬಳಸದೇ ಶಾಂತಿಯ ಸಂದೇಶ ಸಾರಲು ನಾವು ತಿರ್ಮಾನಿಸಿದ್ದೇವೆ ಹೇಳಿದರು.

ಈ ಸಂದರ್ಭದಲ್ಲಿ ಮೌಲಾನಾ ಶೈಬಾಜ್ ನಜ್ಮೀ, ಅರೀಫ್ ಅಕ್ತಾರ, ಮಹ್ಮದ ಇಮ್ರಾನ್, ಸೇರಿದಂತೆ ಇತರರು ಇದ್ದರು.

ಈದ್ ಮಿಲಾದ್ ಹಬ್ಬ ಮುಸಲ್ಮಾನ ಬಾಂಧವರ ಪವಿತ್ರ ಹಬ್ಬವಾಗಿದೆ. ಈ ಪವಿತ್ರ ದಿನದಂದು ಬಡವರಿಗೆ, ನಿರ್ಗತಿಕರಿಗೆ ಸಹಾಯ ಮಾಡವುದೇ ನಮ್ಮ ಧ್ಯೇಯವಾಗಿದೆ

**ಸೈಯದ್ ಹಫೀಜ್ ಅಜರ್ ಅಲಿ**
**ಮುಖಂಡ ಸುನ್ನಿ ದಾವತೇ ಎ ಇಸ್ಲಾಮಿ**

ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ

## ಕಾರ್ಯಕ್ಕೆ ಅಧಿಕಾರಿಗಳು ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಜಿಲ್ಲಾಧಿಕಾರಿ.



ಮಲ್ಲಮ್ಮ ನುಡಿ ವಾರ್ತೆ

ಕಲಬುರಿಗ: ಸೆ. 03–ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯಕ್ಕೆ ಉಪವಿಭಾಗಾಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರಗಳು, ಸಿ.ಡಿ.ಪಿ.ಓ. ಮತ್ತು ಇ.ಓ.ಗಳು ಸಮೀಕ್ಷೆ ಕಾರ್ಯದಲ್ಲಿ ಯಾವುದೇ ರೀತಿ ಲೋಪವಾಗದಂತೆ ಎಚ್ಚರಿಕೆ ವಹಿಸಿ ಸಮೀಕ್ಷೆ ಕಾರ್ಯ ಪೂರ್ಣಗೊಳಿಸಿ ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಹೇಳಿದರು.

ಸೋಮವಾರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯ ನಾಗರಿಕರ ಮತ್ತು ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷೆ ಕಾರ್ಯವನ್ನು ನಡೆಸುವ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಲಬುರಗಿ ವಿದ್ಯುತ್ ನಿಗಮ ನಿಯಮಿತ, ಕಲಬುರಗಿ ವತಿಯಿಂದ ಪ್ರತಿ ಮನೆಯ ಲಿಸ್ಟಿಂಗ್ ಕಾರ್ಯವನ್ನು ಮೀಟರ್ ರೀಡರ್‌ಗಳಿಂದ ಮಾಡಲಾಗುತ್ತಿದ್ದು, ಸೆಪ್ಟೆಂಬರ್ 5 ರೊಳಗಾಗಿ ಮಾಹಿತಿ ನೀಡಬೇಕೆಂದು ಜೆಸ್ಕಾಂ ಅಧಿಕಾರಿ ವಿಶ್ವನಾಥ ರೆಡ್ಡಿ ಅವರಿಗೆ ನಿರ್ದೇಶನ ನೀಡಿದರು.

ಗಣತಿದಾರರಿಗೆ ಹಾಗೂ ಮೇಲ್ವಿಚಾರಕರಿಗೆ 2 ಹಂತದ ತರಬೇತಿಯನ್ನು ನೀಡುವಂತೆ ಸೂಚಿಸಲಾಯಿತು. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ತಾಂತ್ರಿಕ ಪರಿಣಿತರ ಸಮಿತಿಯನ್ನು ರಚಿಸಲು ಸೂಚಿಸಿದರು. ಸಮೀಕ್ಷೆಯ ಮೇಲ್ವಿಚಾರಣೆಗೆ ಶಾಲಾ ಮತ್ತು ಶಿಕ್ಷಣ ಇಲಾಖೆಯ ವಿವಿಧ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳಾಗಿ ನೇಮಿಸಲು ಸೂಚಿಸಿದರು.

ಕಲಬುರಗಿ ನಗರದಲ್ಲಿ ಸಮೀಕ್ಷೆ ಕಾರ್ಯವನ್ನು ಮಹಾನಗರಪಾಲಿಕೆ ಅಧಿಕಾರಿ ಹಾಗೂ ಸಿಬ್ಬಂದಿಗಳ ಸಹಯೋಗದೊಂದಿಗೆ ಹಾಗೂ ಜಿಲ್ಲೆಯ ಇತರೆ ನಗರ ಪ್ರದೇಶಗಳಲ್ಲಿ ನಗರಸಭೆ/ ಪುರಸಭೆ/ಪಟ್ಟಣ ಪಂಚಾಯತಗಳ ಅಧಿಕಾರಿ ಹಾಗೂ ಸಿಬ್ಬಂದಿಗಳ ಸಹಯೋಗದೊಂದಿಗೆ ನಿಗಧಿತ ಅವಧಿಯೊಳಗೆ ಸಮೀಕ್ಷೆ ಪೂರ್ಣಗೊಳಿಸಲು ಸೂಚಿಸಿದರು.

ತಾಲ್ಲೂಕು ಮಟ್ಟದಲ್ಲಿ ಸಂಬಂಧಪಟ್ಟ ಉಪವಿಭಾಗ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿಯನ್ನು ರಚಿಸಲಾಗಿದ್ದು, ಸಂಬಂದಪಟ್ಟ ತಹಶಿಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ, ಮುಖ್ಯಾಧಿಕಾರಿಗಳು ಪುರಸಭೆ, ಕ್ಷೇತ್ರಶಿಕ್ಷಣಾಧಿಕಾರಿಗಳು, ಸಹಾಯಕ ನಿರ್ದೇಶಕರು, ಮಕ್ಕಳ ಮತ್ತು ಅಭಿವೃದ್ಧಿ ಇಲಾಖೆ, ಹಾಗೂ ತಾಲ್ಲೂಕು ಕಲ್ಯಾಣಾಧಿಕಾರಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ರವರುಗಳು ತಾಲ್ಲೂಕು ಮಟ್ಟದಲ್ಲಿ ಸಮೀಕ್ಷೆ ಕಾರ್ಯವನ್ನು ನಡೆಸುವ ಜವಾಬ್ದಾರಿಯನ್ನು ಹೊಂದಿರುತ್ತಾರೆ. ಅಂತರ್ಜಾಲ ಸಂಪರ್ಕ ವಿಲ್ಲದ ಅರಣ್ಯ ಹಾಗೂ ಕಾಡಂಚಿನ ಮತ್ತು ವಿದ್ಯುತ್ ಸಂಪರ್ಕ ವಿಲ್ಲದ ಪ್ರದೇಶಗಳಲ್ಲಿ ಸಮೀಕ್ಷೆ ಕಾರ್ಯವನ್ನು ಸಂಬಂಧಪಟ್ಟ ಗ್ರಾಮ ಆಡಳಿತಾಧಿಕಾರಿಗಳಿಂದ ಸಮೀಕ್ಷೆ ನಡೆಸಲಾಗುತ್ತದೆ ಎಂದರು.

ಜೆಸ್ಕಾಂ ಕಲಬುರಗಿ ವತಿಯಿಂದ ಹೌಸ್ ಲಿಸ್ಟಿಂಗ್ ನಂತರ 100 ರಿಂದ 150 ಮನೆಗಳನ್ನು ಒಳಗೊಂಡ ಎನುಮರೇಷನ್ ಬ್ಲಾಕ್ಗಳನ್ನು ರಚಿಸಿ ಪ್ರತಿಯೊಂದಕ್ಕೂ ಒಬ್ಬೊಬ್ಬ ಗಣತಿದಾರರನ್ನು ನೇಮಿಸಲಾಗುವುದು. ಪ್ರತಿ 20 ಬ್ಲಾಕ್ಗಗಳಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಲಾಗುವುದು. ಸಮೀಕ್ಷೆಗೆ ನಿಯೋಜಿಸಿದ ಯಾವ ಅಧಿಕಾರಿ ಹಾಗೂ ಸಿಬ್ಬಂದಿ ನಿರ್ಲಕ್ಷ್ಯತೆ ತೋರದೇ ನಿಗಧಿತ ಅವಧಿಯೊಳಗೆ ಸಮೀಕ್ಷೆ ಕಾರ್ಯವನ್ನು ಪೂರ್ಣಗೊಳಿಸಲು ಸೂಚಿಸಲಾಯಿತು.

ಸಮೀಕ್ಷೆ ಕಾರ್ಯದಲ್ಲಿ ಕರ್ತವ್ಯ ನಿರ್ಲಕ್ಷ್ಯ ತೋರಿದ ಯಾವುದೇ ಅಧಿಕಾರಿ/ ಸಿಬ್ಬಂದಿಯ ವಿರುದ್ದ ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಪ್ಟೆಂಬರ್ 20 ರಿಂದ ಆಕ್ಟೋಬರ್ 7 ರ ವರೆಗೆ ನಡೆಸುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸಮೀಕ್ಷೆಯ ವಿಧಾನವನು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸೋಮಶೇಖರ ವೈ. ವಿವರಿಸಿದರು,

ಸಮೀಕ್ಷಾ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ಮಾಸ್ಟರ್ ಟ್ರೇನರ್ಸ್‌ಗಳಿಂದ ತರಬೇತಿ ನೀಡಿ ಸಮೀಕ್ಷೆ ಕಾರ್ಯದಲ್ಲಿ ಯಾವುದೇ ರೀತಿಯ ಸಮಸ್ಯೆ ಆಗದಂತೆ ಕ್ರಮವಹಿಸಿ ರವರೆಗೆ ಸಮೀಕ್ಷೆ ಕಾರ್ಯಗಳನ್ನು ಪೂರ್ಣಗೊಳಿಸಬೇಕು ಎಂದು ಡಿ.ಸಿ. ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸೂರ್ಯಕಾಂತ ಮದಾನೆ ಅವರಿಗೆ ಸಮೀಕ್ಷೆ ಕಾರ್ಯದಲ್ಲಿ ಪಾಲ್ಗೊಳ್ಳುವ ಶಿಕ್ಷಕರು ತಮ್ಮ ಮೊಬೈಲ್ ಮತ್ತು ಲ್ಯಾಪಟಾಪಗಳನ್ನು ಬಳಸಿಕೊಂಡು ಯಾವುದೇ ರೀತಿ ಲೋಪವಾಗದಂತೆ ನಿಖರವಾದ ಮಾಹಿತಿಯನ್ನು ಮೊಬೈಲ್‌ನಲ್ಲಿ ಅಪ್ಲಿಕೇಶನ್‌ನಲ್ಲಿ ದತ್ತಾಂಶವನ್ನು ನಮೂದಿಸುವಂತೆ ಕ್ರಮಕೈಗೊಳ್ಳಬೇಕೆಂದು ಸೂಚಿಸಿದರು

ತಾಲ್ಲೂಕು ಪಂಚಾಯತ ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳು ಸಮೀಪ ಇರುವ ಕಾರಣದಿಂದ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಕಾರ್ಯದ ಅಂಕಿ ಅಂಶಗಳ ಯಾವುದೇ ಮಾಹಿತಿ ಸೋರಿಕೆ–ಯಾಗದಂತೆ ಕ್ರಮವಹಿಸಬೇಕೆಂದು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿಗಳಾದ ರಾಯಪ್ಪ ಹುಣಸಗಿ ಮಾತನಾಡಿ, ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಜಿಲ್ಲಾಧಿಕಾರಿಗಳು ನೀಡಿದ ನಿರ್ದೇಶನಗಳನ್ನು ಪಾಲಿಸಿ ಸಮೀಕ್ಷೆ ಕಾರ್ಯದಲ್ಲಿ ಯಾವುದೇ ರೀತಿ ಲೋಪವಾಗದಂತೆ ಅಗತ್ಯ ಮುಂಜಾಗೃತ ಕ್ರಮಗಳನ್ನು ವಹಿಸಿ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಉಪವಿಭಾಗಾಧಿಕಾರಿಗಳು ತಹಶೀಲ್ದಾರರು ಮತ್ತು ಇ.ಓ.ಗಳು ಮತ್ತು ಪರಸ್ಪರ ಸಹಕಾರದಿಂದ ನಿಗಧಿತ ಸಮಯದಲ್ಲಿ ಸಮೀಕ್ಷೆ ಕಾರ್ಯಗಳನ್ನು ಪೂರ್ಣಗೊಳಿಸಬೇಕೆಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಭಂವರ್ ಸಿಂಗ್ ಮೀನಾ ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ ಅಲದ್‌ಕಟ್ಟಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಡಿಯುಡಿಸಿ ಜಿಲ್ಲಾ ಯೋಜನಾಧಿಕಾರಿ ಮುನ್ನಾವರ್ ದೌಲಾ, ಕಲಬುರಗಿ ವಲಯ ಅಧೀಕ್ಷಕ ಅಭಿಯಂತರರಾದ ಖಂಡೆಪ್ಪ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಗ್ರೇಡ್–1 ತಹಶೀಲ್ ಆನಂದ ಶೀಲ, ತಾಲೂಕಿನ ತಹಶೀಲ್ದಾರರು, ಇ.ಓ.ಗಳು ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೈಲಾರಲಿಂಗೇಶ್ವರ ದೇವಸ್ಥಾನಕ್ಕೆ ಜಿಲ್ಲಾಧಿಕಾರಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಸೆ.3: ಹರ್ಷಲ್ ಭೋಯರ್ ಜಿಲ್ಲಾಧಿಕಾರಿಗಳು ಯಾದಗಿರಿ ರವರು ಮೈಲಾಪುರ ಗ್ರಾಮದ ಶ್ರೀ ಮೈಲಾರಲಿಂಗೇಶ್ವರ ದೇವಸ್ತಾನಕ್ಕೆ ಇತರೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ದೇವರ ದರ್ಶನ ಪಡೆದು ಅಧಿಕಾರಿಗಳೊಂದಿಗೆ ಹಾಗೂ ಊರಿನ ಗ್ರಾಮಸ್ತರೊಂಧಿಗೆ ಸುಧೀರ್ಘವಾಗಿ ಚರ್ಚಿಸಿ ದೇವಸ್ತಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳ ದ ಸ್ವಚತೆ, ಕುಡಿಯುವ ನೀರು, ದೇವಸ್ತಾನ ಆವರಣದಲ್ಲಿ ವಿದ್ಯುತ್ ವ್ಯವಸ್ಥೆ, ಶೌಚಾಲಯದ ವ್ಯವಸ್ಥೆ, ತೆಂಗಿನ ಕಾಯಿ ಒಡೆಯುವ ಸ್ಥಳ ವ್ಯವಸ್ಥೆ, ಪ್ಲಾಸ್ಟಿಕ್ ನಿಷೇಧದ ಮತ್ತು ಇನ್ನೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

## ಆನೆಹೊಸೂರ ಗ್ರಾಮದಲ್ಲಿ ಎಂಎಲ್ಸಿ ಬಯ್ಯಾಪುರಿಂದ ಸಿಸಿ ರಸ್ತೆ ಭೂಮಿಪೂಜೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಆನೆಹೊಸೂರ ಗ್ರಾಮದಲ್ಲಿ 2024–25ನೇ ಸಾಲಿನ ವಿಧಾನ ಪರಿಷತ್ ಸದಸ್ಯರ 10 ಲಕ್ಷರೂ. ಅನುದಾನದ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಸಿಸಿ ರಸ್ತೆಯ ಭೂಮಿಪೂಜೆಯನ್ನು ರಾಯಚೂರು ಹಾಗೂ ಕೊಪ್ಪಳ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪುರ ಅವರು ಸ್ಥಳೀಯ ಗ್ರಾಮ ಪಂಚಾಯಿತಿ ಸದಸ್ಯರ ಜೊತೆಗೂಡಿ ನೆರವೇರಿಸಿದರು.

ನಂತರ ಮಾತನಾಡಿದ ಅವರು, "ಗ್ರಾಮದಲ್ಲಿ ನಡೆಯುವ ಕಾಮಗಾರಿಗಳು ಗುಣಮಟ್ಟದಿಂದ ನಡೆಯಬೇಕು. ಇದಕ್ಕಾಗಿ ಸಂಬಂಧಪಟ್ಟ ಕೆಆರ್‌ಐಡಿಎಲ್ ಅಧಿಕಾರಿಗಳು ವಿಶೇಷ ಗಮನ ಹರಿಸಬೇಕು" ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಪಾಮಯ್ಯ ಮುರಾರಿ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಮಾಜಿ ಜಿಪಂ ಅಧ್ಯಕ್ಷ ಗುಂಡಪ್ಪ ನಾಯಕ, ಬಸವರಾಜಗೌಡ ಗಣೇಕಲ, ಮಾಜಿ ತಾ.ಪಂ ಉಪಾಧ್ಯಕ್ಷ ಡಿ.ಜಿ. ಗುರಿಕಾರ, ಬಸವಂತಪ್ಪ ಗೌಡ, ಸಂಗಣ್ಣ ನಗುಮುಖ, ಬ್ಲಾಕ್ ಕಾಂಗ್ರೆಸ್ ಪರಿಶಿಷ್ಟ ಪಂಗಡ ವಿಭಾಗದ ತಾಲೂಕು ಅಧ್ಯಕ್ಷ ಜಗದೀಶ ಗೌಡ ಮಾಲಿಪಾಟೀಲ, ಹಿಂದುಳಿದ ವರ್ಗಗಳ ತಾಲೂಕು ಅಧ್ಯಕ್ಷ ಪ್ರಕಾಶ ಕುರಿ ಚಿತ್ತಾಪುರ, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಅನೇಕ ಗ್ರಾಮಸ್ಥರು ಉಪಸ್ಥಿತರಿದ್ದರು.

## ನೇಕಾರರ ಸಮ್ಮಾನ ಯೋಜನೆಯಡಿ ಆರ್ಥಿಕ ನೆರವು: ಅರ್ಜಿ ಆಹ್ವಾನ

ಕಲಬುರಗಿ,ಸೆ.03–ಕೈಮಗ್ಗ ಮತ್ತು ಜವಳಿ ಇಲಾಖೆಯ ನೇಕಾರರ ಸಮ್ಮಾನ ಯೋಜನೆಯಡಿ 2025–26ನೇ ಸಾಲಿನಲ್ಲಿ ಕಾರ್ಯನಿರತ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರು ಹಾಗೂ ಮಗ್ಗ ಪೂರ್ವ ಚಟುವಟಿಕೆಯಲ್ಲಿ ತೊಡಗಿರುವವರಿಗೆ ವಾರ್ಷಿಕ 5000 ರೂ.ಗಳ ಆರ್ಥಿಕ ನೆರವನ್ನು ಡಿ.ಬಿ.ಟಿ ಮೂಲಕ ನೇರ ವರ್ಗಾವಣೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಅರ್ಜಿ ಸಲ್ಲಿಕೆಗೆ 2025ರ ಸೆಪ್ಟೆಂಬರ್ 15 ರಂದು ಕೊನೆಯ ದಿನವಾಗಿದೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಕೈಮಗ್ಗ ಮತ್ತು ವಿದ್ಯುತ್ ಮಗ್ಗದ ನೇಕಾರರು ಹಾಗೂ ಮಗ್ಗ ಪೂರ್ವ ಚಟುವಟಿಕೆಗಳಲ್ಲಿ ತೊಡಗಿರುವವರು ನಿಗದಿತ ಅರ್ಜಿ ನಮೂನೆ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, "ಜಲಭವನ" ನೆಲಮಹಡಿ, ರಾಜಾಪುರ–ಕುಸನೂರ ರಸ್ತೆ, ಕಲಬುರಗಿ ಕಚೇರಿಯನ್ನು ಸಂಪರ್ಕಿಸಲು ಅಥವಾ ಕಚೇರಿ ದೂರವಾಣಿ ಸಂಖ್ಯೆ 08472–278629 ಕ್ಕೆ ಸಂಪರ್ಕಿಸಲು ಕೋರಲಾಗಿದೆ.

## ತಳವಾರ ಸಮುದಾಯದ ಬೇಡಿಕೆ ಈಡೇರಿಕೆಗೆ ಒತ್ತಾಯ : 16ರಂದು ಸಿಎಂಗೆ ಕಪ್ಪು ಬಾವುಟ ಪ್ರದರ್ಶನ



ಕಲಬುರಗಿ: ತಳವಾರ ಸಮುದಾಯವನ್ನು ಕೇಂದ್ರ ಸರ್ಕಾರ ಪರಿಶಿಷ್ಟ ಪಂಗಡ (ಖಖ) ಪಟ್ಟಿಗೆ ಸೇರಿಸಿ ಪ್ರಮಾಣ ಪತ್ರ ನೀಡಿರುತ್ತಾರೆ, ಈಗ ಅಧಿಕಾರದಲ್ಲಿರುವ ರಾಜ್ಯ ಸರ್ಕಾರ ಹಾಗೂ ಅಧಿಕಾರಿಗಳು ಅನಾವಶ್ಯಕ ಗೊಂದಲಗಳನ್ನು ಸೃಷ್ಟಿ ಮಾಡಿ ಎಸ್ ಟಿ ಸೌಲಭ್ಯದಿಂದ ವಂಚಿಸುವ ಉನ್ನಾರ ನಡೆದಿರುವುದು ಅತ್ಯಂತ ತೀವ್ರವಾಗಿ ಖಂಡಿಸಿದರು.

ಅಖಿಲ ಕರ್ನಾಟಕ ಮಹರ್ಷಿ ವಾಲ್ಮೀಕಿ ತಳವಾರ ಸಮಾಜ ಸಂಘಟನೆಯ ಅಧ್ಯಕ್ಷ ಸಂತೋಷ್ ತಳವಾರ ಪತ್ರಿಕಾ ಪ್ರಕಟಣೆ ನೀಡಿದ್ದು, ಸೆಪ್ಟೆಂಬರ್ 16, 17ರಂದು ಮುಖ್ಯಮಂತ್ರಿ ಅವರಿಗೆ ಕಪ್ಪು ಬಾವುಟ ಪ್ರದರ್ಶನ ಮಾಡುವ ಮೂಲಕ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

ಅವರು ಮುಂದುವರಿದು, "ತಳವಾರ ಸಮುದಾಯದ ಹಕ್ಕುಗಳನ್ನು ಕಸಿದುಕೊಳ್ಳಲು ನಡೆಯುತ್ತಿರುವ ಪ್ರಯತ್ನಗಳನ್ನು ತೀವ್ರವಾಗಿ ಖಂಡಿಸುತ್ತೇವೆ. ಸರ್ಕಾರ ತಕ್ಷಣವೇ ಸಮುದಾಯಕ್ಕೆ ಎಸ್‌ಟಿ ಪ್ರಮಾಣ ಪತ್ರ ವಿತರಿಸಬೇಕು, ಇಲ್ಲವಾದರೆ ದೊಡ್ಡ ಮಟ್ಟದ ಹೋರಾಟ ಅನಿವಾರ್ಯವಾಗುತ್ತದೆ" ಎಂದು ಎಚ್ಚರಿಕೆ ನೀಡಿದರು.

ಕಾನೂನುಬದ್ಧ ಹಕ್ಕು: 2018ರ ಮಾರ್ಚ್ 21ರಂದು ಕೇಂದ್ರ ಸಚಿವ ಸಂಪುಟ ತಳವಾರರನ್ನು ಎಸ್‌ಟಿ ಪಟ್ಟಿಗೆ ಸೇರಿಸಲು ಅನುಮೋದನೆ ನೀಡಿತ್ತು. 2020ರ ಮಾರ್ಚ್ 19ರಂದು ರಾಷ್ಟ್ರಪತಿ ತಿದ್ದುಪಡಿ ಕಾಯ್ದೆಗೆ ಅಂಕಿತ ಹಾಕಿದ್ದರು. 2020ರ ಮಾರ್ಚ್ 20ರಂದು ಗ್ಯಾಜೆಟ್ ಪ್ರಕಟಣೆ ಹೊರಬಂದಿದ್ದು, ತಳವಾರರು ಕಾನೂನುಬದ್ಧವಾಗಿ ಎಸ್‌ಟಿ ಪಟ್ಟಿಯಲ್ಲಿದ್ದಾರೆ.

ಆದರೂ, ಕೆಲ ಪ್ರಭಾವಿ ನಾಯಕರು ಹಾಗೂ ಇತರ ಸಮುದಾಯದವರು ತಪ್ಪು ಪ್ರಚಾರ ನಡೆಸಿ ಅಧಿಕಾರಿಗಳ ಮೇಲೆ ಒತ್ತಡ ಹೇರುತ್ತಿದ್ದು, ಬಡ ಕುಟುಂಬಗಳು ಹಾಗೂ ಅರ್ಹ ವಿದ್ಯಾರ್ಥಿಗಳು ಎಸ್.ಟಿ. ಪ್ರಮಾಣ ಪತ್ರಕ್ಕಾಗಿ ಹೋರಾಟ ನಡೆಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಲಾಗಿದೆ. ತಳವಾರರಿಗೆ ಎಸ್.ಟಿ. ಪ್ರಮಾಣ ಪತ್ರ ನೀಡುವುದು ಅಧಿಕಾರಿಗಳ ಕಾನೂನುಬದ್ಧ ಕರ್ತವ್ಯವಾಗಿದ್ದರೂ, ತಹಸಿಲ್ದಾರರು ಅನಾವಶ್ಯಕ ಆದೇಶಗಳನ್ನು ಹೆಸರಿಸಿ ಪ್ರಮಾಣ ಪತ್ರ ನೀಡುವುದನ್ನು ತಿರಸ್ಕರಿಸುತ್ತಿದ್ದಾರೆ ಎಂದು ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಮುದಾಯವು ಬೃಹತ್ ಹೋರಾಟಕ್ಕೆ ಸಜ್ಜಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ತಳವಾರ ಸಮಾಜದ ಜನರು ಭಾಗವಹಿಸಿ ಸರ್ಕಾರದ ಅನ್ಯಾಯದ ವಿರುದ್ಧ ಧ್ವನಿ ಎತ್ತುವಂತೆ ಕರೆ ನೀಡಲಾಗಿದೆ.

## ವಿವಿಧ ಫಲಾನುಭವಿ ಆಧಾರಿತ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ


ಕಲಬುರಗಿ,ಸೆ.03–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹ ವಿಕಲಚೇತನ ಫಲಾನುಭವಿಗಳಿಂದ ಸೇವಾ ಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಈ ಫಲಾನುಭವಿ ಆಧಾರಿತ ಯೋಜನೆಗಳನ್ನು ಸೇವಾ ಸಿಂಧು ತಂತ್ರಾಂಶ ಇವರು ಡಿ.ಬಿ.ಟಿ. (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಿದ್ದು, ವಿವಿಧ ಫಲಾನುಭವಿ ಆಧಾರಿತ ಯೋಜನೆಗಳಾದ ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದೋಗ ಭತ್ಯೆ, ಶಿಶು ಪಾಲನಾ ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂ–ಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಠಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನ ಸಲಕರಣೆಗಳ ಯೋಜನೆ ಹಾಗೂ ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ದ್ವಿಚಕ್ರ ವಾಹನ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಮೂಲಕ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in/Sevasindhu/DepartmentServices-Kannada)ದಲ್ಲಿ ಆನ್‌ಲೈನ್ ಮೂಲಕ 2025ರ ಸೆಪ್ಟೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ಮೊಬೈಲ್ ಸಂಖ್ಯೆ: 08472–235222 ಕಲಬುರಗಿ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು (ಎಮ್.ಆರ್.ಡಬ್ಲ್ಯೂ) ತಾಲೂಕು ಪಂಚಾಯಿತಿ ಕಚೇರಿ ಮೊಬೈಲ್ ಸಂಖ್ಯೆ–9972079714, ಅಫಜಲಪೂರ (ಯು.ಆರ್.ಡಬ್ಲ್ಯೂ)–8880023232, ಆಳಂದ–9483054495, ಜೇವರ್ಗಿ–9741875881, ಚಿತ್ತಾಪೂರ–9845204328, ಚಿಂಚೋಳಿ–9880671171, ಸೇಡಂ–9902417925, ಕಾಳಗಿ–9964859658, ಶಹಾಬಾದ–6360771314 ಹಾಗೂ ಯಡ್ರಾಮಿ–9900866151 ಗಳಿಗೆ ಸಂಪರ್ಕಿಸಬೇಕು. ಈ ಹಿಂದೆ 2024–25ನೇ ಸಾಲಿನಲ್ಲಿ ಮೇಲಿನ ಯೋಜನೆಯಡಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೆ ಇರುವ ಅರ್ಜಿದಾರರು ಮತ್ತೊಮ್ಮೆ ಕಡ್ಡಾಯವಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

## ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತ ತರಬೇತಿಗಾಗಿ ಅಭ್ಯರ್ಥಿಗಳಿಗೆ ಆಯ್ಕೆ ಸಭೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಿಗ: ಸೆ. 03–2025–26 ನೇ ಸಾಲಿನ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತದಲ್ಲಿ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಸೆಪ್ಟೆಂಬರ್ 1 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರ ಅಧ್ಯಕ್ಷತೆ–ಯಲಿ ಸೋಮವಾರಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಭೆ ಜರುಗಿಸಲಾಯಿತು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಶ್ರೀನಿವಾಸ ನವಲೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯದರ್ಶಿ ಭಂವರ್ ಸಿಂಗ್ ಮೀನಾ, ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ ಅಲದ್ ಕಟ್ಟಿ, ಕಲಬುರಗಿ ಬಾರ್ ಅಸೋಸಿಯೇಷನ್ ಅಧ್ಯಕ್ಷ ಎಸ್.ವಿ. ಪ್ರಸಾರ, ಜಿಲ್ಲಾ ಸರ್ಕಾರಿ ವಕೀಲರಾದ ಶ್ರೀಮತಿ ಅತಿಯಾಸುಲ್ತನಾ, ಅಪರ ಜಿಲ್ಲಾ ಸರ್ಕಾರಿ ವಕೀಲ ಶರಣಮ್ಮ ಪಾಟೀಲ, ಡಿಡಿಯುಡಿಸಿ ಯೋಜನಾ ನಿರ್ದೇಶಕ ಮುನ್ನವರ್ ದೌಲಾ ,ಜಿಲ್ಲಾ ಹಿಂದುಳಿದವ ವರ್ಗಗಳ ಉಪನಿರ್ದೇಶಕ ಸೋಮಶೇಖರ ವೈ ಉಪಸ್ಥಿತರಿದ್ದರು

## 13 ಫಲಾನುಭವಿ ಆಧಾರಿತ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.03–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2025–26ನೇ ಸಾಲಿಗೆ ಇಲಾಖೆಯ ಕೆಳಕಂಡ ವಿವಿಧ 13 ಫಲಾನುಭವಿ ಆಧಾರಿತ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹ ವಿಕಲಚೇತನ ಫಲಾನುಭವಿಗಳಿಂದ ಸೇವಾ ಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.


ಈ ಫಲಾನುಭವಿ ಆಧಾರಿತ ಯೋಜನೆಗಳನ್ನು ಸೇವಾ ಸಿಂಧು ತಂತ್ರಾಂಶ ಇವರು ಡಿ.ಬಿ.ಟಿ. (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಿದ್ದು, ವಿವಿಧ ಫಲಾನುಭವಿ ಆಧಾರಿತ ಯೋಜನೆಗಳಾದ ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದೋಗ ಭತ್ಯೆ, ಶಿಶು ಪಾಲನಾ ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನ ಸಲಕರಣೆಗಳ ಯೋಜನೆ ಹಾಗೂ ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ದ್ವಿಚಕ್ರ ವಾಹನ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಮೂಲಕ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಸೇವಾಸಿಂಧು ವೆಬ್‌ಸೈಟ್ಃಣಣಠಿ:// ಜತಛಿಟಿಜ್ಷಣ.ಞಚಿಡಿಟಿಚಿಣಚಿಞಚಿ.ರಠತ.ಟಿ/ಖಜತಛಿಟಿಜ್ಷಣ/ಆಜ–ಠಿಚಿಡಿಣಟಜಟಿಣಖಜಡಿತುಛಿಜ–ಏಚಿಟಿಟಿಚಿಜಚಿ) ದಲ್ಲಿ ಆನ್‌ಲೈನ್ ಮೂಲಕ 2025ರ ಸೆಪ್ಟೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ: 08472–235222 ಗೆ ಸಂಪರ್ಕಿಸಲು ಕೋರಲಾಗಿದೆ.

## ಉದ್ಯೋಗ ಖಾತ್ರಿ ಯೋಜನೆಯಡಿ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ್:– ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್ ಇವರಿಗೆ ಸನ್ಮಾನಿಸಿ ಶುಭಾಶಯ ಕೋರಲಾಯಿತು. ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಪರಿಸರ



ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ಜೊತೆಗೆ ಸಸಿ ನೆಡಿಸುವ ಕಾಮಗಾರಿ ತೆಗೆದುಕೊಳ್ಳಲು ಮನವಿ ಮಾಡಲಾಯಿತ್ತು.

ತಾಲೂಕಿನ ಮರಕುಂಡಾ ಗ್ರಾಮದಲ್ಲಿ ಖಾಲಿ ನಿವೇಶನಗಳಲ್ಲಿ ಸಸಿ ನೆಡೆಸಲು ಕಾರ್ಯಕ್ರಮ ಕೈಗೊಳ್ಳಲು ಮನವಿ ಸಲ್ಲಿಸಲಾಯಿತು.

## ಉಚಿತವಾಗಿ ವಿವಿಧ ತರಬೇತಿ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.03–ಕಲಬುರಗಿ ಎಸ್.ಬಿ.ಐ. ಗ್ರಾಮೀಣ ಸ್ವ–ಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಉಚಿತವಾಗಿ ಈ ಕೆಳಕಂಡ ವಿವಿಧ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಇದಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಎಸ್.ಬಿ.ಐ. ಆರ್‌ಸೆಟ್ ನಿರ್ದೇಶಕರು ತಿಳಿಸಿದ್ದಾರೆ.

ಸೆಪ್ಟೆಂಬರ್ 10 ರಿಂದ 22 ರವರೆಗೆ 13 ದಿನಗಳ ಕಾಲ ಸೆಣಬಿನ ಉತ್ಪನ್ನಗಳ ಉದ್ಯಮ ಕುರಿತು ತರಬೇತಿ ಹಮ್ಮಿಕೊಳ್ಳಲಾಗಿದ್ದು, ಅರ್ಜಿ ಸಲ್ಲಿಕೆಗೆ ಸೆಪ್ಟೆಂಬರ್ 9 ಕೊನೆಯ ದಿನವಾಗಿದೆ. ಸೆಪ್ಟೆಂಬರ್ 18 ರಿಂದ 30 ರವರೆಗೆ 13 ದಿನಗಳ ಕಾಲ ಕೃತಕ ಅಭರಣ ತಯಾರಿಕಾ ತರಬೇತಿ ಹಮ್ಮಿಕೊಳ್ಳಲಾಗಿದ್ದು, ಅರ್ಜಿ ಸಲ್ಲಿಕೆಗೆ ಸೆಪ್ಟೆಂಬರ್ 17 ರಂದು ಕೊನೆಯ ದಿನವಾಗಿದೆ.

ಅಭ್ಯರ್ಥಿಗಳಿಗೆ ಕನಿಷ್ಠ ಓದಲು ಹಾಗೂ ಬರೆಯಲು ಬರಬೇಕು. ವಯೋಮಿತಿ 18 ರಿಂದ 45 ದೊಳಗಿರಬೇಕು. ಬಿ.ಪಿ.ಎಲ್., ಅಂತ್ಯೋದಯ ರೇಷನ್, ಎಮ್‌ಜಿಎನ್‌ಆರ್‌ಇಜಿಎ ಕಾರ್ಡ್ ಹೊಂದಿದ ಕುಟುಂಬದ ನಿರುದ್ಯೋಗಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿ ಸಂದರ್ಭದಲ್ಲಿ ಉಚಿತ ಊಟ ಹಾಗೂ ವಸತಿ ಸೌಲಭ್ಯ ನೀಡಲಾಗುತ್ತದೆ.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ತರಬೇತಿ ಸಂಸ್ಥೆಯನ್ನು ಹಾಗೂ ಮೊಬೈಲ್ ಸಂಖ್ಯೆ 9900135705, 7019939996, 9901098123 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.



ಹುಮನಾಬಾದ:ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲರವರ ನಿವಾಸದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಲಕ್ಷ್ಮೀದೇವಿಯ ಮೂರ್ತಿ ಪ್ರತಿಷ್ಠಾಪಿಸಲಾಯಿತ್ತು. ಲಕ್ಷ್ಮೀದೇವಿಗೆ ಪ್ರೇಮಾ ಆರ್. ಪಾಟೀಲರವರು ವಿಶೇಷ ಪೂಜೆ ಸಲ್ಲಿಸಿ ದರ್ಶನ ಪಡೆದರು. ಹಾಗೂ ಮಹಿಳೆಯರಿಂದ ಧಾರ ಕಟ್ಟಿಕೊಳ್ಳುವ ಕಾರ್ಯಕ್ರಮ ವೈಭವದಿಂದ ಜರುಗಿತ್ತು. (ಮಲ್ಲಮ್ಮ ನುಡಿ ಚಿತ್ರ)

ಸೆ.04 ರಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ 13ನೇ ಘಟಿಕೋತ್ಸವ ಸಮಾರಂಭ

# ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮೂವರು ಮಹನೀಯರಿಗೆ ಗೌರವ ಡಾಕ್ಟರೇಟ್: ಕುಲಪತಿ ಪ್ರೊ.ಎಂ.ಮುನಿರಾಜು

ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ,ಸೆ.03–ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ 2023–24 ನೇ ಸಾಲಿನ 13 ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವು ಸೆ.04 ರಂದು ಬೆಳಿಗ್ಗೆ 11 ಗಂ–ಟೆಗೆ ವಿಶ್ವವಿದ್ಯಾಲಯದ ಬಯಲು ರಂಗಮಂದಿರದ ಆವರಣದಲ್ಲಿ ನಡೆಯಲಿದೆ. ಘಟಿಕೋತ್ಸವದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮೂವರು ಮಹನೀಯರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಗುವುದು ಎಂದು ಕುಲಪತಿ ಪ್ರೊ.ಎಂ.ಮುನಿರಾಜು ಅವರು ಹೇಳಿದರು.

ನಗರದ ಹೊರವಲಯದ ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯ ಪರೀಕ್ಷಾ ಭವನದಲ್ಲಿ ಬುಧವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಘಟಿಕೋತ್ಸವದಲ್ಲಿ ರಾಜ್ಯದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರಚಂದ್ ಗೆಹ್ಲೋಟ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ. ಘಟಿಕೋತ್ಸವದ ಭಾಷಣವನ್ನು ನವದೆಹಲಿಯ ಇಂಟರ್ ಯುನಿವರ್ಸಿಟಿ ಎಕ್ಸಲರೇಟರ್ ನ ನಿರ್ದೇಶಕರಾದ ಪ್ರೊ.ಅವಿನಾಶ್ ಚಂದ್ರ ಪಾಂಡೆ ಅವರು ಮಾಡಲಿದ್ದಾರೆ ಎಂದು ತಿಳಿಸಿದರು.

ಉನ್ನತ ಶಿಕ್ಷಣ ಸಚಿವರು ಹಾಗೂ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಮ–ಕುಲಾಧಿಪತಿಗಳಾದ ಡಾ.ಎಂ.ಸಿ.ಸುಧಾಕರ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ. ವಾರ್ಷಿಕ ಘಟಿಕೋತ್ಸವದ ನೇತೃತ್ವವನ್ನು ವಿಶ್ವವಿದ್ಯಾಲಯದ ಕುಲಪತಿಗಳಾದ







ಪ್ರೊ.ಎಂ.ಮುನಿರಾಜು ಅವರು ವಹಿಸಲಿದ್ದಾರೆ. ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರು, ವಿದ್ಯಾವಿಷಯಕ ಪರಿಷತ್ ಸದಸ್ಯರುಗಳು, ಕುಲಸಚಿವ ನಾಗರಾಜು.ಸಿ ಹಾಗೂ ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ ಅವರುಗಳು ಕುಲಪತಿಗಳಿಗೆ ಸಾಥ್ ನೀಡಲಿದ್ದಾರೆ ಎಂದು ತಿಳಿಸಿದರು.

**ಘಟಿಕೋತ್ಸದ ವಿಶೇಷತೆಗಳು; 3 ಜನರಿಗೆ ಗೌರವ ಡಾಕ್ಟರೇಟ್ ಪ್ರದಾನ:** ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಇರ್ಫಾನ್ ರಜಾಕ್, ಡಾ.ವಸುಂಧರಾ ಭೂಪತಿ, ಬಾವಿಹಳ್ಳಿ ನಾಗನಗೌಡ ಸೇರಿ ಮೂರು ಮಹನೀಯರಿಗೆ ಈ ಬಾರಿಯ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಗುತ್ತಿದೆ ಎಂದು ಕುಲಪತಿ ಪ್ರೊ.ಎಂ.ಮುನಿರಾಜು ಅವರು ಹೇಳಿದರು.

ಈ ಬಾರಿಯ ಘಟಿಕೋತ್ಸವದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ವಿವಿಧ ವಿಭಾಗಗಳ 42 ವಿದ್ಯಾರ್ಥಿಗಳು 51 ಚಿನ್ನದ ಪದಕಗಳನ್ನು ಮುಡಿಗೇರಿಸಿಕೊಳ್ಳಲಿದ್ದಾರೆ. ವಿವಿಧ ವಿಭಾಗಗಳ ಒಟ್ಟು 59 ಸಂಶೋಧನಾರ್ಥಿಗಳು ಡಾಕ್ಟರೇಟ್ ಪದವಿ ಪಡೆಯಲಿದ್ದಾರೆ. ಎಲ್ಲ ವಿಭಾಗಗಳ ಸ್ನಾತಕ ಪದವಿಯ 80 ವಿದ್ಯಾರ್ಥಿಗಳು ಮತ್ತು ಸ್ನಾತಕೋತ್ತರ ಪದವಿಯಿಂದ 75 ವಿದ್ಯಾರ್ಥಿಗಳು ಸೇರಿ ಒಟ್ಟು 155 ವಿದ್ಯಾರ್ಥಿಗಳು ರ್‍ಯಾಂಕ್ ಪ್ರಮಾಣ ಪತ್ರಗಳನ್ನು ಪಡೆಯಲಿದ್ದಾರೆ.

*04 ಚಿನ್ನದ ಪದಕ ಪಡೆದ ವಿದ್ಯಾರ್ಥಿ:*

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿ ಹಂಸ.ಎನ್ ಅವರು 04 ಚಿನ್ನದ ಪದಕಗಳನ್ನು ಪಡೆದುಕೊಂಡಿದ್ದಾರೆ.

**03 ಚಿನ್ನದ ಪದಕ ಪಡೆದ ವಿದ್ಯಾರ್ಥಿ:**

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಔದ್ಯೋಗಿಕ ರಸಾಯನಶಾಸ್ತ್ರ ವಿಭಾಗದ ವಿದ್ಯಾರ್ಥಿ ರಾಜೇಶ್ವರಿ ಅವರು 03 ಚಿನ್ನದ ಪದಕಗಳನ್ನು ಪಡೆದುಕೊಂಡಿದ್ದಾರೆ.

*02 ಚಿನ್ನದ ಪದಕಗಳನ್ನು ಪಡೆದ ವಿದ್ಯಾರ್ಥಿಗಳ ಪಟ್ಟಿ:*

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ಮನೋಜ್, ರಸಾಯನಶಾಸ್ತ್ರ ವಿಭಾಗದ ಸುಹಾನ ತಸ್ಲೀಮ್, ನಂದಿಹಳ್ಳಿಯ ಸ್ನಾತಕೋತ್ತರ ಕೇಂದ್ರದ ಸಮಾಜಕಾರ್ಯ ವಿಭಾಗದ ಶಿಲ್ಪ, ಬಿಬಿಸಿ ಕಾಲೇಜ್ ನ ಬಿಕಾಂ ವಿದ್ಯಾರ್ಥಿನಿ ವಿಷ್ಣುಪ್ರಿಯಾ ಮತ್ತು ವೀರಶೈವ ಮಹಾವಿದ್ಯಾಲಯದ ಬಿಎಸ್ಸಿ ವಿದ್ಯಾರ್ಥಿ ಮಹಮ್ಮದ್ ನಕೀಬಲಿ ಇವರುಗಳು ಪಡೆದು–ಕೊಂಡಿದ್ದಾರೆ.

**ಪರೀಕ್ಷಾ ಫಲಿತಾಂಶ:**

ವಿಶ್ವವಿದ್ಯಾಲಯದ ಸ್ನಾತಕ ಪದವಿಯಲ್ಲಿ ಒಟ್ಟು 19,179 ಸ್ನಾತಕ ಪದವಿ ವಿದ್ಯಾರ್ಥಿಗಳು ಅಂತಿಮ ಪರೀಕ್ಷೆ ಬರೆದು ತಮ್ಮ ಪದವಿಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ. ಸ್ನಾತಕೋತ್ತರ ಪದವಿಯಲ್ಲಿ ಒಟ್ಟು 1,845 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ ಉತ್ತೀರ್ಣರಾಗಿದ್ದಾರೆ.

*ಗೌರವ ಡಾಕ್ಟರೇಟ್ ಪಡೆದ ಮೂರು ಜನರ ಪರಿಚಯ ಇಂತಿದೆ:*

**ಇರ್ಫಾನ್ ರಜಾಕ್:**

ಇರ್ಫಾನ್ ರಜಾಕ್ ಅವರು ಮೂಲತಃ ಬೆಂಗಳೂರಿನವರು. ಪ್ರತಿಷ್ಠಿತ ಪ್ರೆಸ್ಟೀಜ್ ಗ್ರೂಪ್‌ನ ಗೌರವಾಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರಾಗಿದ್ದಾರೆ. ತಮ್ಮ ಉದ್ಯಮಶೀಲತೆ ಹಾಗೂ ಸಮಾಜಮುಖಿ ಸೇವೆಗಾಗಿ ಖ್ಯಾತಿ ಪಡೆದಿದ್ದಾರೆ. ನಾಲ್ಕು ದಶಕಗಳ ವಾಣಿಜ್ಯ, ವ್ಯಾಪಾರ ಹಾಗೂ ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ಯಶಸ್ವಿಯಾಗಿ ಹೂಡಿಕೆ ನಡೆಸಿ ನಾಡಿನ ಖ್ಯಾತ ಉದ್ಯಮಿಗಳಾಗಿ ಮುನ್ನಡೆದಿದ್ದಾರೆ.

ಸತತವಾದ ಅಭಿವೃದ್ಧಿ, ಸಾಮಾಜಿಕ ಹೊಣೆಗಾರಿಕೆ, ಶಿಕ್ಷಣ, ಆರೋಗ್ಯ ಮತ್ತು ಪರಿಸರ ಸಂರಕ್ಷಣೆ ಸೇರಿದಂತೆ ಅನೇಕ ಜನೋಪಕಾರಿ ಕಾರ್ಯಕ್ರಮಗಳನ್ನು ತಮ್ಮ ಸಂಸ್ಥೆಯ ಮೂಲಕ ಕೈಗೊಂಡಿ–ದ್ದಾರೆ. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಎನ್‌ಡಿಟಿವಿ ಹಾಲ್ ಆಫ್ ಫೇಮ್, ಸಿಆರ್‌ಇಡಿಎಐ ಗೌರವ ಪ್ರಶಸ್ತಿ ಹಾಗೂ ಎಂಟ್ರಪ್ರುನರ್ ಆಫ್ ದಿ ಇಯರ್ ಸೇರಿದಂತೆ ಅನೇಕ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆದಿದ್ದಾರೆ. ರಾಯಲ್ ಇನ್ಸಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟಂಟ್ ಸರ್ವೇಯರ್ (ಎಫ್‌ಆರ್‌ಐಸಿಎಸ್) ನ ಫೆಲೊ ಆಗಿ 2013ರಿಂದ ಜಾಗತಿಕ ಮಟ್ಟದಲ್ಲಿ ಮಾನ್ಯತೆ ಪಡೆದಿದ್ದಾರೆ.

*ಡಾ.ವಸಂಧರಾ ಭೂಪತಿ:*

ಡಾ.ವಸಂಧರಾ ಭೂಪತಿ ಅವರು ರಾಯಚೂರಿನಲ್ಲಿ ಜನಿಸಿದವರು. ತಮ್ಮ ವಿಶಿಷ್ಟ ವೈದ್ಯಕೀಯ ಸೇವೆ, ಸಾಹಿತ್ಯ, ಸಮಾಜಸೇವೆ ಮತ್ತು ಪತ್ರಿಕಾ ಅಂಕಣಕಾರರಾಗಿ ಗುರುತಿಸಿಕೊಂಡಿದ್ದಾರೆ. ಆರೋಗ್ಯ ಶಿಬಿರ, ವೈದ್ಯಕೀಯ ಸಾಹಿತ್ಯವನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಅಪಾರ ಸಾಧನೆಗೈದಿದ್ದಾರೆ. ಆರೋಗ್ಯ ಸಂಗತಿ, ಮನೆಯಂಗಳದಲ್ಲಿ ಔಷಧಿವನ ಮುಂತಾದ ಕೃತಿಗಳನ್ನು ರಚಿಸಿದ್ದಾರೆ. 65ಕ್ಕೂ ಹೆಚ್ಚು ಆರೋಗ್ಯ ಕೃತಿಗಳು ಇಂಗ್ಲೀಷ್ ಮತ್ತು ಹಿಂದಿ ಭಾಷೆಗೆ ಅನುವಾದಗೊಂಡಿವೆ. ಸಾರ್ವಜನಿಕ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಅಪಾರ ಸೇವೆ ಸಲ್ಲಿಸಿದ್ದಾರೆ.

ಅಂತರಾಷ್ಟ್ರೀಯ ಮಟ್ಟದಲ್ಲಿ ನಾಡಿನ ಹೆಸರನ್ನು ಪಸರಿಸಿದ್ದಾರೆ. ಇವರ ಸೇವೆಗೆ ಅನೇಕ ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಪ್ರಶಸ್ತಿಗಳು ಅವರ ಮುಡಿಗೇರಿವೆ. ವೈದ್ಯಕೀಯ, ಸಾಹಿತ್ಯ, ಮಹಿಳಾ ಸಬಲೀಕರಣ, ಮತ್ತು ಸಾಮಾಜಿಕ ಸೇವೆಗಳಿಗೆ ತಮ್ಮ ಜೀವನ ಮುಡಿಪಾಗಿಟ್ಟಿದ್ದಾರೆ.

*ಬಾವಿಹಳ್ಳಿ ನಾಗನಗೌಡ:*

ಗಣಿನಾಡಿನ ಪ್ರಸಿದ್ಧ ಉದ್ಯಮಿಯಾಗಿರುವ ಇವರು, ಬಿಕೆಜಿ ಫೌಂಡೇಶನ್ ಮೂಲಕ ಶಿಕ್ಷಣ ಅಭಿವೃದ್ಧಿ, ಸಾಮಾಜಿಕ ಸೇವೆ ಮತ್ತು ಸಾಹಿತ್ಯ–ಸಾಂಸ್ಕೃತಿಕ ಸೇವೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಆರೋಗ್ಯ ಶಿಬಿರಗಳ ಮೂಲಕ ಕ್ಷಯರೋಗಿಗಳ ಚಿಕಿತ್ಸೆಗೆ ಶ್ರಮಿಸಿದ್ದಾರೆ. ಸಮಾಜಮುಖಿ ಕೆಲಸಗಳ ಮೂಲಕ ಸಮುದಾಯಕ್ಕೆ, ದೇವಸ್ಥಾನಗಳ ಜೀರ್ಣೋದ್ದಾರಕ್ಕೆ, ಮೂಲಭೂತ ಸೌಕರ್ಯಗಳ ಕಲ್ಪಿಸಲು ಕೊಡುಗೆ ನೀಡಿದ್ದಾರೆ. ಇವರ ಕಾರ್ಯಗಳಿಗೆ ಕನ್ನಡ ಶ್ರೀ ಮತ್ತು ಸೇವಾರತ್ನ ಪ್ರಶಸ್ತಿಗಳು ಒಲಿದು ಬಂದಿವೆ. ತಾಲ್ಲೂಕು ಕನ್ನಡ ಪರಿಷತ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

ಘಟಿಕೋತ್ಸವದಲ್ಲಿ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರುಗಳು, ಎಲ್ಲ ನಿಕಾಯದ ಡೀನರು, ಮುಖ್ಯಸ್ಥರುಗಳು, ಸಂಯೋಜಕರುಗಳು, ವಿವಿಧ ಮಹಾವಿದ್ಯಾಲಯಗಳ ಪಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕುಲಸಚಿವ ನಾಗರಾಜು.ಸಿ ಹಾಗೂ ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ ಉಪಸ್ಥಿತರಿದ್ದರು.

# ಸೆ.06 ರಂದು ಬಳ್ಳಾರಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.03–ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2025–26ನೇ ಸಾಲಿನ ಬಳ್ಳಾರಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳನ್ನು ಸೆ.06 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣ ಮತ್ತು ಬಿಡಿಎಎ ಫುಟ್ಬಾಲ್ ಮೈದಾನದಲ್ಲಿ ಆಯೋಜಿಸಲಾಗಿದೆ.

ಕ್ರೀಡಾಕೂಟಗಳು: ಅಥ್ಲೇಟಿಕ್ಸ್, ವಾಲಿಬಾಲ್, ಕಬಡ್ಡಿ, ಖೋ–ಖೋ, ಫುಟ್ಬಾಲ್ (ಪುರುಷರಿಗೆ ಮಾತ್ರ), ಥ್ರೋಬಾಲ್, ಬಾಲ್ ಬ್ಯಾಡ್ಮಿಂಟ್, ಬ್ಯಾಡ್ಮಿಂಟನ್, ಬ್ಯಾಸ್ಕೆಟ್ ಬಾಲ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನ್ನಿಸ್, ಕುಸ್ತಿ ಮತ್ತು ಯೋಗಾ.

ನೇರ ಆಯ್ಕೆ: ಟೆನ್ನಿಸ್, ನೆಟ್‌ಬಾಲ್ ಮತ್ತು ಈಜು.

*ಸೂಚನೆ:*

ಜಿಲ್ಲೆ ದಸರಾ ಸ್ಪರ್ಧೆಗಳಲ್ಲಿ ಆಯಾ ಜಿಲ್ಲೆ ಕ್ರೀಡಾಪಟುಗಳು ಮಾತ್ರ ಭಾಗವಹಿಸಲು ಅವಕಾಶ. ಕ್ರೀಡಾಪಟುಗಳು ಪ್ರತಿನಿಧಿಸುವ ತಾಲ್ಲೂಕು/ಜಿಲ್ಲೆ ದೃಢೀಕರಣದ ಬಗ್ಗೆ ದಾಖಲೆ ಸಲ್ಲಿಸಬೇಕು ಹಾಗೂ ನೋಂದಣಿ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕು (ಶಾಲಾ, ಕಾಲೇಜಿನ ಗುರುತಿನ ಚೀಟಿ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಮತದಾರರ ಗುರುತಿನ ಚೀಟಿ ಹಾಗೂ ಸರ್ಕಾರದಿಂದ ಅಧಿಕೃತ ಇರುವ ಇತರೆ ಗುರುತಿನ ಚೀಟಿ).

ಬೇರೆ ಜಿಲ್ಲೆಯಿಂದ ಭಾಗವಹಿಸುವ ಕ್ರೀಡಾಪಟುಗಳಿಗೆ ಅವಕಾಶ ಇರುವುದಿಲ್ಲ. ಕ್ರೀಡಾಪಟುಗಳು ವಿದ್ಯಾಭ್ಯಾಸ, ಸೇವೆಯಲ್ಲಿದ್ದರೆ ಸಂಬಂಧಪಟ್ಟ ಕಾಲೇಜು–ಸಂಸ್ಥೆಗಳ ಗುರುತಿನ ಚೀಟಿಯೊಡನೆ ಭಾಗವಹಿಸಲು ಅವಕಾಶವಿದೆ.

ಪ್ರಸಕ್ತ ಸಾಲಿನಿಂದ ದಸರಾ ಕ್ರೀಡಾ ಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳನ್ನು ತಾಲ್ಲೂಕು, ಜಿಲ್ಲೆ ಮತ್ತು ವಿಭಾಗ ಮಟ್ಟದವರಿಗೆ Dasara CM Cup 2025 Sports Registration QR Code ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು. ಇಲ್ಲವಾದಲ್ಲಿ ಕ್ರೀಡಾ ಕೂಟದಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿದ ವೈಯಕ್ತಿಕ ಕ್ರೀಡೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಮತ್ತು ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ಭಾಗವಹಿಸಬಹುದು.

ವಿವಿಧ ಮಟ್ಟದ ದಸರಾ ಕ್ರೀಡಾ ಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಅರ್ಹರಿರುತ್ತಾರೆ. ಕ್ರೀಡಾ ಕೂಟದಲ್ಲಿ ರಕ್ಷಣಾ ಪಡೆ, ಅರೆ ರಕ್ಷಣಾ ಪಡೆ, ಸೇರಿದ ಕ್ರೀಡಾಪಟುಗಳು ಭಾಗವಹಿಸಲು ಅವಕಾಶ ಇರುವುದಿಲ್ಲ.

ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಊಟದ ವ್ಯವಸ್ಥೆ ಮತ್ತು ಪ್ರಯಾಣ ಭತ್ಯೆಯನ್ನು ಸರ್ಕಾರಿ ಬಸ್ ಧರಗಳನ್ವಯ ಕೆ2 ಮೂಲಕ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ. ಒಬ್ಬ ಕ್ರೀಡಾಪಟು ಕೇವಲ ಒಂದು ಗುಂಪು ಕ್ರೀಡೆಯಲ್ಲಿ ಮಾತ್ರ ಭಾಗವಹಿಸಲು ಅವಕಾಶ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಎಂ.ಜಾಕೀರ್–9036335986, ಮಹ್ಮದ್ ಮಸೂದ್–9886688858 ಮತ್ತು ಕಚೇರಿ ಸಿಬ್ಬಂದಿ ರತಿ–ಕಾಂತ್–8971238689 ಗೆ ಸಂಪರ್ಕಿಸಬಹುದು ಎಂದು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಾಮಧೇಯ ಮೃತ ಶವ: ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ,ಸೆ.03–ತಾಲ್ಲೂಕಿನ ಕಪ್ಪಗಲ್ ಕ್ಯಾಂಪ್‌ನ ಕಪ್ಪಗಲ್ ಹೆಚ್‌ಎಲ್‌ಸಿ ಕಾಲುವೆಯ ಸಬ್ ಕಾಲುವೆ ಡಿಪಿ–13–14 ಆರ್ ವಿತರಣಾ ಕಾಲುವೆಯಲ್ಲಿ ಸುಮಾರು 45 ರಿಂದ 50 ವರ್ಷದ ಅನಾಮಧೇಯ ಮೃತ ಪುರುಷನ ಶವವು ಸೆ.02 ರಂದು ತೇಲಿಕೊಂಡು ಬಂದಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಪತ್ತೆಗೆ ಸಹರಿಸಬೇಕು ಎಂದು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಹರೆ ಗುರುತು: ಎತ್ತರ ಅಂ–ದಾಜು 5 ಅಡಿ, ಮೃತನ ದೇಹದ ಮೇಲೆ ಕೆಂಪು ಬಣ್ಣದ ಟಾಂಗೋ ಕಂಪನಿಯ ಕಟ್ ಚಡ್ಡಿ ಇದ್ದು, ಕುತ್ತಿಗೆಯಲ್ಲಿ ರೋಲ್ ಗೋಲ್ಡ್ ಚೈನ್ ಮತ್ತು ಸೇಫ್ಟಿ ಪಿನ್ ಇರುತ್ತದೆ. ತಲೆಯಿಂದ ಪಾದಗಳ ವರೆಗೆ ಶರೀರವು ಬೆಳ್ಳಗಾಗಿದ್ದು, ಜಲಚರ ಪ್ರಾಣಿಗಳು ಕಿತ್ತು ತಿಂದಂತೆ ಕಂಡುಬರುತ್ತಿದೆ. ಯಾವುದೇ ಚಹರೆ ಗುರುತುಗಳು ಕಂಡುಬಂದಿರುವುದಿಲ್ಲ.

ಅನಾಮಧೇಯ ಮೃತನ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392258100 ಅಥವಾ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392–276461 ಹಾಗೂ ಮೊ.9480803049 ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಭೆಯಲ್ಲಿ ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್ ನಿರ್ದೇಶನ

# ನಿಯಮಿತವಾಗಿ ಅಪೌಷ್ಟಿಕ ಮಕ್ಕಳ ಆರೋಗ್ಯ ತಪಾಸಣೆ ನಡೆಸಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.03–ಜಿಲ್ಲೆಯಲ್ಲಿ ತೀವ್ರ ಅಪೌಷ್ಟಿಕತೆ ಮತ್ತು ಮಧ್ಯಮ ತೀವ್ರ ಅಪೌಷ್ಟಿಕತೆ ಇರುವ ಮಕ್ಕಳ ಆರೋಗ್ಯ ನಿಯಮಿತವಾಗಿ ತಪಾಸಣೆ ನಡೆಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಅವರು ಹೇಳಿದರು.

ಮಂಗಳವಾರದಂದು, ನಗರದ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ತೀವ್ರ ಅಪೌಷ್ಟಿಕತೆ ಮತ್ತು ಮಧ್ಯಮ ತೀವ್ರ ಅಪೌಷ್ಟಿಕತೆ ಮಕ್ಕಳ ಆರೋಗ್ಯ ತಪಾಸಣೆ ಕುರಿತು ವರ್ಚುವಲ್ ಮೂಲಕ ವೈದ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಆರೋಗ್ಯ ತಪಾಸಣೆ ನಡೆಸಿ ಮಕ್ಕಳ ಎತ್ತರ, ತೂಕ ಇದರ ಬಗ್ಗೆ ಪೋಷಣ್ ಟ್ರ್ಯಾಕ್ ಮೂಲಕ ಅನುಸರಣೆ ಮಾಡಬೇಕು. ತೀವ್ರತರ ಅಪೌಷ್ಟಿಕ ಮಕ್ಕಳು ಕಂಡುಬಂದಲ್ಲಿ ಸೂಕ್ತ ಚಿಕಿತ್ಸಾನುಸಾರ ಆರೋಗ್ಯ ತಪಾಸಣೆ ಕೈಗೊಳ್ಳಬೇಕು. ಇದರಿಂದ ಮಗುವಿನ ಮುಂದಿನ ಬೆಳವಣಿಗೆ ಆರೋಗ್ಯಕರವಾಗಿರುತ್ತದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಎಲ್ಲಾ ವೈದ್ಯಾಧಿಕಾರಿಗಳು ತೀವ್ರ ಅಪೌಷ್ಟಿಕತೆ ಮತ್ತು ಮಧ್ಯಮ ತೀವ್ರ ಅಪೌಷ್ಟಿಕತೆ ಮಕ್ಕಳ ಆರೋಗ್ಯ ತಪಾಸಣೆ ಸರಿಯಾಗಿ ನಡೆಸುತ್ತಿದ್ದಾರೆಯೇ ಎಂದು ವಿಚಾರಿಸಿದ ಅವರು, ಈ ವಿಧದಲ್ಲಿ ತಾಲ್ಲೂಕು ನೋಡಲ್ ಅಧಿಕಾರಿಗಳು ಮೇಲ್ವಿಚಾರಣೆ ನಡೆಸಬೇಕು ಎಂದರು.

ಅಂಗನವಾಡಿ ಮಕ್ಕಳ ಆರೋಗ್ಯ ತಪಾಸಣೆಯನ್ನು ಆರೋಗ್ಯ ಮೇಳ ವಿಧದಲ್ಲಿ ಆಯೋಜಿಸಬೇಕು. ತಪಾಸಣೆ ಸಮಯದಲ್ಲಿ ಕ್ಷೇತ್ರಕ್ಕೆ ಸಂಬಂಧಪಟ್ಟ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಖುದ್ದು ಹಾಜರಿದ್ದು, ಕಾರ್ಯಕ್ರಮ ಯಶಸ್ವಿಗೊಳಿಸಲು ತಿಳಿಸಿದರು.

ಅಂಗನವಾಡಿ ಕೇಂದ್ರದಲ್ಲಿ ಆರೋಗ್ಯ ತಪಾಸಣೆ ನಡೆಯುವ ಮುನ್ನ ದಾಖಲಾದ ಎಲ್ಲಾ ಮಕ್ಕಳ ಹಾಜರಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ನಂತರ ಆರೋಗ್ಯ ತಪಾಸಣೆ ನಂತರ ನಿಗಧಿತ ಸಮಯದಲ್ಲಿ ವರದಿ ನೀಡಬೇಕು ಎಂದು ಹೇಳಿದರು.

ಬಳಿಕ ಜಿಲ್ಲೆಯಲ್ಲಿನ ಗರ್ಭಿಣಿ ತಾಯಂದಿರ ಬಗ್ಗೆ ಚರ್ಚಿಸುತ್ತಾ ರಕ್ತಹೀನತೆ, ಅಧಿಕ ರಕ್ತದೊತ್ತಡ ನಿರ್ವಹಣೆಯ ಕುರಿತು ಕಾಳಜಿವಹಿಸಿ ಪ್ರತಿಯೊಬ್ಬ ಗರ್ಭಿಣಿಯರ ತಾಯಿ ಕಾರ್ಡ್ ಪರಿಶೀಲಿಸಬೇಕು. ಗರ್ಭಿಣಿ ತಾಯಂದಿರು ಕಬ್ಬಿಣಾಂಶ ಮಾತ್ರೆ ತೆಗೆದುಕೊಳ್ಳುತ್ತಿದ್ದಾರೆ ಎನ್ನುವುದರ ಬಗ್ಗೆ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು ಗಮನಿಸಬೇಕು ಎಂದು ಸೂಚಿಸಿದರು.

ಪ್ರಧಾನಮಂತ್ರಿ ಸುರಕ್ಷಾ ಮಾತೃತ್ವ ಅಭಿಯಾನ ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳು ಹಿಮೊಗ್ಲೋಬಿನ್ ಪರೀಕ್ಷೆ ಕೈಗೊಳ್ಳಬೇಕು. ಈ ಕುರಿತು ತಾಯಿಕಾರ್ಡ್‌ನಲ್ಲಿ ನಮೂದಿಸಬೇಕು. ನಂತರ ಅಧಿಕ ರಕ್ತದೊತ್ತಡ ನಿಯಮಿತವಾಗಿ ತಪಾಸಣೆ ಮಾಡುತ್ತಿರಬೇಕು. ಇವರೆಡರಿಂದಲೇ ತಾಯಿ ಮರಣ ಸಂಭವಿಸಲು ಕಾರಣವಾಗಬಹುದು ಎಂದು ಎಚ್ಚರಿಸಿದರು.

ಸಭೆಯಲ್ಲಿ ಎಲ್ಲಾ ತಾಲ್ಲೂಕ ನೋಡಲ್ ಅಧಿಕಾರಿಗಳು ಎಲ್ಲಾ ವೈದ್ಯಾಧಿಕಾರಿಗಳಿಗೆ ಸಭೆ ನಡೆಸಿ ತೀವ್ರ ಅಪೌಷ್ಟಿಕತೆ ಮತ್ತು ಮಧ್ಯಮ ತೀವ್ರ ಅಪೌಷ್ಟಿಕತೆ ಮಕ್ಕಳ ವರದಿ ನೀಡಲು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಉಪಸ್ಥಿತರಿದ್ದರು.

# ಭಾರತೀಯ ಸೇನೆ, ಯೂನಿಫಾರ್ಮ ಸೇವೆಗಳಿಗೆ ಉಚಿತ ತರಬೇತಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.03–ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಭಾರತೀಯ ಸೇನೆ ಹಾಗೂ ಇತ–ರೆ ಯೂನಿಫಾರ್ಮ ಸೇವೆಗಳಿಗೆ ಸೇರಬಯಸುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ 2025–26 ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ದತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗೆ 3ನೇ ಬ್ಯಾಚ್ ಪ್ರಾರಂಭಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ)ಗಳ ಅರ್ಹ ಅಭ್ಯರ್ಥಿಗಳು (ಬಾಲಕರಿಗೆ ಮಾತ್ರ) ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹತೆ:

ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿಯು ಪ್ರವರ್ಗ–1ರ ರೂ.2.50 ಲಕ್ಷ ಹಾಗೂ ಪ್ರವರ್ಗ–2(ಎ), 3(ಎ) ಮತ್ತು 3(ಬಿ)ರ ರೂ.1 ಲಕ್ಷ ಇರಬೇಕು.

ಅಭ್ಯರ್ಥಿಯು 10ನೇ ತರಗತಿಯಲ್ಲಿ ಉತ್ತೀರ್ಣವಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕ ಮತ್ತು ಸರಾಸರಿ ಶೇ.45 ರಷ್ಟು ಅಂಕಗಳನ್ನು ಪಡೆದಿರಬೇಕು. ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಸಮಾನವಾದ ಗ್ರೇಡ್ ಪಡೆದಿರಬೇಕು. ಅಭ್ಯರ್ಥಿಯ ವಯೋಮಿತಿ 17 ರಿಂದ 20 ವರ್ಷದೊಳಗಿರಬೇಕು. ಸೆಪ್ಟಂಬರ್–01 2025ಕ್ಕೆ ಅನ್ವಯಿಸುವಂತೆ ಅಭ್ಯರ್ಥಿಯ ವಯಸ್ಸನ್ನು ಪರಿಗಣಿಸಲಾಗುವುದು. ಅಭ್ಯರ್ಥಿಯು 01 ಸೆಪ್ಟಂಬರ್ 2005 ರಿಂದ 01 ಸೆಪ್ಟಂಬರ್ 2008 ರ ನಡುವಿನ ಅವಧಿಯಲ್ಲಿ ಜನಿಸಿರಬೇಕು.

**ತರಬೇತಿ ನೀಡುವ ಸ್ಥಳ:**

ತರಬೇತಿಯನ್ನು ಕಲಬುರ್ಗಿ (ಕೇಂದ್ರ ಸ್ಥಳ) ಜಿಲ್ಲೆಯಲ್ಲಿ ನೀಡಲಾಗುವುದು. ಅಭ್ಯರ್ಥಿಗಳು ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ ಸಲ್ಲಿಸಬಹುದು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಲಬುರ್ಗಿಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಬಹುದು. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 10 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8105085410, 9148489157 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಳಗಲ್ಲು: ಸದ್ಗುರು ಎರ್ರಿತಾತನವರ 111ನೇ ಪುಣ್ಯಾರಾಧನೆ, ಪುರಾಣ ಪ್ರವಚನ ಕಾರ್ಯಕ್ರಮ ನಿಷೇಧಿಸಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.03–ಬಳ್ಳಾರಿ ತಾಲ್ಲೂಕಿನ ಕೊಳಗಲ್ ಗ್ರಾಮದಲ್ಲಿ ಸೆ.13 ರವರೆಗೆ ನಡೆಸಲು ಉದ್ದೇಶಿಸಿರುವ ಸದ್ಗುರು ಶ್ರೀ ಎರ್ರಿತಾತನವರ 111ನೇ ಪುಣ್ಯಾರಾಧನೆ, ಪುರಾಣ ಪ್ರವಚನ ಹಾಗೂ ಎರ್ರಿತಾತನವರ 12ನೇ ಪುಣ್ಯಾರಾಧನೆ ಕಾರ್ಯಕ್ರಮಗಳನ್ನು ನಡೆಸದಂತೆ ನಿಷೇಧಿಸಿ ಜಿಲ್ಲಾ ದಂಡಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.



ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಕೊಳಗಲ್ಲು ಗ್ರಾಮದಲ್ಲಿ ಸದ್ಗುರು ಶ್ರೀ ಎರ್ರಿತಾತನವರ ದೇವಸ್ಥಾನದ ಆಡಳಿತ ಹಾಗೂ ಆಸ್ತಿ ಸಂಬಂಧ ವಿವಾದಗಳಿದ್ದು, ಸಮುದಾಯಗಳ ಮಧ್ಯ ವೈಷ್ಯಮ್ಯ ಇರುವುದರಿಂದ ಸಾರ್ವಜನಿಕ ಆಸ್ತಿ–ಪಾಸ್ತಿಗಳಿಗೆ ನಷ್ಟ ಉಂಟಾಗಿ ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟಾಗುವ ಸಾಧ್ಯತೆ ಇರುವುದರಿಂದ ಈ ಮೇಲ್ಕಂಡ ಕಾರ್ಯಕ್ರಮಗಳನ್ನು ನಡೆಸದಂತೆ ಇತ್ತೀಚೆಗೆ ಬಳ್ಳಾರಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ನಡೆದ ಶಾಂತಿಸಭೆಯ ನಡವಳಿಗಳನ್ವಯ ಸಹಾಯಕ ಆಯುಕ್ತರು ಕೋರಿದ್ದರು.

ಹಾಗಾಗಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು, ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಕೊಳಗಲ್ ಗ್ರಾಮದಲ್ಲಿ ಸೆ.13 ರವರೆಗೆ ನಡೆಯುವ ಸದ್ಗುರು ಶ್ರೀ ಎರ್ರಿತಾತನವರ 111ನೇ ಪುಣ್ಯಾರಾಧನೆ, ಪುರಾಣ ಪ್ರವಚನ ಹಾಗೂ ಎರ್ರಿತಾತನವರ 12ನೇ ಪುಣ್ಯಾರಾಧನೆ ಕಾರ್ಯಕ್ರಮವನ್ನು ನಡೆಸದಂತೆ ನಿಷೇಧಿಸಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

# ಕುರುಗೋಡು: ವಿವಿಧೆಡೆ ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.03–ಕುರುಗೋಡು ತಾಲ್ಲೂಕಿನ ಕೋಳೂರು ಮತ್ತು ಸಿಂಧಿಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಅನುಷ್ಠಾನಗೊಂಡ ವಿವಿಧ ಅಭಿವೃದ್ಧಿಗಳನ್ನು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೋಳೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ, ಅಲ್ಲಿನ ಶಾಲಾ ಮಕ್ಕಳ ಜೊತೆ ಸಂವಾದ ನಡೆಸಿದರು. ಬಳಿಕ ಸಿಂಧಿಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಅನುಷ್ಠಾನಗೊಂಡ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ರಸ್ತೆ ಕಾಮಗಾರಿಯನ್ನು ಪರಿಶೀಲನೆ ಮಾಡಿದರು. ಕಾಮಗಾರಿಗಳಲ್ಲಿ ಗುಣಮಟ್ಟತೆ ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಕರುಗೋಡು ತಾಪಂ ಇಒ ನಿರ್ಮಲ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಅಧಿಕಾರಿಗಳು, ಪಿಡಿಒ ಹಾಗೂ ಗ್ರಾಮ ಪಂಚಾಯಿತಿಗಳ ಸಿಬ್ಬಂದಿಗಳು ಹಾಜರಿದ್ದರು.

# ಯೋಗಾಸನ ರಾಜ್ಯಮಟ್ಟಕ್ಕೆ ಆಯ್ಕೆಯಾದ ಹರ್ಷಿತ್

ಮಲ್ಲಮ್ಮ ನುಡಿ ವಾರ್ತೆ

ಪುತ್ತೂರು;ವಿದ್ಯಾಭಾರತಿ ವತಿಯಿಂದ ಮೂಡಬಿದಿರೆಯ ಕಡಲೆಕೆರೆ ಪ್ರೇರಣಾ ಅನುದಾನಿತ ಹಿರಿಯಪ್ರಾಥಮಿಕ ಶಾಲೆಯ ಸಹಯೋಗದಲ್ಲಿ ನಡೆದ ಜಿಲ್ಲಾ ಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಉಪ್ಪಿನಂಗಡಿ ಶ್ರೀರಾಮ ಪ್ರೌಢ ಶಾಲೆಯ ವಿದ್ಯಾರ್ಥಿ ಹರ್ಷಿತ್ ಗೌಡ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಶ್ರೀರಾಮ ಶಾಲೆಯಲ್ಲಿ 8ನೇ ತರಗತಿಯಲ್ಲಿ ಕಲಿಯುತ್ತಿರುವ ಹರ್ಷಿತ್ ಗೌಡ ಪುತ್ತೂರು ತಾಲೂಕಿನ ಬಜತ್ತೂರು ಗ್ರಾಮದ ಮಣಿಕ್ಕಳ ಬಾಳೆಹಿತ್ತಿಲು ನಿವಾಸಿ ಬೆಳಿಯಪ್ಪ ಗೌಡ ಹಾಗೂ ಯಶೋದಾ ದಂಪತಿಗಳ ಪುತ್ರ.

# ಬಳ್ಳಾರಿ: ಗೌರಿ ಗಣೇಶ ಹಬ್ಬ ಹಿನ್ನಲೆ ಮದ್ಯ ಮಾರಾಟ ನಿಷೇಧಿಸಿ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.03–ಲ್ಲೆಯಲ್ಲಿ ಗೌರಿ–ಗಣೇಶ ಹಬ್ಬದ ಪ್ರಯುಕ್ತ ಸಿರುಗುಪ್ಪ ತಾಲ್ಲೂಕು, ಕಂಪ್ಲಿ ಹಾಗೂ ತೆಕ್ಕಲಕೋಟೆ ಪಟ್ಟಣಗಳಲ್ಲಿ ಗಣಪತಿ ವಿಸರ್ಜನೆ ದಿನಗಳಾದ 11ನೇ ದಿನ ಮತ್ತು 13 ನೇ ದಿನಗಳಂದು ಮದ್ಯ ಮಾರಾಟ, ಮದ್ಯ ಸಾಗಾಣಿಕೆ ಮಾಡದಂತೆ, ಮದ್ಯದಂಗಡಿ, ಬಾರ್–ರೆಸ್ಟೋರೆಂಟ್‌ಗಳನ್ನು ತೆರೆಯದಂತೆ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರನ್ವಯ ಪ್ರದತ್ತ ಅಧಿಕಾರ ಚಲಾಯಿಸಿ, ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾ ದಂಡಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಸಿರುಗುಪ್ಪ ತಾಲ್ಲೂಕಿನಲ್ಲಿ ಗಣಪತಿ ವಿಸರ್ಜನೆಯ 11ನೇ ದಿನವಾದ ಸೆ.06 ರಂದು ಬೆಳಿಗ್ಗೆ 06 ಗಂಟೆಯಿಂದ ಸೆ.07 ರ ಬೆಳಿಗ್ಗೆ 06 ಗಂಟೆಯವರೆಗೆ, ಕಂಪ್ಲಿ ಹಾಗೂ ತೆಕ್ಕಲಕೋಟೆ ಪಟ್ಟಣಗಳಲ್ಲಿ ಗಣಪತಿ ವಿಸರ್ಜನೆಯ 13ನೇ ದಿನವಾದ ಸೆ.08 ರಂದು ಬೆಳಿಗ್ಗೆ 06 ಗಂಟೆಯಿಂದ ಸೆ.09 ರ ಬೆಳಿಗ್ಗೆ 06 ಗಂಟೆಯವರೆಗೆ ಮದ್ಯ ಮಾರಾಟ, ಮದ್ಯ ಸಾಗಾಣಿಕೆ ಹಾಗೂ ಮದ್ಯದಂಗಡಿ, ಬಾರ್–ರೆಸ್ಟೋರೆಂಟ್‌ಗಳನ್ನು ತೆರೆಯುವಂತಿಲ್ಲ. ಈ ಆದೇಶವು ಡಿಸ್ಟಲರೀಸ್ ರಾಜ್ಯ ವಿವಿಧ ಕೆಎಸ್‌ಬಿಸಿಎಲ್ ಡಿಪೋಗಳಿಗೆ ದಾಸ್ತಾನು ವಿಲೇವಾರಿ ಮಾಡಲು ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಬಾಗಲಕೋಟೆ ಪಿಡಿಓಗಳ ಪ್ರಗತಿ ಪರಿಶೀಲನಾ ಸಭೆ
# ಪಿಡಿಓಗಳು ಮನಸ್ಥಿತಿ ಬದಲಾಯಿಸಿಕೊಳ್ಳಬೇಕು–ಕುರೇರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.3–ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ತಮ್ಮ ಮನಸ್ಥಿತಿ ಬದಲಾಯಿಸಿಕೊಂಡು ಕೆಲಸ ಮಾಡಿದರೆ ಮಾತ್ರ ಅಭಿವೃದ್ಧಿ ವಿಷಯದಲ್ಲಿ ಸುಧಾರಣೆ ಕಾಣಲು ಸಾಧ್ಯ ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.



ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಮಂಗಳವಾರ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,ಗ್ರಾಮ ಪಂಚಾಯತಿಯಲ್ಲಿ ಅಧಿಕಾರಿಗಳು, ಸಿಬ್ಬಂದಿ ಕಚೇರಿಗೆ ಸಮಯಕ್ಕೆ ಸರಿಯಾಗಿ ಹಾಜರಾಗಬೇಕು. ಅಂದಾಗ ಕೆಲಸಗಳು ಬಾಕಿ ಉಳಿಯುವದಿಲ್ಲ. ಹೀಗಾಗಿ ಎಲ್ಲರ ಮನಸ್ಥಿತಿ ಬದಲಾವಣೆಯ ಅಗತ್ಯವಿದೆ. ಇಲ್ಲವಾದಲ್ಲಿ ಗ್ರಾಮಗಳು ಅಭಿವೃದ್ಧಿ ಹೊಂದಲು ಸಾಧ್ಯವಾಗದು ಎಂದರು.

ತಮ್ಮ ಹಂತದಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಸರಿಯಾಗಿ ನಡೆಯುತ್ತಿರುವ ಬಗ್ಗೆ ಪರಿಶೀಲಿಸುವ ಕಾರ್ಯವಾಗಬೇಕು. ಮಕ್ಕಳ ಸಭೆ, ಶಾಲೆಗಳಿಗೆ ಭೇಟಿ ನೀಡಿ ಮೂಲಭೂತ ಸೌಲಭ್ಯ ಇರುವ ಬಗ್ಗೆ ಪರಿಶೀಲನೆ ಮಾಡುವುದು, ಮಕ್ಕಳಿಗೆ ನೀಡುತ್ತಿರುವ ಮಧ್ಯಾಹ್ನದ ಬಿಸಿಊಟ, ಶೌಚಾಲಯ ವ್ಯವಸ್ಥೆ ಇರುವ ಬಗ್ಗೆ ಗಮನಹರಿಸಬೇಕು. ಶಿಕ್ಷಕರು ಸರಿಯಾದ ಸಮಯಕ್ಕೆ ಶಾಲೆಗೆ ಬಂದು ಪಾಠ ಬೋಧನೆ ಮಾಡುತ್ತಿರುವ ಬಗ್ಗೆ ಹಾಗೂ ಬಾಲ್ಯವಿವಾಹ ನಡೆಯದಂತೆ ನೋಡಿಕೊಳ್ಳುವ ಕೆಲಸವಾಗಬೇಕು ಎಂದ ಸಿಇಓ, ಅನುಮತಿ ಪಡೆ–ಯದೇ ಸಭೆಗೆ ಗೈರು ಹಾಜರಾದ ಪಿಡಿಓಗಳಿಗೆ ನೋಟಿಸ್ ನೀಡಲು ಸೂಚನೆ ನೀಡಿದರು.

ಇ–ಗ್ರಾಮ ಸ್ವರಾಜ ಅಡಿಯಲ್ಲಿ ಸರ್ವೆ ಕಾರ್ಯಕ್ಕೆ ಬಾಕಿ ಉಳಿಸಿಕೊಂಡ ಬಿಲ್ ಪಾವತಿಗೆ ಬುಧವಾರ ಸಂಜೆವರೆಗೆ ಗುಡುವು ನೀಡಿದರು. ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ನೀರಿಕ್ಷಿತ ಮಟ್ಟದಲ್ಲಿ ಕರ ಸಂಗ್ರಹ ಆಗುತ್ತಿಲ್ಲ. ಹುನಗುಂದ ಮತ್ತು ಇಳಕಲ್ಲ ತಾಲೂಕು ಕೇವಲ ಶೇ.35 ರಷ್ಟು ಕರ ವಸೂಲಾತಿಯಲ್ಲಿ ಪ್ರಗತಿ ಸಾಧಿಸಿದರೆ, ಉಳಿದ ತಾಲೂಕುಗಳು ಶೇ.40ಕ್ಕಿಂತ ಹೆಚ್ಚಿಗೆ ಇವೆಯಾದರೂ ಪ್ರಗತಿಯಲ್ಲಿ ಹಿಂದೆ ಉಳಿಯಲಾಗಿದೆ ಎಂದರು.

ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಮಾತನಾಡಿ, ಗ್ರಾಮ ಪಂಚಾಯತ ಮಟ್ಟದಲ್ಲಿ ಪ್ರತಿ ಸೋಮವಾರ ಅಭಿಯಾನ ಹಮ್ಮಿಕೊಂಡು ಕರ ಸಂಗ್ರಹಣೆಗೆ ಮುಂದಾಗಬೇಕು. ಅಲ್ಲದೇ ಪ್ರತಿ ತಿಂಗಳು 15ನೇ ತಾರೀಖಿಗೆ ವಿಶೇಷ ಅಭಿಯಾನ ನಡೆಸಲಾಗುತ್ತಿದ್ದು, ಜಿಲ್ಲಾ ಪಂಚಾಯತಿಯಿಂದ ವಸೂಲಿಗೆ ಗುರಿ ನಿಗದಿಪಡಿಸಲಾಗುತ್ತದೆ. ಇದನ್ನು ಅರಿತು ಕರ ವಸೂಲಾತಿಗೆ ಕ್ರಮವಹಿಸುವಂತೆ ತಿಳಿಸಿದರು.

ಜಿಲ್ಲಾ ಪಂಚಾಯತಿಯ ಪ್ರತಿಯೊಂದು ವಿಭಾಗದಿಂದ ಯಾವ ಗ್ರಾಮ ಪಂಚಾಯತಿ ಎಷ್ಟು ಪ್ರಗತಿ ಸಾಧಿಸಿದೆ ಎಂಬ ಮಾಹಿತಿಯನ್ನು ರವಾನೆ ಮಾಡಲಾಗುತ್ತಿದೆ. ಈ ಮಾಹಿತಿಯನು ನೋಡಿ ಯಾವ ವಿಭಾಗದಲ್ಲಿ ಪ್ರಗತಿ ಕುಂಟಿತವಾಗಿದೆ ಎಂಬುದನ್ನು ಅರಿತು ಪ್ರಗತಿ ಸಾಧಿಸಲು ಮುಂದಾಗಬೇಕು ಎಂದು ಅವರು ಹೇಳಿದರು.

ನಿಗದಿತ ಅವಧಿಯಲ್ಲಿ ಕೂಲಿ ಪಾವತಿ, ಅಟಲ್ ಭೂಜಲ, ಸವಳು ಜವಳು ಭೂಮಿ ಅಭಿವೃದ್ಧಿ, ಬಾಪೂಜಿ ಸೇವಾ ಕೇಂದ್ರ, 14 ಮತ್ತು 15ನೇ ಹಣಕಾಸು ಪ್ರಗತಿ, ಇ–ಸ್ವತ್ತು ಅರ್ಜಿ ವಿಲೇವಾರಿ, ದಿನದ 24 ಗಂಟೆಗಳ ನೀರು ಸರಬರಾಜು, ಡಿಜಿಟಲ್ ಲೈಬ್ರರಿ, ಸ್ವಚ್ಛಭಾರತ ಮಿಷನ್, ವಸತಿ ಯೋಜನೆ, ಜಲಜೀವನ ಮಿಷನ್ ಹಾಗೂ ಕುಂದು ಕೊರತೆಗಳ ಬಗ್ಗೆ ಪರಿಶೀಲನೆ ನಡೆಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯಯೋಜನಾಧಿಕಾರಿ ಅಲ್ಲಮಪ್ರಭು, ಸಹಾಯಕ ಯೋಜನಾಧಿಕಾರಿ ಎಸ್.ಎಂ.ಕಾಂಬಳೆ, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಸೇರಿದಂತೆ ಎಲ್ಲ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಯುಕೆಪಿ: ಸರಕಾರದ ನಿಲುವು ಸ್ಪಷ್ಟಗೊಳ್ಳಲಿ–ಕುಮಟಗಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.3–ಕೃಷ್ಣಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸುವ ವಿಷಯದಲ್ಲಿ ಸರಕಾರ ತನ್ನ ನಿಲುವನ್ನು ಸ್ಪಷ್ಟಪಡಿಸಬೇಕು. ಯೋಜನೆ ಪೂರ್ಣಗೊಳಿಸಲು ಅಗತ್ಯ ಹಣ ಒದಗಿಸುವ ಬದ್ಧತೆ ತಿಳಿಸಬೇಕು ಎಂದು ಬಾಗಲಕೋಟೆ ರೈತರ ಹಕ್ಕುಗಳ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ರವಿ ಕುಮಟಗಿ ಒತ್ತಾಯಿಸಿದರು.




ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯುಕೆಪಿ ಯೋಜನೆ ಪ್ರಾರಂಭವಾದಾಗಿನಿಂದ ಅಧಿಕಾರಕ್ಕೆ ಬಂದ ಎಲ್ಲ ಪಕ್ಷಗಳ ಸರಕಾರಗಳ ದಿವ್ಯ ನಿರ್ಲಕ್ಷ್ಯದ ಪರಿಣಾಮ ಯೋಜನಾ ವೆಚ್ಚ ಹೆಚ್ಚುತ್ತ ಸಾಗಿದ್ದು, ಸಂತ್ರಸ್ಥರಿಗೆ ಸೂಕ್ತ ಪರಿಹಾರ, ಪುನರ್ವಸತಿ ದೊರೆಯದೇ ಹೋಗಿದೆ ಎಂದರು.

ನೀರಾವರಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಸಂತ್ರಸ್ಥರಿಗೆ ಭೂಮಿ ಪರಿಹಾರ ಕೊಡುವ ವಿಷಯಕ್ಕೆ ಸಂಬಂಧಿಸಿ 2 ಲಕ್ಷ ಕೋಟಿ ಕೊಡುವುದು ಸಾಧ್ಯವಿಲ್ಲ ಎನ್ನುವ ಮಾತನ್ನು ಆಡಿರುವುದು ಸೂಕ್ತವಲ್ಲ. ಇದು ನ್ಯಾಯಾಂಗ ವ್ಯವಸ್ಥೆಗೆ ವಿರುದ್ಧವಾಗಿ ಮಾತನಾಡಿದಂತಾಗಿದೆ ಎಂದ ಕುಮಟಗಿ, ತಮ್ಮ ಇಡೀ ಬದುಕನ್ನೇ ತ್ಯಾಗ ಮಾಡಿರುವ ಸಂತ್ರಸ್ತರಿಗೆ ಸೂಕ್ತ ಪರಿಹಾರ, ಪುನರ್ವಸತಿ ಕಲ್ಪಿಸುವುದು ಸರ್ಕಾರದ ಕೆಲಸವಲ್ಲವೇ ಎಂದು ಪ್ರಶ್ನಿಸಿದರು.

ರೈತರ ಭೂಮಿಗೆ ಪರಿಹಾರ ನೀಡುವುದು ಕಾನೂನು ಬದ್ಧವಾಗಿದೆ. ಹೊಸ ಕಾನೂನು ಪ್ರಕಾರವೇ ಪರಿಹಾರ ವಿತರಣೆಯಾಗಬೇಕು. ಯುಕೆಪಿ ಯೋಜನೆಯನ್ನು ಪೂರ್ಣಗೊಳಿಸಲು ಸರಕಾರ ಮುಂದಿನ 6 ವರ್ಷಗಳಲ್ಲಿ ಪ್ರತಿ ವರ್ಷ 40 ಸಾವಿರ ಕೋಟಿ ವೆಚ್ಚ ಮಾಡಬೇಕು ಎಂದು ಆಗ್ರಹಿಸಿದ ರವಿ ಕುಮಟಗಿ, ಉತ್ತರ ಕರ್ನಾಟಕದ ಎಲ್ಲ ಪಕ್ಷಗಳ ಜನಪ್ರತಿನಿಧಿಗಳು ಯುಕೆಪಿ ಯೋಜನೆ ಶೀಘ್ರವಾಗಿ ಪೂರ್ಣಗೊಳಿಸಿಕೊಳ್ಳಲು ತಮ್ಮ ಬದ್ಧತೆಯನ್ನು ಪ್ರದರ್ಶಿಸಬೇಕು ಎಂದು ಒತ್ತಾಯಿಸಿದರು.

ನ್ಯಾಯವಾದಿ ಡಿ.ಬಿ.ಪೂಜಾರಿ ಮಾತನಾಡಿ, ಭೂಸ್ವಾಧೀನ ಪ್ರಕರಣಗಳಿಗೆ ಪರಿಹಾರ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ ನೀರಾವರಿ ಸಚಿವ ಡಿ.ಕೆ.ಶಿವಕುಮಾರ ನೀಡಿರುವ ಹೇಳಿಕೆ ಖಂಡಿಸಿ, ಅವರ ವಿರುದ್ಧ ನ್ಯಾಯಾಲಯ ನಿಂದನೆ ಪ್ರಕರಣ ದಾಖಲಿಸಲಾಗುವುದು ಹಾಗೂ ವಕೀಲರ ಸಂಘದ ವತಿಯಿಂದ ಅವರ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದರು.

ನ್ಯಾಯಾಲಯ ನೀಡಿರುವ ಆದೇಶದ ಪ್ರಕಾರ ಪರಿಹಾರ ನೀಡಲು ಸರಕಾರಕ್ಕೆ ಆಗದಿದ್ದರೆ, ನಮ್ಮ ಜಮೀನು ನಮಗೆ ಬಿಟ್ಟುಕೊಡುವಂತೆ ಬಾಗಲಕೋಟೆ ರೈತರ ಹಕ್ಕುಗಳ ಹೋರಾಟ ಸಮಿತಿ ಅಧ್ಯಕ್ಷ ಬಸಪ್ಪ ಸ್ವಾಗಿ ಆಗ್ರಹಿಸಿದರು.

ನಿಂಗಣ್ಣ ಗೋಡಿ ಮಾತನಾಡಿದರು. ಧರಿಯಪ್ಪ ಸ್ವಾಗಿ, ನಿಂಗಪ್ಪ ಮತ್ತಿತರರು ಇದ್ದರು.

# ಕಾನೂನು ಪದವೀಧರರ ತರಬೇತಿ ಭತ್ಯೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.3–2025–26ನೇ ಸಾಲಿಗೆ ಬಾಗಲಕೋಟೆ ಜಿಲ್ಲೆಯ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಪಾರ್ಸಿ ಹಾಗೂ ಸಿಖ್ ಸಮುದಾಯದ ಕಾನೂನು ಪದವೀಧರರಿಂದ ಕಾನೂನು ತರಬೇತಿ ಭತ್ಯೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಒಟ್ಟು 3 ಅಭ್ಯರ್ಥಿಗಳನ್ನು 4 ವರ್ಷಗಳ ಅವಧಿಗೆ ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್–ಸರ್ಕಾರಿ ವಕೀಲರ ಅಧೀನದಲ್ಲಿ ತರಬೇತಿಗೆ ಆಯ್ಕೆ ಮಾಡಲಾಗುವುದು.

ಅಭ್ಯರ್ಥಿಗಳು ಬಾಗಲಕೋಟೆ ಜಿಲ್ಲೆಯವರಾಗಿದ್ದು, 30 ವರ್ಷ ಮೀರಿರಬಾರದು. ಬಾರ್ ಕೌನ್ಸಿಲ್‌ನಲ್ಲಿ ನೊಂದಾಯಿತರಾಗಿರಬೇಕು ಹಾಗೂ ಕಳೆದ 2ವರ್ಷಗಳಲ್ಲಿ ಕಾನೂನು ಪದವೀಧರರಾಗಿರಬೇಕು. ವಾರ್ಷಿಕ ಆದಾಯ 3.50 ಲಕ್ಷ ರೂ. ಮೀರಿರಬಾರದು.

ಅಗತ್ಯ ದಾಖಲೆಗಳಾದ ವಯಸ್ಸು, ಅಂಕಪಟ್ಟಿ, ಜಾತಿ–ಆದಾಯ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಆಯ್ಕೆ ಸಂದರ್ಶನದ ಆಧಾರವಾಗಿರುತ್ತದೆ. ಆಯ್ಕೆಯಾದವರಿಗೆ ತಿಂಗಳಿಗೆ 5ಸಾವಿರ ರೂ. ಭತ್ಯೆ ನೀಡಲಾಗುವುದು.

ಅರ್ಜಿಗಳನ್ನು ಸೆಪ್ಟೆಂಬರ್ 15 ರೊಳಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 08354–200044ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಭಾರತದ ನಡಿಗೆ ವಿಜ್ಞಾನದೆಡೆಗೆ ಜಾಗೃತಿ ಜಾಥಾ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ವಿಜ್ಞಾನವು ದಿನನಿತ್ಯದ ಸಮಸ್ಯೆಗಳಿಗೆ ಪರಿಹಾರ ಸೂಚಿಸುತ್ತದೆ ಮತ್ತು ಬ್ರಹ್ಮಾಂಡದ ಶ್ರೇಷ್ಠ ನಿಗೂಢಗಳಿಗೆ ಉತ್ತರಗಳನ್ನು ಒದಗಿಸುತ್ತದೆ. ಹೀಗಾಗಿ ವಿಜ್ಞಾನವು ಜ್ಞಾನದ ಪ್ರಮುಖ ಮಾರ್ಗಗಳಲ್ಲಿ ಒಂದಾಗಿದೆ ಎಂದು ಇಲಕಲ್ ಸರಕಾರಿ ಪದವಿ ಕಾಲೇಜಿನ ಉಪನ್ಯಾಸಕ ಅಜಿಮ್ ಜಮಾದಾರ್ ಹೇಳಿದರು.

ಬಿನ್ನಾಳ ಗ್ರಾಮದಲ್ಲಿ ಶಾಲಾ ಮಕ್ಕಳಿಂದ ಹಮ್ಮಿಕೊಂಡಿದ್ದ ಭಾರತದ ನಡಿಗೆ ವಿಜ್ಞಾನದೆಡೆಗೆ ಜಾಗೃತಿ ಜಾಥಾದಲ್ಲಿ ಭಾಗವಹಿಸಿ ಬುಧವಾರ ಅವರು ಮಾತನಾಡಿದರು.

ವಿಜ್ಞಾನವು ಜನರ ನಿತ್ಯ ಜೀವನದ ಭಾಗವಾಗಿದೆ. ಜೀವನದ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ವಿಜ್ಞಾನದ ಪಾತ್ರ ಮಹತ್ವದ್ದಾಗಿದೆ. ಸಮಸ್ಯೆಗಳಿಗೆ ಹೊಸ ವಿಧಾನಗಳನ್ನು ಕಂಡುಕೊಳ್ಳುವ ಮತ್ತು ಹೊಸ ವೈಜ್ಞಾನಿಕ ಕಾನೂನುಗಳನ್ನು ಸಾಬೀತುಪಡಿಸುವ ವಿಜ್ಞಾನಿಗಳಿಂದ ಭಾರತದೇಶದ ಪ್ರತಿಯೊಂದು ಹಳ್ಳಿಗಳು ವಿಕಸನಗೊಳ್ಳುತ್ತಿವೆ ಎಂದರು.

ದಾರವಾಡದಿಂದ ಆಗಮಿಸಿದ್ದ ಉಪನ್ಯಾಸಕ ಬೀರಪ್ಪ ಸಾಲಗಾರ ಮಾತನಾಡುತ್ತಾ ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ಜಾಗತಿಕ ತಾಪಮಾನ ಹೆಚ್ಚಳದಿಂದ ಭೂಕಂಪ, ಜಲ ಪ್ರಳಯ, ಗುಡ್ಡ ಕುಸಿತ ದಂತ ಘಟನೆಗಳು ಮೇಲಿಂದ ಮೇಲೆ ಜರುಗುತ್ತಿವೆ. ಇದಕ್ಕೆಲ್ಲ ಕಾರಣ ನಾವು ನಮ್ಮ ಕೈಯಾರೆ ಪ್ರಕೃತಿಯನ್ನ ನಾಶ ಮಾಡುತ್ತಿದ್ದೇವೆ. ಅದನ್ನ ಬಿಡಬೇಕು ಮರ ಬೆಳೆಸುವ ಕಾಯಕಕ್ಕೆ ನಾವೆಲ್ಲ ಸಿದ್ದರಾಗಬೇಕು. ಭೂಮಿಯ ತಾಪವನ್ನ ತಣ್ಣಗಾಗಿಸಬೇಕು. ಹೊಗೆ ಬಿಡುವ ವಾಹನಗಳ ಬಳಕೆ ಕಡಿಮೆ ಮಾಡಬೇಕು. ಪ್ಲಾಷ್ಟಿಕ್ ಬಳಕೆ ಬಿಡಬೇಕು. ಪರಿಸರ ಸ್ನೇಹಿಯಾಗಿ ನಾವೆಲ್ಲ ಬದುಕಬೇಕು ಎಂದರು.

ನಂತರ ಮಾತನಾಡಿದ ಪತ್ರಕರ್ತ ಜಗದೀಶ ಚಟ್ಟಿ ಮಾತನಾಡಿ, ನಮ್ಮ ಸಮಾಜ ಮತ್ತು ಆರ್ಥಿಕತೆಯ ಅಭಿವೃದ್ಧಿಗೆ ವಿಜ್ಞಾನ ಅತ್ಯಗತ್ಯ. ಆರೋಗ್ಯ ರಕ್ಷಣೆ, ಕೃಷಿ, ಇಂಧನ ಮತ್ತು ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪ್ರಗತಿಯನ್ನು ಸಾಧಿಸಲು ವಿಜ್ಞಾನ ಮುನ್ನುಡಿಯಾಗಿದೆ.

ಈ ಕಾರ್ಯಕ್ರಮದಲ್ಲಿ ಭಾಗಿಯಾದ ಪ್ರತಿಯೊಬ್ಬ ಮಗು ಪ್ರಶ್ನಿಸುವ ಗುಣ ಬೆಳಸಿಕೊಳ್ಳಬೇಕು. ಗ್ರಾಮೀಣ ಭಾಗದಲ್ಲಿ ಇನ್ನೂ ಜೀವಂತವಾಗಿರುವ ಮೌಢ್ಯವನ್ನ ಪ್ರಶ್ನೆ ಮಾಡುವ ಮೂಲಕ ಹೋಗಲಾಡಿಸಬೇಕು ಎಂದರು.

ಈ ಸಂದರ್ಭದಲ್ಲಿ ಗುರುರಾಜ, ಸಿಆರ್ ಪಿ ಖಾದರಬಾಷ, ಪ್ರೌಢಶಾಲಾ ಮುಖ್ಯ ಶಿಕ್ಷಕರಾದ ಅಕ್ಕಮಹಾದೇವಿ, ಸಹ ಶಿಕ್ಷಕ ಈರಪ್ಪ ಉಪ್ಪಾರ , ಸರಕಾರಿ ಪದವಿ ಪೂರ್ವ ಕಾಲೇಜ್ ಉಪನ್ಯಾಸಕರು , ಸರಕಾರಿ ಹಿರಿಯ ಪ್ರಾಥಮಿಕ, ಮತ್ತು ಪ್ರೌಢಶಾಲೆಯ ಶಿಕ್ಷಕವೃಂದ ಭಾಗಿಯಾಗಿದ್ದರು.

# ಅಸುಂಡಿ ನ್ಯಾಯಬೆಲೆ ಅಂಗಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.3–ರಬಕವಿ–ಬನಹಟ್ಟಿ ತಾಲೂಕಿನ ಆಸಂಗಿ ಗ್ರಾಮದಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿ ಮಂಜೂರಾತಿಗಾಗಿ ಅರ್ಹ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 29 ಕೊನೆಯ ದಿನವಾಗಿದ್ದು, ಅರ್ಜಿ ಸಲ್ಲಿಸುವ ಸಂಸ್ಥೆಗಳು ಕನಿಷ್ಠ 3 ವರ್ಷಗಳಿಂದ ಸಹಕಾರಿ ಸಂಘವಾಗಿ ಕಾರ್ಯನಿರ್ವಹಿಸಬೇಕು. ಹಿಂದಿನ ಎರಡು ವರ್ಷಗಳಲ್ಲಿ ಕನಿಷ್ಠ 2 ಲಕ್ಷ ರೂ.ಗಳ ಬ್ಯಾಂಕ್ ಬ್ಯಾಲೆನ್ಸ್ ಇರುವುದು ಕಡ್ಡಾಯ.

ಜೊತೆಗೆ ನ್ಯಾಯಬೆಲೆ ಅಂಗಡಿಗಾಗಿ ಅಗತ್ಯವಾದಷ್ಟು ಸ್ಥಳಾವಕಾಶವಿರುವ ಕಟ್ಟಡದ ಮಾಲೀಕತ್ವದ ದಾಖಲೆ ಅಥವಾ ಬಾಡಿಗೆ ಕರಾರು ಪತ್ರ ಸಲ್ಲಿಸಬೇಕು. ಅಂಗಡಿ ಅಳತೆಯ ದಾಖಲೆಗಳೂ ಕಡ್ಡಾಯ. ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಸದಸ್ಯರ ವಿರುದ್ಧ ಯಾವುದೇ ಕ್ರಿಮಿನಲ್ ಪ್ರಕರಣ ಇಲ್ಲ ಎಂಬ ಅಫಿಡವಿಟ್ ಸಲ್ಲಿಸಬೇಕಾಗುತ್ತದೆ. ಖಾಸಗಿ ವ್ಯಕ್ತಿಗಳಿಗೆ ಅರ್ಜಿ ಅವಕಾಶವಿಲ್ಲ. ಆದರೆ ವಿಕಲಚೇತನರು ಹಾಗೂ ತೃತೀಯ ಲಿಂಗದ ಅರ್ಜಿದಾರರು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ. ಇವರು ವೈದ್ಯಕೀಯ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ ಸಲ್ಲಿಸಬೇಕು ಹಾಗೂ ಕನಿಷ್ಠ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರುವುದರ ಅಂಕಪಟ್ಟಿ ಸಲ್ಲಿಸಬೇಕು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ್, ರಬಕವಿ–ಬನಹಟ್ಟಿ ಅಥವಾ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಜಂಟಿ ನಿರ್ದೇಶಕರ ಕಛೇರಿ, ಜಿಲ್ಲಾಧಿಕಾರಿಗಳ ಕಚೇರಿ ಬಾಗಲಕೋಟೆ ಇವರನ್ನು ಸಂಪರ್ಕಿಸಬಹುದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆನಕನಹಳ್ಳಿ ಗ್ರಾಮದ ಯಂಕಣ್ಣ ದೇವರ ಮಹಾಮಂಗಳ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆ ಶಹಪುರ್ ತಾಲೂಕಿನ ಬೆನಕನಹಳ್ಳಿ ಗ್ರಾಮದಲ್ಲಿ ಯಂಕಣ್ಣ ಗುರುಗಳು ಸುಮಾರು 18 ವರ್ಷದ ಮೌನಾಚರಣೆ ಆಚರಣೆ ಮಹಾಮಂಗಳ ಕಾರ್ಯಕ್ರಮ.



ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರಾವಣ ಮಾಸದಲ್ಲಿ 41ದಿನಗಳ ಕಾಲ ಮೌನ ವ್ರತ ಅನುಷ್ಠಾನ ಮಾಡುತ್ತಾ ಬರುವರು.

ಜಿಲ್ಲಾದ್ಯಂತ ಭಕ್ತರಿಗೆ ಬೇಡಿದ ಭವಣೆಯನ್ನು ಹರಸುತ್ತಾ ತಮ್ಮದೇ ಆದ ಕಾಯಕದಲ್ಲಿ ತೊಡಗಿರುವ ಮಹಾ ಜ್ಞಾನಿಗಳು ಇವರಾಗಿದ್ದು.

18ನೇ ವರ್ಷದ ಸಂಭ್ರಮಾಚರಣೆ ಹಾಗೂ

ಮಹಾಮಂಗಳ ಕಾರ್ಯಕ್ರಮ ಜರಗಲಿದ್ದು ಗುರುವಾರ ದಿನದಂದು ಭವ್ಯವಾದ ವಿಜ್ರಮಣೆಯಿಂದ ಕಾರ್ಯಕ್ರಮ ನೆರವೇರಲಿದ್ದು.

ದಿನಾಂಕ 4 /9/ 2025 ರಂದು ಬೆಳಿಗ್ಗೆ ಅನುಷ್ಠಾನ ಮಹಾಮಂಗಳ ಕಾರ್ಯಕ್ರಮ ಪೂರ್ಣಗೊಳ್ಳುತ್ತದೆ ಸದ್ಭಕ್ತರು ಕಾರ್ಯಕ್ರಮಕ್ಕೆ ಪಾಲ್ಗೊಂಡು ಪಾವೀನರಾಗಬೇಕೆಂದು ಬೆನಕನಹಳ್ಳಿ ಗ್ರಾಮದ ಭಕ್ತರ ಕೋರಿಕೆ . ಅಂದು ಬರುವ ಭಕ್ತರು ನನ್ನ ಪ್ರಸಾದ ಸೇವೆ ತೆಗೆದುಕೊಂಡು ಪಾವನರಾಗಬೇಕೆಂದು ವಿರೂಪಾಕ್ಷಿ ಕುಂಬಾರ್ ಪತ್ರಿಕೆಗೆ ತಿಳಿಸಿದ್ದಾರೆ.

# 5ನೇ ವರ್ಷದ ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಓರಿಯಂಟೇಷನ್ (ಪರಿಚಯ) ಕಾರ್ಯಕ್ರಮ ಮತ್ತು ಪಾಲಕರ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ನಗರದ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಆಯೋಜಿಸಿದ 5ನೇ ವರ್ಷದ ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಓರಿಯಂಟೇಷನ್ (ಪರಿಚಯ) ಕಾರ್ಯಕ್ರಮ ಮತ್ತು ಪಾಲಕರ ಸಭೆ ಕಾರ್ಯಕ್ರಮವನ್ನು ಹೈಕೋರ್ಟ ಗೌರವಾನ್ವಿತ ನ್ಯಾಯಾಧೀಶರಾದ ಶಿವಶಂಕರ ಅಮರಣ್ಣವರ್ ಅವರು ಉದ್ಘಾಟಿಸಿ ಮಾತನಾಡುತ್ತಾ ವಕೀಲ ವೃತ್ತಿ ಎನ್ನುವುದು "ಧ್ವನಿ ಇಲ್ಲದವರೆಗೆ ಧ್ವನಿಯಾಗುತ್ತದೆ ವಿದ್ಯಾರ್ಥಿಗಳಿಗೆ ಇಂದಿನ ಆಧುನಿಕ ಯುಗದಲ್ಲಿ ವಕೀಲ ವೃತ್ತಿಯಲ್ಲಿ ದೊರೆಯುವಂತಹ ಅವಕಾಶಗಳನ್ನು ವಿವರಿಸಿದರು. ಅಲ್ಲದೇ ವಿದ್ಯಾರ್ಥಿಗಳಿಗೆ ಕಾಲೇಜಿನಲ್ಲಿ ಪರೀಕ್ಷಾ ದೃಷ್ಟಿಯಿಂದ ಓದುವುದನ್ನು ಮಾಡಬಾರದು ಇದರಿಂದ ವಕೀಲ ವೃತ್ತಿಯ ಎಲ್ಲ ವಿಷಯಗಳನ್ನು ತಿಳಿದು ಕೊಳ್ಳಲು ಆಗುವುದಿಲ್ಲ ಆದ್ದರಿಂದ ಕಾನೂನನ್ನು ತಿಳಿದು ಕೊಳ್ಳಬೇಕಾದರೆ ಪುಸ್ತಕದ ಜೊತೆಗೆ, ಸರ್ವೋಚ್ಚ ನ್ಯಾಯಾಲಯದ ಹಾಗೂ ಇನ್ನಿತರ ನ್ಯಾಯಾಲಯದ ತೀರ್ಪುಗಳನ್ನು ಓದಿ ಅರ್ಥಮಾಡಿಕೊಳ್ಳುವುದು ಸಹ ಬಹಳ ಮುಖ್ಯವಾಗಿರುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. "ಕಾನೂನನ್ನು ಕಲೆಯಬೇಕಾದರೆ ಶಿಸ್ತುಬದ್ಧತೆ, ಸಮಯ ಪರಿಪಾಲನೆ ಹಾಗೂ ಪ್ರಾಮಾಣಿಕತೆ ಬಹಳ ಮುಖ್ಯವಾಗಿರುತ್ತದೆ ಎಂದು ಸಂದೇಶ ಕೊಟ್ಟರು.




ಅಧ್ಯಕ್ಷತೆ ವಹಿಸಿದ ಕೆ.ಪಿ.ಇಸೋಸಾಯಿಟಿಯ ಪ್ರಧಾನಕಾರ್ಯದರ್ಶಿಗಳಾದ ಶಾಂತಪ್ಪ ಸೂರನ ಅವರು ಮಾತನಾಡುತ್ತಾ ವಿದ್ಯಾರ್ಥಿಗಳಿಗೆ ಕಾಲೇಜಿನಲ್ಲಿ ಇರುವಂತಹ ಗ್ರಂಥಾಲಯವನ್ನು ಸರಿಯಾದ ರೀತಿಯಲ್ಲಿ ಉಪಯೋಗ ಮಾಡಿಕೊಂಡು ಒಳ್ಳೆಯ ನುರಿತರಾದ ವಕೀಲರಾಗಬೇಕೆಂದು ತಿಳಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವನ್ನು ಉಪನ್ಯಾಸಕರಾದ ಅಮೃತಾ ದೇಶಮಾನ್ಯ ನಡಿಸಿಕೊಟ್ಟರು. ಸ್ವಾಗತ ಹಾಗೂ ನ್ಯಾಯಾಧೀಶರ ಪರಿಚಯವನ್ನು ಉಪನ್ಯಾಸಕರಾದ ಡಾ. ಅಪರ್ಣಾ ಶಿಂಧೆ ನಡೆಸಿಕೊಟ್ಟರು ಹಾಗೂ ಈ ಸಮಾರಂಭದಲ್ಲಿ ವಂದನಾರ್ಪಣೆಯನ್ನು ಪ್ರಾಂಶುಪಾಲರಾದ ಡಾ. ಎಸ್. ಚಂದ್ರಶೇಖರ ನಡೆಸಿಕೊಟ್ಟರು ಹಾಗೂ ಈ ಸಮಾರಂಭದಲಿ ಕೆ.ಪಿ.ಇಸೋಸಾಯಿಟಿಯ ಆಡಳಿತಾಧಿಕಾರಿ ಚಂದ್ರಶೇಖರ್ ಶೀಲವಂತ ಹಾಗೂ ಕಾಲೇಜಿನ ಎಲ್ಲ ವಿದ್ಯಾರ್ಥಿಗಳು ಹಾಗೂ ಸಿಬ್ಬಂಧಿಗಳು ಹಾಜರಿದ್ದರು. ಈ ಕಾರ್ಯಕ್ರಮವನ್ನು ಮಹಾಂತೇಶ ಬಿದನೂರ ನಡೆಸಿಕೊಟ್ಟರು ಹಾಗೂ ಬುದ್ಧವಂದನೆಯನ್ನು ಕುಮಾರ ಸುಮಿತ ಕಾಂಬ್ಳೆ ನಡೆಸಿದರು.

# ಶ್ರೀರಾಮ ಗಣೇಶ್ ಭವ್ಯ ಮೆರೆವಣಿಗೆಯೊಂದಿಗೆ ವಿಸರ್ಜನೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ– ತಾಲೂಕಿನ ಹಳ್ಳಿಖೇಡ (ಬಿ) ಪಟ್ಟಣದ ಗಣೇಶ್ ಚತುರ್ಥಿ ಸಡಗರ ಸಂಭ್ರಮದ ಮಧ್ಯೆ ಆಚರಿಸಲಾಯಿತು. ಗಣೇಶ್ ಚತುರ್ಥಿ ಅಂಗವಾಗಿ ಸಂಘ ಸಂಸ್ಥೆಗಳು ಸಾರ್ವಜನಿಕ ಗಣೇಶನ ಮೂರ್ತಿ ಪ್ರತಿಷ್ಠಾಪಿಸಿದ ಕೆಲವು ಸಂಘ–ಸಂಸ್ಥೆಗಳು 5ದಿವಸ, 7, ದಿವಸ 11 ದಿವಸ ಗಣೇಶನನ್ನು ಪ್ರತಿಷ್ಠಾಪಿಸಿದ್ದಾರೆ. ಇಲ್ಲಿಯ ಶ್ರೀರಾಮ್ ಗಣೇಶ್ ಯುವಕ ಸಂಘ 7 ದಿವಸ ವರೆಗೆ ಗಣೇಶನ ಪ್ರತಿಷ್ಠಪಿಸಿ ದಿನಾಲು ಹಲವಾರು ಸಂಸ್ಕೃತಿಕ ಕಾರ್ಯಕ್ರಮ ಹಾಗೂ ಜನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು ಭಕ್ತಾದಿಗಳ ಹೃದಯ ಗೆದ್ದಿದ್ದರು. ಮಂಗಳವಾರ ಗಣೇಶನ ಅದ್ದುರಿ ಮೆರವಣಿಗೆಯೊಂದಿಗೆ ವಿಸರ್ಜನೆ ಮಾಡಲಾಯಿತ್ತು. ಇದೇ ಸಂದರ್ಭದಲ್ಲಿ ಗಣೇಶ ಉತ್ಸವದ ಸವಿ ನೆನಪಿಗಾಗಿ ಶ್ರೀರಾಮ ಕಾಲೋನಿಯನ್ನು ಇಲ್ಲಿಯ ಹಿರೇಮಠದ ಪಂಡಿತರಾಧ್ಯ ಶಿವಾಚಾರ್ಯರ ಹಸ್ತದಿಂದ ವಿಶೇಷ ಪೂಜೆ ಸಲ್ಲಿಸಿ ಶ್ರೀರಾಮ ಕಾಲೋನಿ ಎಂದು ನಾಮಕರಣ ಮಾಡಲಾಯಿತು. ಸಂಘದ ಅಧ್ಯಕ್ಷ ರವಿ ಹಳೆಂಬರ್, ಶರಣು ಅಜ್ಜರಗಿ, ನಿಲೇಶ್ ಹಿಬಾರೆ ಸೇರಿದಂತೆ ಶ್ರೀ ರಾಮ ಗಣೇಶ ಸಂಘದ ಪದಾಧಿಕಾರಿಗಳು, ಪಟ್ಟಣದ ಗಣ್ಯರು ಉಪಸಿತರಿದ್ದರು.

# ಇಂದಿನಿಂದಲೇ ಪರ್ಯಾಯ ವ್ಯವಸ್ಥೆಯ ಭರವಸೆ
# ಬಸ್ ಸೌಲಭ್ಯಕ್ಕೆ ಒತ್ತಾಯಿಸಿ ವಿದ್ಯಾರ್ಥಿಗಳಿಂದ ರಸ್ತೆತಡೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.3–ಬೆಳಿಗ್ಗೆ ಶಾಲಾ–ಕಾಲೇಜುಗಳಿಗೆ ತೆರಳಲು ಬಸ್ಸಿನ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿ ತಾಲೂಕಿನ ಶಿರೂರ ಪಟ್ಟಣದಲ್ಲಿ ಬುಧವಾರ ವಿದ್ಯಾರ್ಥಿಗಳು ಹಠಾತ್ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಮುಂಜಾನೆ 9 ಗಂಟೆಯಿಂದ 10 ಗಂಟೆಯವರೆಗೆ ಶಿರೂರಿನಲ್ಲಿ ಯಾವುದೇ ಬಸ್ಸುಗಳು ನಿಲುಗಡೆ–ಯಾಗದೇ ಇರುವುದರಿಂದ ವಿದ್ಯಾರ್ಥಿಗಳು ನಿತ್ಯ ಸಮಸ್ಯೆ ಎದುರಿಸುವಂತಾಗಿದೆ. ಇಳಕಲ್ಲ, ಗುಳೇದಗುಡ್ಡ, ಹುನಗುಂದ ಕಡೆಗಳಿಂದ ಬರುವ ಎಲ್ಲ ಬಸ್ಸುಗಳು ಪ್ರಯಾಣಿಕರಿಂದ ತುಂಬಿ ಬರುತ್ತಿರುವ ಕಾರಣಕ್ಕೆ ಶಿರೂರಿನಲ್ಲಿ ನಿಲುಗಡೆಯಾಗದೇ ಹೋಗುತ್ತಿವೆ ಎಂದು ಪ್ರತಿಭಟನಾನಿರತ ವಿದ್ಯಾರ್ಥಿಗಳು ಹೇಳಿದರು.




ಅನೇಕ ಬಾರಿ ಸಮಸ್ಯೆಯನ್ನು ಸಾರಿಗೆ ಸಂಸ್ಥೆಯವರಿಗೆ ಹೇಳಿದ್ದರೂ ವ್ಯವಸ್ಥೆ ಕಲ್ಪಿಸುವುದಕ್ಕೆ ಗಮನಹರಿಸುತ್ತಿಲ್ಲ ಎಂದು ದೂರಿದ ವಿದ್ಯಾರ್ಥಿಗಳು, ಬೆಳಗ್ಗೆ ಬಾಗಲಕೋಟೆಯಿಂದ ಶಿರೂರ ಪಟ್ಟಣ–ಕ್ಕೆ ಪ್ರತ್ಯೇಕ ಬಸ್ಸ್ ವ್ಯವಸ್ಥೆ ಮಾಡಿಕೊಡಬೇಕು ಎಂದು ಆಗ್ರಹಿಸಿದರು. ಸಾರ್ವಜನಿಕರು ಸಹ ವಿದ್ಯಾರ್ಥಿಗಳನ್ನು ಬೆಂಬಲಿಸಿ ಶಾಲೆಗೆ ತೆರಳುವ ಮಕ್ಕಳಿಗೆ ಸೌಲಭ್ಯ ಮಾಡಿಕೊಡುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪಟ್ಟಣಕ್ಕೆ ಭೇಟಿ ನೀಡಿದ ಸಂಸದ ಪಿ.ಸಿ.ಗದ್ದಿಗೌಡರ ವಿದ್ಯಾರ್ಥಿಗಳ ಸಮಸ್ಯೆ ಆಲಿಸಿ ಪರಿಹಾರ ಕಲ್ಪಿಸುವುದಾಗಿ ಭರವಸೆ ನೀಡಿದರು. ಆಗಲೂ ವಿದ್ಯಾರ್ಥಿಗಳು ಬಾಗಲಕೋಟೆ ಡಿಪೋ ಮ್ಯಾನೇಜರ ಸ್ಥಳಕ್ಕೆ ಬರಲಿ ಎಂದು ಪಟ್ಟು ಹಿಡಿದರು. ನಂತರ ಸ್ಥಳಕ್ಕೆ ಆಗಮಿಸಿದ ಡಿಪೋ ವ್ಯವಸ್ಥಾಪಕ ಕೃಷ್ಣಾ ಚವ್ಹಾಣ ಹಿರಿಯ ಅಧಿಕಾರಿಗಳೊಂದಿಗೆ ಮಾತನಾಡಿ ಗುರುವಾರದಿಂದಲೇ ಬಾಗಲಕೋಟೆ–ಶಿರೂರ ಮಧ್ಯೆ ಬೆಳಿಗ್ಗೆ 3 ಬಾರಿ ಸಿಟಿ ಬಸ್ ಓಡಿಸುವ ವ್ಯವಸ್ಥೆ ಮಾಡಿಕೊಡುವುದಾಗಿ ಭರವಸೆ ನೀಡಿದರು.

ವಿದ್ಯಾರ್ಥಿಗಳ ರಸ್ತೆ ತಡೆಯಿಂದಾಗಿ ರಾಯಚೂರ–ಬೆಳಗಾವಿ ಹೆದ್ದಾರಿಯಲ್ಲಿ 1 ಗಂಟೆಗೂ ಹೆಚ್ಚು ಕಾಲ ವಾಹನ ಸಂಚಾರ ಸ್ಥಗಿತಗೊಂಡಿತ್ತು. ತುರ್ತು ಕೆಲಸಗಳಿಗೆ ಹೋಗಬೇಕಾದ ಪ್ರಯಾಣಿಕರು, ವಾಹನಗಳು ಅನಿವಾರ್ಯವಾಗಿ ಬೇರೆ ಮಾರ್ಗದ ಮೂಲಕ ತೆರಳುವಂತಾಯಿತು.

# ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾಗಿ ಮತ್ತು ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾಗಿ ಅಧಿಕಾರ ವಹಿಸಿಕೊಂಡ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ;ಸೆ.3: ಕಲಬುರಗಿ ನಗರದ ಶರಣಬಸವೇಶ್ವರ ದೇಗುಲದ ಆವರಣದಲ್ಲಿರುವ ಅನುಭವ ಮಂಟಪದಲ್ಲಿ ಬುಧವಾರ ನಡೆದ ಸರಳ ಸಮಾರಂಭದಲ್ಲಿ ಶತಮಾನೋತ್ಸವ ಆಚರಿಸಿದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾಗಿ ಮತ್ತು ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾಗಿ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿಯವರು ಅಧಿಕಾರ ವಹಿಸಿಕೊಂಡರು.




ಅನೇಕ ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿರುವ ಸಂಘದ ಮೊದಲ ಮಹಿಳಾ ಅಧ್ಯಕ್ಷೆ ಎಂಬ ಗೌರವವನ್ನು ಡಾ. ಅವ್ವಾಜಿಗೆ ಒಲಿದು ಬಂದಿದೆ. ಶ್ರೀಮಂತ ಶೈಕ್ಷಣಿಕ ಅನುಭವ ಹಾಗೂ ಜ್ಞಾನವನ್ನು ಹೊಂದಿರುವ ಅವ್ವಾಜಿಯವರು ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳ ಹುದ್ದೆಯನ್ನು ಅಲಂಕರಿಸಿದ ಎರಡನೇ ಮಹಿಳೆ ಎಂಬ ವಿಶಿಷ್ಟ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. (ಡಾ. ಸಬಿತಾ ರಾಮಮೂರ್ತಿ ಸಿ.ಎಂ.ಆರ್. ವಿಶ್ವವಿದ್ಯಾಲಯದ ಮತ್ತೊಬ್ಬ ಮಹಿಳಾ ಕುಲಪತಿ). ಆಗಸ್ಟ್ 14 ರಂದು ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ ನಿಧನದ ನಂತರ ಎರಡೂ ಹುದ್ದೆಗಳು ಖಾಲಿಯಾಗಿದ್ದವು.

ಎರಡು ಹುದ್ದೆಗಳ ಅಧಿಕಾರ ವಹಿಸಿಕೊಂಡ ನಂತರ ಭಾವುಕರಾಗಿ ಮಾತನಾಡಿದ ಡಾ. ಅವ್ವಾಜಿ, ಕೈಗೆಟುಕುವ ವೆಚ್ಚದಲ್ಲಿ ಗುಣಮಟ್ಟದ ಶಿಕ್ಷಣ ಮತ್ತು ಮಹಿಳೆಯರ ಶೈಕ್ಷಣಿಕ ಸಬಲೀಕರಣವನ್ನು ಒದಗಿಸುವ ಡಾ. ಅಪ್ಪಾಜಿ ಅವರ ಕನಸನ್ನು ತಮ್ಮ ಅಧಿಕಾರಾವಧಿಯಲ್ಲಿ ಹೊಸ ಹುರುಪಿನಿಂದ ಕಾರ್ಯಗತಗೊಳಿಸಲಾಗುವುದು ಮತ್ತು ಕಲಬುರಗಿ ಪ್ರದೇಶದ ಜನರಿಗೆ ಶೈಕ್ಷಣಿಕ ಅವಕಾಶಗಳ ಹೊಸ ಮಾರ್ಗಗಳನ್ನು ತೆರೆಯಲು ಡಾ. ಅಪ್ಪಾಜಿ ಹಾಕಿಕೊಟ್ಟ ಮಾರ್ಗವನ್ನು ಮುಂದುವರಿಸಲಾಗುವುದು ಎಂದು ಘೋಷಿಸಿದರು.

ನಮ್ಮ ಸಂಘದ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಪ್ರತಿಯೊಬ್ಬ ಅಧ್ಯಾಪಕರು ನಿಷ್ಠೆಯಿಂದ ಕೆಲಸ ಮಾಡಿ ಶ್ರಮಪಟ್ಟರೇ, ಶರಣಬಸವ ವಿಶ್ವವಿದ್ಯಾಲಯವನ್ನು ಅತ್ಯುತ್ತಮ ವಿಶ್ವವಿದ್ಯಾಲಯವಾಗಿ ಹಾಗೂ ವಿಶ್ವದ ಅಗ್ರ 100 ವಿಶ್ವವಿದ್ಯಾಲಯಗಳಲ್ಲಿ ಒಂದಾಗಿ ಪರಿವರ್ತಿಸಲು ಪೂಜ್ಯ ಡಾ. ಅಪ್ಪಾಜಿ ಅವರ ಘೋಷಿತ ಕನಸನ್ನು ಸಾಧಿಸಲು ತಮ್ಮನ್ನು ತಾವು ಪುನರ್ ಸಮರ್ಪಿಸಿಕೊಳ್ಳಬೇಕು ಎಂದು ಅವರು ಆಗ್ರಹಿಸಿದರು. ಶಿಕ್ಷಣ ಕ್ಷೇತ್ರದಲ್ಲಿ ಡಾ. ಅಪ್ಪಾಜಿಯವರ ಕೊಡುಗೆಯ ಬಗ್ಗೆ ವಿವರವಾಗಿ ಮಾತನಾಡಿದ ಡಾ. ಅವ್ವಾಜಿ, ಡಾ. ಅಪ್ಪಾಜಿಯವರ ನೇತೃತ್ವದಲ್ಲಿ ಸಂಘವು ಈ ಪ್ರದೇಶದಲ್ಲಿ ಮೊದಲ ಪಬ್ಲಿಕ್ ಶಾಲೆಯನ್ನು ಪ್ರಾರಂಭಿಸಿ, ಪಬ್ಲಿಕ್ ಶಾಲೆಗಳು ನೀಡುವ ಗುಣಮಟ್ಟದ ಶಿಕ್ಷಣವನ್ನು ಕಲಬುರಗಿಯ ಜನರ ಮನೆ ಬಾಗಿಲಿಗೆ ತರುವ ಗೌರವವನ್ನು ಹೊಂದಿದೆ ಎಂದು ಹೆಮ್ಮೆಯಿಂದ ಹೇಳಿದರು.

ಜಿಲ್ಲೆಯ ವಿದ್ಯಾರ್ಥಿಗಳ ಶೈಕ್ಷಣಿಕ ಸಬಲೀಕರಣಕ್ಕಾಗಿ ಡಾ. ಅಪ್ಪಾಜಿಯವರ ಕನಸನ್ನು ನನಸಾಗಿಸುವಲ್ಲಿ ಹಲವಾರು ಶಿಕ್ಷಕರ ಕೊಡುಗೆಗಳನ್ನು ಡಾ. ಅವ್ವಾಜಿ ಸ್ಮರಿಸಿದರು ಮತ್ತು ಶರಣಬಸವೇಶ್ವರ ವಸತಿ ಪಬ್ಲಿಕ್ ಶಾಲೆಯ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಾಂಶುಪಾಲರಲ್ಲಿ ಒಬ್ಬರಾದ ಶ್ರೀ ಎನ್. ಎಸ್. ದೇವರಕಲ್ ಅವರ ಕೊಡುಗೆಯನ್ನು ಶ್ಲಾಘಿಸಿದರು. ದೇಶಾದ್ಯಂತ ಮತ್ತು ದೇಶದ ಹೊರಗೆ ಪ್ರತಿಷ್ಠಿತ ಕಂಪನಿಗಳಲ್ಲಿ ಸಾವಿರಾರು ವೈದ್ಯರು ಮತ್ತು ಪ್ರಖ್ಯಾತ ಇಂಜಿನಿಯರ್‌ಗಳು ಸೇವೆ ಸಲ್ಲಿಸಲು ಕಲಬುರಗಿ ಜಿಲ್ಲೆಗೆ ಏಕೈಕ ಕಾರಣವಾಗಿದೆ ಎಂದು ಗಮನಸೆಳೆದರು. ಈ ಪ್ರದೇಶದ ಶೈಕ್ಷಣಿಕ ಸಬಲೀಕರಣವು ಪ್ರದೇಶದ ಆರ್ಥಿಕ ಅಭಿವೃದ್ಧಿಗೆ ಕಾರಣವಾಗಿದೆ ಎಂದರು.

ಡಾ. ಅಪ್ಪಾಜಿಯವರ ಹೆಜ್ಜೆಗಳನ್ನು ಅನುಸರಿಸಲು, ಶಿಕ್ಷಣ ಸಂಸ್ಥೆಗಳು ಹಾಗೂ ಶರಣಬಸವ ವಿಶ್ವವಿದ್ಯಾಲಯವನ್ನು ಮತ್ತಷ್ಟು ಬಲಪಡಿಸಿ ಅಭಿವೃದ್ಧಿಪಡಿಸಲು ತಮ್ಮನ್ನು ತಾವು ಅರ್ಪಿಸಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಿದ ಡಾ. ಅವ್ವಾಜಿ, ಸಂಸ್ಥಾನದ 9ನೇ ಪೀಠಾಧಿಪತಿ ಚಿರಂಜೀವಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಅವರನ್ನು "ವಿಶ್ವ ಮಾನವ"ರನ್ನಾಗಿಸುವುದು ಅವರ ಇನ್ನೊಂದು ಜವಾಬ್ದಾರಿಯಾಗಿದೆ ಎಂದು ಘೋಷಿಸಿದರು. ಇದೇ ವೇಳೆ ಪೂಜ್ಯ ಡಾ. ಅಪ್ಪಾಜಿ ಅವರ ಸ್ಮರಣಾರ್ಥ ಶರಣಬಸವೇಶ್ವರ ದೇಗುಲದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಅನುಭವ ಮಂಟಪಕ್ಕೆ "ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅನುಭವ ಮಂಟಪ" ಎಂದು ನಾಮಕರಣ ಮಾಡಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ ಮತ್ತು ಇತರ ಪದಾಧಿಕಾರಿಗಳು ಡಾ. ಅವ್ವಾಜಿ ಅವರನ್ನು ವಿಶ್ವವಿದ್ಯಾಲಯದ ಪರವಾಗಿ ಅಭಿನಂದಿಸಿ ಸನ್ಮಾನಿಸಿದರು. ಪ್ರಾಸ್ತಾವಿಕ ಮಾತುಗಳನ್ನಾಡಿದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ, ಸಂಘದ ವತಿಯಿಂದ ಡಾ. ಅವ್ವಾಜಿ ಅವರನ್ನು ಸನ್ಮಾನಿಸಿ, ಸಂಘದ ಅಧೀನದಲ್ಲಿರುವ ಎಲ್ಲಾ ಕಾಲೇಜುಗಳು ಹಾಗೂ ಇತರೆ ಶಿಕ್ಷಣ ಸಂಸ್ಥೆಗಳ ಪ್ರಾಧ್ಯಾಪಕರು ಹಾಗೂ ಪ್ರಾಚಾರ್ಯರು ಡಾ. ಅವ್ವಾಜಿಯವರನ್ನು ಸನ್ಮಾನಿಸಿದರು.

ಸಂಸ್ಥಾನದ 9ನೇ ಪೀಠಾಧಿಪತಿ ಚಿರಂಜೀವಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ ತಮ್ಮ ಸಂಕ್ಷಿಪ್ತ ನುಡಿಗಳಲ್ಲಿ, ತಮ್ಮ ತಾಯಿ ಡಾ. ಅವ್ವಾಜಿ ಅವರು ಸಂಘದ ಅಧ್ಯಕ್ಷರಾಗಿ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿಗಳಾಗಿ ಅಧಿಕಾರ ವಹಿಸಿಕೊಂಡಿದ್ದು ನಮ್ಮೆಲ್ಲರಿಗೂ ಒಂದು ಸುಸಂದರ್ಭ ಎಂದು ಶ್ಲಾಘಿಸಿದರು. ಡಾ. ಅಪ್ಪಾಜಿ ಅವರ ಎಲ್ಲಾ ಕನಸುಗಳನ್ನು ಸಾಧಿಸಲು ನಾವೆಲ್ಲರೂ ಡಾ. ಅವ್ವಾಜಿ ಅವರ ಕೈಗಳನ್ನು ಬಲಪಡಿಸಬೇಕೆಂದು ಅವರು ಎಲ್ಲರಲ್ಲೂ ಮನವಿ ಮಾಡಿದರು.

ಡಾ. ಅಪ್ಪಾಜಿ ಅವರ ಆಪ್ತ ಸಂಬಂಧಿಕರು ಸೇರಿದಂತೆ ನಿಷ್ಠಿ ಕುಟುಂಬದ ಸದಸ್ಯರು, ಸೋಲಾಪುರದ ಕಾಡಾದಿ ಕುಟುಂಬ, ಔಸಾ ಮಹಾರಾಜ್ ಕುಟುಂಬ ಸದಸ್ಯರು, ಭೀಮಳ್ಳಿ ಕುಟುಂಬ ಸದಸ್ಯರು, ವಡಗಾಂವ್ ದೇಶಮುಖ್ ಕುಟುಂಬ ಸದಸ್ಯರು ಸೇರಿದಂತೆ ಇತರ ಕುಟುಂಬದ ಸಂಬಂಧಿಕರು ಉಪಸ್ಥಿತರಿದ್ದರು. ಅರುಣ್‌ಕುಮಾರ್ ಪಾಟೀಲ್ ಕೊಡಲಹಂಗರಗಾ, ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಡಾ. ಎಸ್. ಜಿ. ಡೊಳ್ಳೇಗೌಡರ್, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಡೀನ್ ಡಾ. ಲಕ್ಷ್ಮಿ ಪಾಟೀಲ್ ಮಾಕಾ, ಹಣಕಾಸು ಅಧಿಕಾರಿ ಪ್ರೊ. ಕಿರಣ್ ಮಾಕಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯದ ಸಾರಿಗೆ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.03–ರಾಜ್ಯದ ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಸೆಪ್ಟೆಂಬರ್ 6 ರಂದು ಶನಿವಾರ ಬೆಳಿಗ್ಗೆ 11.45 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಅಂದು ಮಧ್ಯಾಹ್ನ 1



ಗಂಟೆಗೆ ಆಳಂದ ಕೇಂದ್ರ ಬಸ್ ನಿಲ್ದಾಣದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವತಿಯಿಂದ ಆಳಂದದಲ್ಲಿ ನಿರ್ಮಾಣ ಮಾಡಲಿರುವ ನೂತನ ಬಸ್ ನಿಲ್ದಾಣದ ಶಂಕುಸ್ಥಾಪನಾ ಸಮಾರಂಭದಲ್ಲಿ

ಭಾಗವಹಿಸುವರು. ನಂತರ ಸಂಜೆ 4.30 ಗಂಟೆಗೆ ಆಳಂದದಿಂದ ರಸ್ತೆ ಮೂಲಕ ಹೈದ್ರಾಬಾದ್‌ಗೆ ಪ್ರಯಾಣಿಸುವರು.

# ಬಸ್ ಸೌಲಭ್ಯಕ್ಕೆ ಒತ್ತಾಯಿಸಿ ವಿದ್ಯಾರ್ಥಿಗಳಿಂದ ರಸ್ತೆತಡೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.3–ಬೆಳಿಗ್ಗೆ ಶಾಲಾ–ಕಾಲೇಜುಗಳಿಗೆ ತೆರಳಲು ಬಸ್ಸಿನ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿ ತಾಲೂಕಿನ ಶಿರೂರ ಪಟ್ಟಣದಲ್ಲಿ ಬುಧವಾರ ವಿದ್ಯಾರ್ಥಿಗಳು ಹಠಾತ್ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಮುಂಜಾನೆ 9 ಗಂಟೆಯಿಂದ 10 ಗಂಟೆಯವರೆಗೆ ಶಿರೂರಿನಲ್ಲಿ ಯಾವುದೇ ಬಸ್ಸುಗಳು ನಿಲುಗಡೆಯಾಗದೇ ಇರುವುದರಿಂದ ವಿದ್ಯಾರ್ಥಿಗಳು ನಿತ್ಯ ಸಮಸ್ಯೆ ಎದುರಿಸುವಂತಾಗಿದೆ. ಇಳಕಲ್ಲ, ಗುಳೇದಗುಡ್ಡ, ಹುನಗುಂದ ಕಡೆಗಳಿಂದ ಬರುವ ಎಲ್ಲ ಬಸ್ಸುಗಳು ಪ್ರಯಾಣಿಕರಿಂದ ತುಂಬಿ ಬರುತ್ತಿರುವ ಕಾರಣಕ್ಕೆ ಶಿರೂರಿನಲ್ಲಿ ನಿಲುಗಡೆ–ಯಾಗದೇ ಹೋಗುತ್ತಿವೆ ಎಂದು ಪ್ರತಿಭಟನಾನಿರತ ವಿದ್ಯಾರ್ಥಿಗಳು ಹೇಳಿದರು.

ಅನೇಕ ಬಾರಿ ಸಮಸ್ಯೆಯನ್ನು ಸಾರಿಗೆ ಸಂಸ್ಥೆಯವರಿಗೆ ಹೇಳಿದ್ದರೂ ವ್ಯವಸ್ಥೆ ಕಲ್ಪಿಸುವುದಕ್ಕೆ ಗಮನಹರಿಸುತ್ತಿಲ್ಲ ಎಂದು ದೂರಿದ ವಿದ್ಯಾರ್ಥಿಗಳು, ಬೆಳಗ್ಗೆ ಬಾಗಲಕೋಟೆಯಿಂದ ಶಿರೂರ ಪಟ್ಟಣಕ್ಕೆ ಪ್ರತ್ಯೇಕ ಬಸ್ ವ್ಯವಸ್ಥೆ ಮಾಡಿಕೊಡಬೇಕು ಎಂದು ಆಗ್ರಹಿಸಿದರು. ಸಾರ್ವಜನಿಕರು ಸಹ ವಿದ್ಯಾರ್ಥಿಗಳನ್ನು ಬೆಂಬಲಿಸಿ ಶಾಲೆಗೆ ತೆರಳುವ ಮಕ್ಕಳಿಗೆ ಸೌಲಭ್ಯ ಮಾಡಿಕೊಡುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪಟ್ಟಣಕ್ಕೆ ಭೇಟಿ ನೀಡಿದ ಸಂಸದ ಪಿ.ಸಿ.ಗದ್ದಿಗೌಡರ ವಿದ್ಯಾರ್ಥಿಗಳ ಸಮಸ್ಯೆ ಆಲಿಸಿ ಪರಿಹಾರ ಕಲ್ಪಿಸುವುದಾಗಿ ಭರವಸೆ ನೀಡಿದರು. ಆಗಲೂ ವಿದ್ಯಾರ್ಥಿಗಳು ಬಾಗಲಕೋಟೆ ಡಿಪೋ ಮ್ಯಾನೇಜರ ಸ್ಥಳಕ್ಕೆ ಬರಲಿ ಎಂದು ಪಟ್ಟು ಹಿಡಿದರು. ನಂತರ ಸ್ಥಳಕ್ಕೆ ಆಗಮಿಸಿದ ಡಿಪೋ ವ್ಯವಸ್ಥಾಪಕ ಕೃಷ್ಣಾ ಚವ್ಹಾಣ ಹಿರಿಯ ಅಧಿಕಾರಿಗಳೊಂದಿಗೆ ಮಾತನಾಡಿ ಗುರುವಾರದಿಂದಲೇ ಬಾಗಲಕೋಟೆ–ಶಿರೂರ ಮಧ್ಯೆ ಬೆಳಿಗ್ಗೆ 3 ಬಾರಿ ಸಿಟಿ ಬಸ್ ಓಡಿಸುವ ವ್ಯವಸ್ಥೆ ಮಾಡಿಕೊಡುವುದಾಗಿ ಭರವಸೆ ನೀಡಿದರು.

ವಿದ್ಯಾರ್ಥಿಗಳ ರಸ್ತೆತಡೆಯಿಂದಾಗಿ ರಾಯಚೂರ–ಬೆಳಗಾವಿ ಹೆದ್ದಾರಿಯಲ್ಲಿ 1 ಗಂಟೆಗೂ ಹೆಚ್ಚು ಕಾಲ ವಾಹನ ಸಂಚಾರ ಸ್ಥಗಿತಗೊಂಡಿತ್ತು. ತುರ್ತು ಕೆಲಸಗಳಿಗೆ ಹೋಗಬೇಕಾದ ಪ್ರಯಾಣಿಕರು, ವಾಹನಗಳು ಅನಿವಾರ್ಯವಾಗಿ ಬೇರೆ ಮಾರ್ಗದ ಮೂಲಕ ತೆರಳುವಂತಾಯಿತು.

# ಕಲ್ಯಾಣ ಕರ್ನಾಟಕ ಉತ್ಸವಕ್ಕೆ. ಸಿ.ಎಂ. ಆಗಮನ: ಕಾರ್ಯಕ್ರಮ ಯಶಸ್ಸಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ:ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.3: ಇದೇ ಸೆಪ್ಟೆಂಬರ್ 17 ರಂದು ಜರುಗುವ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರು, ಶಾಸಕರು–ಸಂಸದರು ಹಾಗೂ ಇತರೆ ಚುನಾಯಿತ ಜನಪ್ರತಿನಿಧಿಗಳು ಆಗಮಿಸುವುದರಿಂದ ಕಾರ್ಯಕ್ರಮ ಯಶಸ್ಸಿಗೆ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು.

ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, ಸೆ.17 ರಂದು ಬೆಳಿಗ್ಗೆ ಸರ್ದಾರ್ ವಲ್ಲಭಭಾಯ್ ಪಟೇಲ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಿರುವ ಮುಖ್ಯಮಂತ್ರಿಗಳು ತದನಂತರ ಪೊಲೀಸ್ ಪರೇಡ್ ಮೈದಾನದಲ್ಲಿ ನಡೆಯುವ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವರು ಎಂದು ಮುಖ್ಯಮಂತ್ರಿಗಳ ಪ್ರವಾಸದ ವಿವರ ಹಂಚಿಕೊಂಡರು.

ಶಿಷ್ಟಾಚಾರದಂತೆ ಜಿಲ್ಲೆಯ ಎಲ್ಲಾ ಚುನಾಯಿತ ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಪರೇಡ್ ಮೈದಾನ, ಸರ್ದಾರ್ ವಲ್ಲಭಭಾಯ್ ಪಟೇಲ್ ವೃತ್ತ ಸೇರಿದಂತೆ ಮುಖ್ಯಮಂತ್ರಿಗಳು ಭಾಗವಹಿಸುವ ಕಾರ್ಯಕ್ರಮಗಳಲ್ಲಿ ಸ್ವಚ್ಛತೆ ಕಾಪಾಡಬೇಕು ಮತ್ತು ಪೊಲೀಸ್ ಭದ್ರತೆ ಒದಗಿಸಬೇಕು. ವಿಶೇಷವಾಗಿ ಕಲಬುರಗಿ ನಗರದ ಪ್ರಮುಖ ವೃತ್ತಗಳನ್ನು ದೀಪಾಲಂಕಾರಗೊಳಿಸಬೇಕು. ಕಾರ್ಯಕ್ರಮ ಯಶಸ್ಸಿಗೆ ವಿವಿಧ ಸಮಿತಿಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿದ್ದು, ಅದರಂತೆ ಅಧಿಕಾರಿಗಳು ಯಾವುದೇ ಕರ್ತವ್ಯ ಲೋಪಕ್ಕೆ ಅವಕಾಶ ನೀಡದೆ ಕಾರ್ಯನಿರ್ವಹಿಸಬೇಕು ಎಂದರು.

ಸೆಪ್ಟೆಂಬರ್ 17ರ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆ ಮತ್ತು ಪ್ರದೇಶದ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಮತ್ತು ಸೌಲಭ್ಯ ವಿತರಣೆ ಕಾರ್ಯಕ್ರಮ ಆಯೋಜಿಸಬೇಕಿದ್ದಲ್ಲಿ ಶನಿವಾರದೊಳಗೆ ಪಟ್ಟಿಯನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು. ಕೊನೆ ಕ್ಷಣದಲ್ಲಿ ಕಾರ್ಯಕ್ರಮ ಸೇರ್ಪಡೆಗೆ ಇಲ್ಲಿ ಅವಕಾಶ ಇಲ್ಲ ಎಂದು ಅಧಿಕಾರಿಗಳಿಗೆ ಅವರು ಸ್ಪಷ್ಟಪಡಿಸಿದರು. ಸ್ಥಬ್ದ ಚಿತ್ರಗಳು ಆಕರ್ಷಕವಾಗಿರಲಿ: ಅಕ್ಷರ ಆವಿಷ್ಕಾರ, ಆರೋಗ್ಯ ಆವಿಷ್ಕಾರ, ಅರಣ್ಯ ಆವಿಷ್ಕಾರ, ಪ್ರಜಾ ಸೌಧ, ಅರಿವು ಕೇಂದ್ರ, ಮಾದರಿ ವಸತಿ ನಿಲಯಗಳು ಹೀಗೆ ಸುಮಾರು 11 ವಿಷಯಗಳ ಮೇಲೆ ವಿವಿಧ ಇಲಾಖೆಗಳು ಆಕರ್ಷಕ ಸ್ಥಬ್ದ ಚಿತ್ರಗಳನ್ನು ಪ್ರದರ್ಶಿಸಬೇಕು. ಪ್ರತಿ ಸ್ಥಬ್ದ ಚಿತ್ರಗಳ ಮುಂದೆ ಪ್ರದೇಶದ ಕಲಾವಿದರಿಂದ ಕಲಾ ಪ್ರದರ್ಶನ ಆಯೋಜಿಸಬೇಕು ಎಂದರು. ಸಾರ್ವಜನಿಕರ ಅರ್ಜಿಗೆ ಸ್ಪಂದಿಸಿ: ಮುಖ್ಯಮಂತ್ರಿಗಳು ಬರುತ್ತಾ–ರೆಂದರೆ ಸಾರ್ವಜನಿಕರು ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಸರ್ಕಾರಿ ಕಚೇರಿಯಲ್ಲಿ ತಮ್ಮ ಕೆಲಸ ಆಗಿಲ್ಲ ಎಂದು ಅರ್ಜಿ ಹಿಡಿದುಕೊಂಡು ಬರುವುದು ಸಾಮಾನ್ಯವಾಗಿದೆ. ಇದನ್ನು ತಪ್ಪಿಸಲು ತಮ್ಮ ತಮ್ಮ ಕಚೇರಿಯಲ್ಲಿ ಸಾರ್ವಜನಿಕರಿಂದ ಸ್ವೀಕೃತ ಅರ್ಜಿಯನ್ನು ತ್ವರಿತವಾಗಿ ವಿಲೇವಾರಿ ಮಾಡುವ ಮೂಲಕ ಸಾರ್ವಜನಿಕರಿಗೆ ಸ್ಪಂದಿಸುವ ಕೆಲಸ ಅಧಿಕಾರಿವರ್ಗದಿಂದಾಗಬೇಕು ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಡಿ.ಸಿ.ಪಿ ಕನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

# ಶಕ್ತಿ ಯೋಜನೆಯಿಂದ ಸಾರಿಗೆಗೆ ಲಾಭ:ಹಣಮಂತರಾವ ಚವ್ಹಾಣ

ಮಲ್ಲಮ್ಮನುಡಿ ವಾರ್ತೆ ಭಾಲ್ಕಿ:ಸೆ.3: ಸದಾ ಆರ್ಥಿಕವಾಗಿ ನಷ್ಟದಲ್ಲಿರುತ್ತಿದ್ದ ರಾಜ್ಯದ ಸಾರಿಗೆ ಸಂಸ್ಥೆಗೆ ಶಕ್ತಿ ಯೋಜನೆ ಅನುಷ್ಠಾನದಿಂದ ಲಾಭದತ್ತ ಮರಳಿದೆ ಎಂದು ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಹಣಮಂತರಾವ ಚವ್ಹಾಣ ಹೇಳಿದರು. ಪಟ್ಟಣದ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲಿನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ತಾಲೂಕಿನಲ್ಲಿ ಸಾರಿಗೆ ಇಲಾಖೆಗೆ ಪ್ರತಿ ತಿಂಗಳು 3–4 ಲಕ್ಷ ರೂ ಲಾಭ ಆಗುತ್ತಿದೆ. ಇದರಿಂದ ಚಾಲಕರು, ನಿರ್ವಾಹಕರಿಗೆ ಸಕಾಲಕ್ಕೆ ವೇತನವಾಗುತ್ತಿದೆ. ಆದರೆ ಬಸ್ ನಿಲ್ದಾಣ, ಕೋರಿಕೆ ಮೇರೆಗಿನ ನಿಲ್ದಾಣ, ರಸ್ತೆ ಪಕ್ಕದಲ್ಲಿ ವಿವಿಧೆಡೆ ಸಂಚರಿಸಲು ಮಹಿಳೆಯರು ನಿಂತಿ–ದ್ದರೆ ಸಾರಿಗೆಯ ಕೆಲ ಚಾಲಕರು ಕಂಡು ಕಾಣದಂತೆ ಬಸ್‌ನ್ನು ಓಡಿಸಿಕೊಂಡು ಹೋಗುತ್ತಿದ್ದಾರೆ ಎನ್ನುವ ದೂರು ಬರುತ್ತಿವೆ. ಇಂತಹ ಘಟನೆ ಮರುಕಳಿಸಿದರೆ ತಕ್ಷಣ ಬಸ್ ಚಾಲಕನ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು ಸಾರಿಗೆ ಸಂಸ್ಥೆಯ ಡಿಪೋ ವ್ಯವಸ್ಥಾಪಕರಿಗೆ ಸೂಚನೆ ನೀಡಿದರು. ಗೃಹ ಲಕ್ಷ್ಮಿ ?? ಯೋಜನೆ ಅರ್ಹ ಫಲಾನುಭವಿಗಳಿಗೆ ಸಿಗುವಂತೆ ನೋಡಿಕೊಳ್ಳಬೇಕು. ಇನ್ನೂ 4–5 ಸಾವಿರ ಫಲಾನುಭವಿಗಳು ಈ ಯೋಜನೆಯಿಂದ ವಂಚಿತರಾಗಿದ್ದಾರೆ. ಕೂಡಲೇ ಬಿಟ್ಟು ಹೋಗಿರುವ ಫಲಾನುಭವಿಗಳ ಹೆಸರು ಪತ್ತೆ ಹಚ್ಚಿ ಎಲ್ಲರಿಗೂ ಯೋಜನೆಯ ಲಾಭ ಸಿಗುವಂತೆ ಮಾಡಬೇಕು. ಅನ್ನ ಭಾಗ್ಯ ಯೋಜನೆ ಎಲ್ಲರಿಗೂ ದಕ್ಕಬೇಕು ಎಂದು ತಿಳಿಸಿದರು. ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯ ಧನರಾಜ ಪಾಟೀಲ್ ಮಾತನಾಡಿ, ಎಲ್ಲ ಸದಸ್ಯರಿಗೆ ಹೊಸದಾಗಿ ಗುರುತಿನ ಚೀಟಿ ನೀಡುವಂತೆ ಮನವಿ ಮಾಡಿದ್ದರು. ಸದಸ್ಯರಾದ ಜೈಶ್ರೀ ಮಾನಕಾರ, ಮಂಗಳಾ ಬಾಬುರಾವ ಮಾತನಾಡಿ ಬಸ್‌ನಲ್ಲಿ ಸಂಚರಿಸುವ ಮಹಿಳೆಯರನ್ನು ಬಸ್‌ನ ಕಂಡಕ್ಟರ್‌ಗಳು ನಿಂದಿಸುತ್ತಿದ್ದಾರೆ. ಅಂತಹ ಕಂಡಕ್ಟರ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಶೇಖ ಅಬ್ದುಲನಸೀರ್, ಸದಸ್ಯರಾದ ವಿಲಾಸ ಪಾಟೀಲ್, ಸಂಗಮೇಶ ವಾಲೆ, ಓಂಕಾರ ರಾಮಶೆಟ್ಟಿ, ಪಾಂಡುರಂಗ ಕಣಜೆ, ದಿಲೀಪ ಪಾಟೀಲ್, ಸಂಜುಕುಮಾರ ಶಂಕರೆಪ್ಪ, ಸತೀಶ ಮಾಳಗೆ, ಕೈಲಾಸ ಶಿವಾಜಿ, ಗೋಪಾಲ ಸೂರ್ಯವಂಶಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ಇದ್ದರು.

ಸಿಡಿಪಿಓಗೆ ತರಾಟೆ

ಸಭೆಗೆ ತಡವಾಗಿ ಬಂದ ಶಿಶು ಅಭಿವೃದ್ಧಿ ಯೋಜನಾಧಿಕಾರಿಯನ್ನು ಸಭೆಯ ಅಧ್ಯಕ್ಷ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಹಣಮಂತರಾವ ಚವ್ಹಾಣ ತರಾಟೆಗೆ ತೆಗೆದುಕೊಂಡರು. ಪ್ರಗತಿ ಪರಿಶೀಲನೆ ಸಭೆ ಇರುವ ಬಗ್ಗೆ ಮೊದಲೇ ತಿಳಿಸಲಾಗಿದೆ. ಆದರೂ ಸಭೆಗೆ ತಡವಾಗಿ ಬಂದದ್ದು ಏಕೆ ಎಂದು ಪ್ರಶ್ನಿಸಿದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮೇಲಧಿಕಾರಿಗಳು ಬಂದಿದ್ದರು ಎನ್ನುವ ಸ್ಪಷ್ಟೀಕರಣ ನೀಡುವ ಪ್ರಯತ್ನ ಮಾಡಿದ್ದರು. ಆದರೆ ಇದರಿಂದ ಸಮಾಧಾನಗೊಳ್ಳದ ಸಭೆಯ ಅಧ್ಯಕ್ಷರು ಇನ್ಮುಂದೆ ಹೀಗಾದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

# ಎಚ್‌ಎಸ್ ಸಿಂಧೋಲ್ ಪೆಟ್ರೋಲಿಯಂನಲ್ಲಿ ಸಿಎನ್‌ಜಿ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಸೆ.03: ಬಿಪಿಸಿಎಲ್–ಗ್ಯಾಸ್ ಸೆಪ್ಟೆಂಬರ್ 02, 2025 ರಂದು ಕಮ್ಠಾನಾದ ಎಚ್‌ಎಸ್ ಸಿಂಧೋಲ್ ಪೆಟ್ರೋಲಿಯಂನಲ್ಲಿ ಸಿಎನ್‌ಜಿ ಮೇಳವನ್ನು ಆಯೋಜಿಸಲಾಗಿದೆ ಎಂದು ತಿಳಿಸಲು ಸಂತೋಷಪಡುತ್ತದೆ.



ಸಿಎನ್‌ಜಿ ಮೇಳವನ್ನು ಕೃಷ್ಣದಾಸ್ ವಿ (ಟಿಎಂ–ಗ್ಯಾಸ್) ಮತ್ತು ಬಿಪಿಸಿಎಲ್ ಪ್ರತಿನಿಧಿಗಳು ಔಪಚಾರಿಕವಾಗಿ ಉದ್ಘಾಟಿಸಿದರು ಮತ್ತು ಔಟ್ಲೆಟ್ನ ಡೀಲರ್ ಶಿವ ಸಿಂಧೋಲ್ ಅವರನ್ನು ಆತ್ಮೀಯವಾಗಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ, ಪ್ರಮುಖ ಓಇಎಂಗಳಾದ ಮಾರುತಿ, ಟಾಟಾ ಮೋಟಾರ್ಸ್, ನೆಕ್ಸಾನ್ ಮತ್ತು ಹುಂಡೈ ಮೋಟಾರ್ಸ್ ಭಾಗವಹಿಸಿ ತಮ್ಮ ಡೆಮೊ ವಾಹನಗಳನ್ನು ನಿಲ್ದಾಣದಲ್ಲಿ ಪ್ರದರ್ಶಿಸಿದವು. ಹೆಚ್ಚುವರಿಯಾಗಿ, ಮೆಸರ್ಸ್ ಸಾಯಿ ಬಾಬಾ ಮೋಟಾರ್ಸ್ (ರೆಟ್ರೋ ಫಿಟ್ಟಿಂಗ್ ಪಾರ್ಟ್ನರ್ಸ್) ಸಹ ಹಾಜರಿದ್ದರು ಮತ್ತು ಆಯಾ ಸ್ಥಳದಲ್ಲಿ ತಮ್ಮ ಡೆಮೊ ವಾಹನಗಳನ್ನು ಪ್ರದರ್ಶಿಸಿದರು. ಬೀದರ್ ಜಿಲ್ಲೆಯಲ್ಲಿ, ಬಿಪಿಸಿಎಲ್ ಗ್ಯಾಸ್ ವಿವಿಧ ಸ್ಥಳಗಳಲ್ಲಿ 22 ಸಿಎನ್‌ಜಿ ಕೇಂದ್ರಗಳನ್ನು ಸ್ಥಾಪಿಸಿದ್ದು, ಅವೆಲ್ಲವೂ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ. ಈ ಕೇಂದ್ರಗಳು ಜಿಲ್ಲೆಯಾದ್ಯಂತ ಸಂಪೂರ್ಣ ವ್ಯಾಪ್ತಿಯನ್ನು ಖಚಿತಪಡಿಸುತ್ತವೆ, ತಡೆರಹಿತ ಸಂಪರ್ಕವನ್ನು ಒದಗಿಸುತ್ತವೆ ಮತ್ತು ಗ್ರಾಹಕರಿಗೆ 24/7 ಸಿಎನ್‌ಜಿ ಲಭ್ಯವಾಗುವಂತೆ ಮಾಡುತ್ತವೆ. ಸಂಕುಚಿತ ನೈಸರ್ಗಿಕ ಅನಿಲ (ಸಿಎನ್‌ಜಿ) ತನ್ನ ಬಹು ಪ್ರಯೋಜನಗಳಿಂದಾಗಿ ಆದ್ಯತೆಯ ಇಂಧನ ಆಯ್ಕೆಯಾಗಿ ಹೊರಹೊಮ್ಮುತ್ತಿದೆ. ಇದು ಪರಿಸರ ಸ್ನೇಹಿಯಾಗಿದ್ದು, ಪೆಟ್ರೋಲ್ ಮತ್ತು ಡೀಸೆಲ್‌ಗೆ ಹೋಲಿಸಿದರೆ ಕಡಿಮೆ ಹೊರಸೂಸುವಿಕೆಯನ್ನು ಉತ್ಪಾದಿಸುತ್ತದೆ, ಇದರಿಂದಾಗಿ ವಾಯು ಮಾಲಿನ್ಯವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಸಿಎನ್‌ಜಿ ವೆಚ್ಚ–ಪರಿಣಾಮಕಾರಿಯಾಗಿದ್ದು, ವಾಹನ ಮಾಲೀಕರಿಗೆ ಗಮನಾರ್ಹ ಉಳಿತಾಯವನ್ನು ನೀಡುತ್ತದೆ ಮತ್ತು ಪರಿಣಾಮಕಾರಿ ಎಂಜಿನ್ ಕಾರ್ಯಕ್ಷಮತೆ ಮತ 'ು ದೀರ್ಘಾವಧಿಯ ಜೀವಿತಾವಧಿಯನ್ನು ಖಚಿತಪಡಿಸುತ್ತದೆ. ಗಾಳಿಗಿಂತ ಹಗುರವಾಗಿರುವುದರಿಂದ, ಸೋರಿಕೆಯ ಸಂದರ್ಭದಲ್ಲಿ ಇದು ತ್ವರಿತವಾಗಿ ಹರಡುವುದರಿಂದ ಇದನ್ನು

ಸುರಕ್ಷಿತವೆಂದು ಪರಿಗಣಿಸಲಾಗುತ್ತದೆ.24/7 ಲಭ್ಯತೆಯನ್ನು ಖಾತ್ರಿಪಡಿಸುವ ಸಿಎನ್‌ಜಿ ಕೇಂದ್ರಗಳ ವಿಸ್ತರಿಸುವ ಜಾಲದೊಂದಿಗೆ, ಸಿಎನ್‌ಜಿ ಗ್ರಾಹಕರಿಗೆ ಅನುಕೂಲವನ್ನು ಒದಗಿಸುವುದಲ್ಲದೆ, ಆಮದು ಮಾಡಿಕೊಂಡ ಇಂಧನಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಮೂಲಕ ಭಾರತದ ಇಂಧನ ಭದ್ರತೆಯನ್ನು ಬೆಂಬಲಿಸುತ್ತದೆ.

ಸಿಎನ್‌ಜಿ ಬೆಲೆ ಕೆಜಿಗೆ ಕೇವಲ 85.50 ಆಗಿದ್ದು, ಇತರ ಸಾಂಪ್ರದಾಯಿಕ ಇಂಧನಗಳಿಗೆ ಹೋಲಿಸಿದರೆ ಇದು ಹೆಚ್ಚು ಆರ್ಥಿಕವಾಗಿದ್ದು ಗ್ರಾಹಕರಿಗೆ ಗಮನಾರ್ಹ ಉಳಿತಾಯವನ್ನು ನೀಡುತ್ತದೆ.

# ಪಿಡಿಓ ಕರಾಮತ್ತು: ಒಂದೇ ಮನೆಗೆ ಮೂರು ಜಿಪಿಎಸ್

ಲಿಂಗಸುಗೂರು:ಸೆ.3: ತಾಲೂಕಿನ ಈಚನಾಳ ಗ್ರಾಮ ಪಂಚಾಯತಿಯ ಪಿಡಿಓ ಕರಾಮತ್ತಿನಿಂದಾಗಿ ಒಂದೇ ಮನೆಗೆ ಮೂರು ಬಾರಿ ಜಿಪಿಎಸ್ ಮಾಡಿ ಮೂರು ಜನರಿಗೆ ಹಣ ಪಾವತಿ ಮಾಡಿರುವ ಘಟನೆ ಬೆಳಕಿಗೆ ಬಂದಿದೆ. ಭಾರತದ ಪ್ರಜೆಗಳು ಗುಡಿಸಲಿನಲ್ಲಿ ವಾಸ ಮಾಡಬಾರದು ಎಂಬ ಉದ್ದೇಶದಿಂದ ಪ್ರಧಾನ ಮಂತ್ರಿ ನರೇಂದ್ರಮೋದಿಯವರ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಮಾಡಲಾಯಿತು. ಆದರೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡದೇ ಅನರ್ಹರು ಮನೆಗಳನ್ನು ಹಂಚಿಕೆ ಮಾಡಲಾಯಿತ್ತು. ಆದರೆ ಮನೆಗಳನ್ನು ನಿರ್ಮಿಸಿಕೊಳ್ಳದೇ ಸರ್ಕಾರದ ಹಣವನ್ನು ಸುಳ್ಳು ದಾಖಲೆ ಸೃಷ್ಟಿಸಿ ಎತ್ತುವಳಿ ಮಾಡಲಾಗಿದೆ.

ಒಂದೇ ಮನೆಗೆ ವಿವಿಧ ಕೋನಗಳಿಂದ ಮೂರು ಬಾರಿ ಜಿಪಿಎಸ್ ಮಾಡಿ ಮೂರು ಜನರಿಗೆ ಲಕ್ಷ್ಮೀ ಗ/ಂ ಬಸವರಾಜ 30,000 ರೂ.ಗಳು, ಯಶೋದ ಗ/ಂ ಶಿವಪ್ಪ 30,000ರೂ. ಗಳು ಹಾಗೂ ವಿಶಾಲಾಕ್ಷಿ ಗ/ಂ ಶರಣಬಸವ 30,000 ರೂ. ಗಳನ್ನು ಅವರ ಖಾತೆ ಹಣ ಜಮಾ ಮಾಡಲಾಗಿದೆ. ಪಿಡಿಓ ಹಾಗೂ ಕೆಲ ಬಲವುಳ್ಳ ವ್ಯಕ್ತಿಗಳು ಸೇರಿ ಸರ್ಕಾರದ ಹಣವನ್ನು ಲೂಟಿ ಮಾಡುತ್ತಿದ್ದಾರೆ. ಕಾರಣ ಕೂಡಲೇ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಈ ಕುರಿತು ಸೂಕ್ತ ತನಿಖೆಯನ್ನು ನಡೆಸಿ ಸರ್ಕಾರದ ಹಣ ಲೂಟಿ ಮಾಡಿರುವ ವ್ಯಕ್ತಿಗಳು ಹಾಗೂ ಪಿಡಿಓ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಸರ್ಕಾರದ ಹಣವನ್ನು ಮರಳಿ ಪಡೆಯಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.


ಕರ್ನಾಟಕ ಸರ್ಕಾರ

**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ**

**ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕಲಬುರಗಿ–585105** ಫೋ.ನಂ 08472-278634/256944, Email:eerwssglb14@gmail.com

ಸಂ.ಕಾ.ನಿ.ಅ/ಗ್ರಾ.ಕು.ನೀ&ನೈ/.ವಿ.ಕ/ತಾ.ಶಾ/2025–26/1120 ದಿನಾಂಕ : 03–09–2025

**ಅಲ್ಪಾವಧಿ ಟೆಂಡರ ಪ್ರಕಟಣೆ**

(ಇ–ಪ್ರೊಕ್ಯೂರ್‌ಮೆಂಟ್ ಪದ್ಧತಿಯಲ್ಲಿ https://kppp.karnataka.gov.in/ನಡಿಯಲ್ಲಿ ಮಾತ್ರ)

ಕರ್ನಾಟಕ ಘನತೆವೆತ್ತ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಭಿಯಂತರರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕಲಬುರಗಿರವರಿಂದ ಕುಡಿಯುವ ನೀರು ಕಾಮಗಾರಿಗಳಿಗೆ ಅರ್ಹ ಗುತ್ತಿಗೆದಾರರಿಂದ ಟೆಂಡರ ಆಹ್ವಾನಿಸಲಾಗಿದ್ದು ವಿವರ ಈ ಕೆಳಗಿನಂತಿದೆ.

1) ಕಾಮಗಾರಿಯ ವಿವರ: Chittapur Taluka-08 (Indent 9555 & 9556 SC Bidders only) (Indent No. 9558 & 9557 Cat-II (A) Bidders only) (Indent No 9552 Cat-I Bidders only) Indent No 9553, 9554 & 9559, 2) ಟೆಂಡರಿಗಿಟ್ಟ ಮೊತ್ತ: ಕನಿಷ್ಠ ರೂ. **8,20,000/-** ಗರಿಷ್ಠ : **41,00,000/-**, 3) ಲೆಕ್ಕ ಶೀರ್ಷಿಕೆ : 4201-01-102-2-01 Jaldhare, 4) ಗುತ್ತಿಗೆದಾರರ ಅರ್ಹತೆ: 4ನೇ & 3ನೇ ದರ್ಜೆ ಗುತ್ತಿಗೆದಾರರು & ಮೇಲ್ಪಟ್ಟು, 5) ಟೆಂಡರ ಫಾರಂ ಪಡೆಯುವ ದಿನಾಂಕ: **03–09–2025 ರಿಂದ 11–09–2025**, 6) ಟೆಂಡರ ಅರ್ಜಿ ಬೆಲೆ ಮತ್ತು ಇ.ಎಂ.ಡಿ. ಮೊತ್ತ: kppp ಪ್ರಕಾರ, 7) ಟೆಂಡರ ಫಾರಂ ಸಲ್ಲಿಸುವ ಅಂತಿಮ ದಿನಾಂಕ: **11–09–2025 ಸಾಯಂಕಾಲ 4:00 ಗಂಟೆವರೆಗೆ,** 9) ಬಿಡ್ಡ್ ತೆರೆಯುವ ದಿನಾಂಕ: **12–09–2025 ಸಾಯಂಕಾಲ 5:30 ಗಂಟೆವರೆಗೆ,** 9) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ: ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗ, ಪಂಚಾಯತ ರಾಜ್ ಇಂಜಿನೀಯರಿಂಗ್ ವಿಭಾಗ ಮೊದಲನೆ ಮಹಡಿ ಕುಸನೂರ ರೋಡ, ಕಲಬುರಗಿ, 10) ಅಂತರಜಾಲ ತಾಣದ ವಿಳಾಸ: https://kppp.karnataka.gov.in/

**ಸಹಿ/– ಕಾರ್ಯನಿರ್ವಾಹಕ ಅಭಿಯಂತರರು**
**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಕಲಬುರಗಿ**

ವಾ.ಸಾ.ಸಂ.ಇ/ಕಲಬುರಗಿ/461/ಕೆ.ಎಸ್.ಎಂ.ಸಿ.&ಎ/2025–26


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.